ಸಂಪುಟ: ೦೭/ ಸಂಚಿಕೆ: ೧೮೦/ ಶನಿವಾರ ದಿನಾಂಕ : ೦೬-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 180/ SATURDAY Date : 06-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## 18 ಸಾವಿರ ಶಿಕ್ಷಕರ ನೇಮಕ: ಮಧು ಬಂಗಾರಪ್ಪ

**ಬೆಂಗಳೂರು:** ರಾಜ್ಯದಲ್ಲಿ 18 ಸಾವಿರ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆ ವತಿಯಿಂದ ಹಮಿಕೊಂಡಿದ್ದ ಭಾರತರತ್ನ ಡಾ.ಸರ್ವಪಲ್ಲಿ ರಾಧಾಕೃಷ್ಣರವರ ಜನ ದಿನಾಚರಣೆ ಅಂಗವಾಗಿ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ, ರಾಜ್ಯಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಕಲಬುರಗಿ ಭಾಗದಲ್ಲಿ 5 ಸಾವಿರ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಲಾಗಿದೆ. 800 ಕೆಪಿಎಸ್‌ಸಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. 5 ಸಾವಿರ ದ್ವಿಭಾಷಾ ಶಾಲೆಗಳನ್ನು ಮಂಜೂರು ಮಾಡಲಾಗಿದೆ ಎಂದು ಅವರು ತಿಳಿಸಿದರು.

## ಇಂದು ಪದವಿ ಪ್ರಧಾನ

**ಮುಧೋಳ:** ಬಾಗಲಕೋಟೆ ಬಿವಿವಿ. ಸಂಘದ ಸ್ಥಳಿಯ ಬೀಳೂರು ಗುರುಬಸವ ಮಹಾಸ್ವಾಮಿಜಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಾಜಿಯ ಮಹಾವಿದ್ಯಾಲಯದಲ್ಲಿ ಇಂದು 5ನೇ ಪದವಿ ಪ್ರಧಾನ ಸಮಾರಂಭವನ್ನು ಬೆಳಿಗ್ಗೆ 10.ಗಂಟೆಗೆ ಕಾಲೆಜು ಆವರಣದಲ್ಲಿ ಆಯೋಜಿಸ ಲಾಗಿದೆ. ಸಮಾ ರಂಭದ ಮುಖ್ಯ ಅತಿಥಿರಾಗಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ. ವಿಜಯ ಸಂಕೇಶ್ವರ ಹುಬ್ಬಳ್ಳಿ, ಅವರು ಭಾಗವಹಿಸಲಿದ್ದಾರೆ, ಅಧ್ಯಕ್ಷತೆ, ಸಂಘದ ಕಾರ್ಯಾ ಧ್ಯಕ್ಷ ಡಾ. ವೀರಣ್ಣ ಸಿ. ಚರಂತಿಮಠ ವಹಿಸಲಿದ್ದು, ಪ್ರಮುಖರಾದ ಮಹೇಶ ಎನ್. ಅಥಣಿ, ಮಹಾಂತೇಶ ಎಸ್. ಶೆಟ್ಟರ ಉಪಸ್ಥಿತ ಇರುತ್ತಾರೆ. ಇದೇ ಸಂದರ್ಭದಲ್ಲಿ ದಾನಿಗಳು ಕೊಟ್ಟಂತ ಮತ್ತು ಸಂಸ್ಥೆಯಿಂದ ಸ್ಥಾಪಿಸಲ್ಪಟ 13 ಚಿನ್ನದ ಪದಕಗಳನ್ನು ಶೈಕ್ಷಣಿಕ ಶ್ರೇಷ್ಠರಿಗೆ ಪ್ರಧಾನ ಮಾಡಲಾಗುತ್ತದೆ.

# ಇವಿಎಮ್ ಬದಲಿಗೆ ಬ್ಯಾಲೆಟ್ ಮೂಲಕ ಚುನಾವಣೆ

**ಬೆಂಗಳೂರು:** ಇವಿಎಂ ಬದಲಿಗೆ ಬ್ಯಾಲೆಟ್ ಮೂಲಕ ಚುನಾವಣೆ ಮಾಡಬೇಕು ಎನ್ನುವುದು ನಮ್ಮ ಉದ್ದೇಶವಾಗಿದೆ. ನಮ್ಮ ಅನುಭವದ ಮೇಲೆ ನಾವು ಈ ತೀರ್ಮಾನ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸೌಧದಲ್ಲಿ ಶುಕ್ರವಾರ ಮಾಧ್ಯಮದ ವರೊಂದಿಗೆ ಮಾತನಾಡಿದ ಅವರು, ಅನೇಕ ದೇಶಗಳು ಇವಿಎಂ ಬಳಸಿ ಪುನಃ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ಮಾಡುತ್ತಿದ್ದಾರೆ ಎಂದರು.

ಧರ್ಮಸ್ಥಳ ಪ್ರಕರಣವನ್ನು ಎನ್‌ಐಎಗೆ ವಹಿಸಬೇಕೆಂದು ಸ್ವಾಮೀಜಿಗಳು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ದೂರು ನೀಡಿದ್ದಾರೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಮಾಡಿದ್ದು ಅವರೂ ಪೋಲೀಸರೇ ಎಂದು ತಿಳಿಸಿದರು.

**ರೈತರಿಗೆ ಉತ್ತಮ ಪರಿಹಾರ ನೀಡಿದ್ದೇವೆ:** ಜಿಬಿಐಟಿ ವಿಚಾರವಾಗಿ ರೈತರ ವಿರುದ್ಧ ನೀವು ಜೋರು ಧ್ವನಿಯಲ್ಲಿ ಮಾತನಾಡಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ನಮ್ಮ ಜನ. ನಮ್ಮ ರೈತರು. ನಮ್ಮ ಊರಿನವರು. ನನಗೆ ಹಕ್ಕಿದೆ. ಅವರು ಯಾವ ಪಕ್ಷದವರು, ಯಾವ ಬಾವುಟ ಹಾಕಿದ್ದರು ಎಂದು ನನಗೆ ಗೊತ್ತಿದೆ. ಈ ಯೋಜನೆಗೆ ಶೇ.82ರಷ್ಟು ರೈತರು ತಮ್ಮ ಜಮೀನು ನೀಡಲು ಒಪ್ಪಿಗೆ



ಸೂಚಿಸಿದ್ದಾರೆ. ಉಳಿದ ಶೇ.18ರಷ್ಟು ರೈತರು ಮಾತ್ರ ವಿರೋಧ ಮಾಡುತ್ತಿದ್ದಾರೆ. ನಮ್ಮ ರೈತರಿಗೆ ಅತ್ಯುತ್ತಮ ಪರಿಹಾರವನ್ನು ನೀಡಿದ್ದೇನೆ. ನಾನು ಇಡೀ ರಾಜ್ಯವನ್ನು ಗಮನದಲ್ಲಿಟ್ಟುಕೊಂಡು ಈ ಪರಿಹಾರ ರೂಪಿಸಬೇಕು. ಹೀಗಾಗಿ ಇದಕ್ಕಿಂತ ಹೆಚ್ಚಿನ ಹಣ ನೀಡಲು ಸಾಧ್ಯವಿಲ್ಲ. ಈ ಯೋಜನೆ ಬೇಡವಾಗಿದ್ದರೆ ಕುಮಾರಸ್ವಾಮಿ ಹಾಗೂ ಯಡಿಯೂರಪ್ಪ ಅವರೇ ತಮ್ಮ ಸರ್ಕಾರದಲ್ಲಿ ಡಿನೋಟಿಫಿಕೇಷನ್ ಮಾಡಬಹುದಿತ್ತಲ್ಲವೇ. ಈ ಯೋಜನೆ ನೋಟಿಫಿಕೇಶನ್ ಮಾಡಿದ್ದು ನಾನಲ್ಲ, ಅವರು. ಸುಪ್ರೀಂ ಕೋರ್ಟಿನಲ್ಲಿ ಅಂತಿಮ ತೀರ್ಮಾನವಾಗುವವರೆಗೂ ನಾವು ಡಿನೋಟಿಫಿಕೇಷನ್ ಮಾಡಲು ಆಗುವುದಿಲ್ಲ. ಅವರು ಕೋರ್ಟ್‌ನಿಂದ ಏನಾದರೂ ಮಾಡಿಕೊಂಡು ಬರಲಿ ಎಂದರು.

**ಎಲ್ಲಾ ಪಕ್ಷದವರ ಮೇಲಿನ ಪ್ರಕರಣ ರದ್ದುಗೊಳಿಸಿದ್ದೇವೆ:** ತಮ್ಮ ಬೆಂಬಲಿಗರ ಮೇಲಿನ ಕೇಸ್ ರದ್ದುಗೊಳಿಸುವ ತೀರ್ಮಾನದ ಬಗ್ಗೆ ಪ್ರತಿಕ್ರಿಯಿಸುತ್ತಾ, ನಾವು

### ಮತಪತ್ರ ಬಳಸಿದರೆ ಬಿಜೆಪಿಗೇಕೆ ಗಾಬರಿ



ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಮತಪತ್ರ ಬಳಸಲು ರಾಜ್ಯ ಸರ್ಕಾರ ತೀರ್ಮಾನಿಸಿದರೆ ಬಿಜೆಪಿ ಏಕೆ ಗಾಬರಿಯಾಗಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು. ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, ಇದು ಕರ್ನಾಟಕ ಸರ್ಕಾರದ ತೀರ್ಮಾನ. ಇದರಿಂದ ಬಿಜೆಪಿಗೆ ಆತಂಕವೇಕೆ? ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ಅವಕಾಶವಿದೆ. ಬಿಜೆಪಿ ಅವಧಿಯಲ್ಲಿ ಮಾಡಿರುವ ಕಾನೂನು ಇದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸಲು ನಾವು ತೀರ್ಮಾನಿಸಿದ್ದೇವೆ. ಈ ತೀರ್ಮಾನದಿಂದ ನಿಮಗೆ ಗಾಬರಿ ಯಾಕೆ ಕಳ್ಳನ ಮನಸ್ಸು ಹುಳ್ಳಗೆ ಎಂಬಂತೆ ಯಾಕೆ ವರ್ತಿಸುತ್ತಿದ್ದೀರಿ. ನಾವು ಲೋಕಸಭೆ ಚುನಾವಣೆಗಳನ್ನು ಪರಿಶೀಲನೆ ಮಾಡಿದ್ದೇವೆ. ಸಹಕಾರಿ ಸಂಘಗಳಿಗೆ ಚುನಾವಣೆ ನಡೆಸುವಂತೆ ಸ್ಥಳೀಯ ಸಂಸ್ಥೆ ಚುನಾವಣೆ ಮಾಡುತ್ತಿದ್ದೇವೆ. ಕೇಂದ್ರ ಚುನಾವಣಾ ಆಯೋಗ ಅವರ ತೀರ್ಮಾನದಂತೆ ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳ ಚುನಾವಣೆ ನಡೆಸಲಿದೆ ಎಂದು ತಿಳಿಸಿದರು.

ಬಿಜೆಪಿ ಹಾಗೂ ಕಾಂಗ್ರೆಸಿಗರ ಮೇಲಿದ್ದ ಅನೇಕ ಕೇಸ್ ರದ್ದುಗೊಳಿಸಿದ್ದೇವೆ. ಬಿಜೆಪಿ ಸರ್ಕಾರ ನಮ್ಮ ಬೆಂಬಲಿಗರ ಮೇಲೆ ಬಲವಂತವಾಗಿ ಹಾಕಿದ್ದ ಪ್ರಕರಣಗಳನ್ನು ರದ್ದುಗೊಳಿಸಿದ್ದೇವೆ. ಕೋವಿಡ್ ಸಮಯದಲ್ಲಿ ನನ್ನ ಹಾಗೂ ಸಿಎಂ ವಿರುದ್ಧ ಕೇಸ್ ಹಾಕಿದ್ದರು. ರಾಜ್ಯ, ರೈತರು, ಭಾಷೆಗಾಗಿ ಪ್ರತಿಭಟನೆ ಮಾಡಿದವರ ಮೇಲೆ ಹಾಕಿರುವ ಕೇಸ್ ಹಿಂಪಡೆದಿದ್ದೇವೆ. ನಾನು ಬಂಧನವಾಗಿದ್ದ ಇ.ಡಿ ಪ್ರಕರಣ ವಜಾಗೊಂಡಿದೆ. ನನಗೆ ಆಗಿರುವ ಅನ್ಯಾಯ ಸರಿ ಮಾಡುವವರು ಯಾರು ನಾನು ಜೈಲಿಂದ ಬಿಡುಗಡೆಯಾದ ಬಳಿಕ ಭವ್ಯ ಸ್ವಾಗತ ಸಿಕ್ಕಿತು ಎಂದು ಬಹಳ ದೊಡ್ಡ ಚಿಂತಕರು, ಭಾಷಣಕಾರರು ಮಾತನಾಡಿದ್ದರಲ್ಲ, ನನ್ನ ಪ್ರಕರಣ ವಜಾಗೊಳಿಸಿದ ನಂತರ ಏಕೆ ಅಭಿನಂದಿಸಲಿಲ್ಲ ಈ ವಿಚಾರವಾಗಿ ಹೆಚ್ಚಿನ ಚರ್ಚೆ ಬೇಡ. ನಾವು ರೈತ ಸಂಘ, ಬಿಜೆಪಿ, ಚಳವಳಿಗಾರರ ಮನವಿಯನ್ನು ಸ್ವೀಕರಿಸಿ ಎಲ್ಲಾ ಪಕ್ಷದವರ ಮೇಲಿದ್ದ ಕೇಸ್ ರದ್ದುಗೊಳಿಸಿದ್ದೇವೆ ಎಂದರು.

# ಜಿಎಸ್‌ಟಿ ವ್ಯವಸ್ಥೆ ಸುಧಾರಣೆ ನಮ್ಮ ಸರಕಾರ ಸ್ವಾಗತಿಸುತ್ತದೆ

**ಬೆಂಗಳೂರು:** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಸುಧಾರಣೆಯಿಂದಾಗಿ ರಾಜ್ಯ ಸರಕಾರ ವಾರ್ಷಿಕ 15 ರಿಂದ 20 ಸಾವಿರ ಕೋಟಿ ರೂ.ಗಳಷ್ಟು ವರಮಾನವನ್ನು ಕಳೆದುಕೊಳ್ಳಲಿದೆ. ಹೀಗಿದ್ದರೂ ರಾಜ್ಯದ ಜನರ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ನಮ್ಮ ಸರಕಾರ ಜಿ.ಎಸ್.ಟಿ ವ್ಯವಸ್ಥೆಯಲ್ಲಿ ಸುಧಾರಣೆ ತರುವ ನಿರ್ಧಾರವನ್ನು ಸ್ವಾಗತಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಶುಕ್ರವಾರ ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಇದೇ ಸಂದರ್ಭದಲ್ಲಿ ಕೇಂದ್ರ ಸರಕಾರ ಈಗಲೂ ಸಂಗ್ರಹಿಸುತ್ತಿರುವ ಜಿ.ಎಸ್.ಟಿ ಪರಿಹಾರ ಸುಂಕದಲ್ಲಿ ನ್ಯಾಯಬದ್ಧ ಪಾಲನ್ನು ರಾಜ್ಯಕ್ಕೆ ನೀಡಬೇಕೆಂದು ಆಗ್ರಹಿಸುತ್ತಿದ್ದೇನೆ ಎಂದು ಹೇಳಿದ್ದಾರೆ.

ತೆರಿಗೆದಾರ ಜನತೆ ಮತ್ತು ವ್ಯಾಪಾರಿ ವರ್ಗದ ಮೇಲಿನ ಆರ್ಥಿಕ ಭಾರ ಮತ್ತು ಅನುಷ್ಠಾನದ ಜಂಜಾಟವನ್ನು ತಗ್ಗಿಸಲು ಅತ್ಯಗತ್ಯವಾಗಿದ್ದ ತೆರಿಗೆ ಸುಧಾರಣೆಯನ್ನು ಜಾರಿಗೆ ತರುವ ಸರಕು ಸೇವಾ ತೆರಿಗೆ (ಜಿಎಸ್‌ಟಿ) ಮಂಡಳಿಯ ನಿರ್ಧಾರವನ್ನು ನಾವು ಸ್ವಾಗತಿಸುತ್ತೇವೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ಇದು ನರೇಂದ್ರ ಮೋದಿ ಸರಕಾರದ ಹೊಸ ಅವಿಷ್ಕಾರವೇನಲ್ಲ. ಅತ್ಯಂತ ಅವಸರದಲ್ಲಿ ಎನ್‌ಡಿಎ ಸರಕಾರ 2017ರಲ್ಲಿ ದೋಷಪೂರ್ಣ ಜಿ.ಎಸ್.ಟಿಯನ್ನು ಜಾರಿಗೊಳಿಸಿದಾಗಲೆ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ವಿರೋಧ ಪಕ್ಷಗಳ ನಾಯಕರು ಜಿ.ಎಸ್.ಟಿ ಗೆ ಮಾಡಲೇಬೇಕಾಗಿದ್ದ ಸುಧಾರಣೆಗಾಗಿ ಒತ್ತಾಯಿಸಿದ್ದರು ಎಂದು ಅವರು ಹೇಳಿದ್ದಾರೆ. ಗಬ್ಬರ್ ಸಿಂಗ್ ತೆರಿಗೆ' ದೇಶದ ಸಣ್ಣ ವ್ಯಾಪಾರಿಗಳ ಸರ್ವನಾಶ ಮಾಡಲಿದೆ. ತೆರಿಗೆ ಪಾವತಿ ವ್ಯವಸ್ಥೆಯ ಸಂಕೀರ್ಣತೆ ಮತ್ತು ವೆಚ್ಚದ ಹೊರೆ ಅವರ ಬದುಕನ್ನು ಸರಣಿ ಕಷ್ಟಗಳ ಸರಮಾಲೆಗೆ ಸಿಲುಕಿಸಲಿದೆ ಎಂದು ಕಳೆದ ಎಂಟು ವರ್ಷಗಳಿಂದ ನಾವು ಹೇಳುತ್ತಲೆ ಬಂದಿದ್ದೆವು. ಆದರೆ ನರೇಂದ್ರ ಮೋದಿ ನಮ್ಮ ಮಾತಿಗೆ ಕಿವಿಗೊಡದೆ ನಿರ್ಲಕ್ಷಿಸುತ್ತಲೆ ಬಂದಿದ್ದರು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

# ಶಿಕ್ಷಕ ವೃತ್ತಿ ಅತ್ಯಂತ ಪವಿತ್ರ: ಸಚಿವ ಮಂಕಾಳ ವೈದ್ಯ

**ಕಾರವಾರ:** ಶಿಕ್ಷಕರ ವೃತ್ತಿಯು ಅತ್ಯಂತ ಪವಿತ್ರವಾದುದು. ಈ ಸಮಾಜದಲ್ಲಿ ಎಲ್ಲರಿಗೂ ದೊರೆಯದ ಈ ಸೇವಾ ವೃತ್ತಿ ಶಿಕ್ಷಕಕರಿಗೆ ಮಾತ್ರ ಲಭಿಸಿದೆ ಎಂದು ಬಂದರು, ಮೀನುಗಾರಿಕೆ, ಒಳನಾಡು ಜಲ ಸಾರಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ್ ವೈದ್ಯ ಹೇಳಿದರು.

ಅವರು ಶುಕ್ರವಾರ ಕುಮಟಾದಲ್ಲಿ ನಡೆದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಒಬ್ಬ ವ್ಯಕ್ತಿ ಸಮಾಜದಲ್ಲಿ ಉತ್ತಮ ನಾಗರೀಕನಾಗಿದ್ದಾನೆ ಎಂದರೆ ಅದಕ್ಕೆ ಕಾರಣ ಆತನಿಗೆ ಶಿಕ್ಷಣ ನೀಡಿದ ಶಿಕ್ಷಕರೇ ಆಗಿರುತ್ತಾರೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ದೇಶವನ್ನು ನಿರ್ಮಿಸುವ ಶಿಲ್ಪಿಗಳಾಗಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ದಿನಕರ ಶೆಟ್ಟಿ ಮಾತನಾಡಿ, ಶಿಕ್ಷಕರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಶಿಕ್ಷಣ



ಸಚಿವರ ಗಮನ ಸೆಳೆಯಲಾಗುವುದು ಎಂದರು. ಕಾರವಾರ ಹಾಗೂ ಶಿರಸಿ ಶೈಕ್ಷಣಿಕ ಜಿಲ್ಲೆಗಳು ಕಳೆದ ಎರಡು ವರ್ಷಗಳಲ್ಲಿ ಉತ್ತಮ ಶೈಕ್ಷಣಿಕ ಪ್ರಗತಿ ಸಾಧಿಸುತ್ತಿವೆ. ಮಕ್ಕಳಲ್ಲಿ ಉತ್ತಮ ಚಾರಿತ್ರ್ಯ ನಿರ್ಮಾಣ ಕಾರ್ಯ ಶಿಕ್ಷಕರಿಂದಲೇ ಆರಂಭವಾಗಲಿದ್ದು, ಪುಸ್ತಕದ ಆಚೆಯ ಜ್ಞಾನದ ಬಗ್ಗೆ ಮಕ್ಕಳನ್ನು ಅಣಿಗೊಳಿಸುವ ಜವಾಬ್ದಾರಿ ಶಿಕ್ಷರ ಮೇಲಿದೆ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮಿ ಪ್ರೀಯಾ ಹೇಳಿದರು.

ಉತ್ತಮ ಪ್ರಶಸ್ತಿ ಪುರಸ್ಕೃತ ಶಿಕ್ಷಕರನ್ನು ಹಾಗೂ ಅಧಿಕಾರಿಗಳನ್ನು ಗೌರವಿಸಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್, ಶಿಕ್ಷಣ ಇಲಾಖೆಯ ನಿರ್ದೇಶಕ ಈಶ್ವರ ನಾಯ್ಕ, ಡಯಟ್ ಪ್ರಾಚಾರ್ಯ ಎನ್. ಅರ್. ಹೆಗಡೆ, ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಆನಂದ ಗಾಂವಕರ್, ಶಿಕ್ಷಕರ ಸಂಘದ ಪದಾಧಿಕಾರಿಗಳು ಮತ್ತಿತರರು ಇದ್ದರು. ಡಿ. ಡಿ. ಪಿ. ಐ. ಲತಾ ನಾಯಕ ಸ್ವಾಗತಿಸಿದರು. ಬಿ. ಇ. ಒ ಉದಯ ನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿದರು.

# 60 ಕ್ರಿಮಿನಲ್ ಕೇಸ್ ವಾಪಸ್ ಪಡೆಯಲು ನಿರ್ಧಾರ

**ಬೆಂಗಳೂರು:** ಹಿಂದೂ ಕಾರ್ಯಕರ್ತರ ಸುಳಿವಿನ ಮೇರೆಗೆ ಸಾಗಿಸುತ್ತಿದ್ದ ದನಗಳ ತಲೆಗಳನ್ನು ಪೊಲೀಸರು ವಶಪಡಿಸಿಕೊಂಡ ನಂತರ ಚಿತ್ತಾಪುರ ಘಟನೆ ನಡೆದಿದೆ ಎನ್ನಲಾಗಿದೆ.

2012ರಲ್ಲಿ ಡಾ. ಬಿಆರ್ ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಕಾರ್ಯಕ್ರಮದಿಂದ ತಮ್ಮ ನಾಯಕರನ್ನು (ಆಗ ಸಂಸದರಾಗಿದ್ದ) ಹೊರಗಿಟ್ಟಿದ್ದನ್ನು ಪ್ರತಿಭಟಿಸಿ, ಬೆಂಗಳೂರು ಗ್ರಾಮಾಂತರದ ಮಾಜಿ ಸಂಸದ ಡಿಕೆ ಸುರೇಶ್ ಅವರ ಬೆಂಬಲಿಗರ ವಿರುದ್ಧದ ಪ್ರಕರಣಗಳನ್ನು ಸಹ ಹಿಂಪಡೆಯಲಾಗಿದೆ ಎಂದು ಮೂಲಗಳು ತಿಳಿಸಿವೆ. ಹಿಂತೆಗೆದುಕೊಳ್ಳಲಾದ ಪ್ರಕರಣಗಳಲ್ಲಿ ರೈತ ಪರ, ದಲಿತ ಪರ, ಕನ್ನಡ ಪರ ಸಂಘಟನೆಗಳು, ರಾಜಕೀಯ ಪಕ್ಷದ ಕಾರ್ಯಕರ್ತರು ಸೇರಿದಂತೆ ವಿವಿಧ ಗುಂಪುಗಳು ಮತ್ತು ವ್ಯಕ್ತಿಗಳ ವಿರುದ್ಧದ ಪ್ರಕರಣಗಳು ಮತ್ತು ವಿವಿಧ ಸ್ಥಳಗಳಲ್ಲಿ ಗಣೇಶ ಮೆರವಣಿಗೆಗೆ ಸಂಬಂಧಿಸಿದ ಗಲಭೆಗಳಿಗೆ ಸಂಬಂಧಿಸಿದಂತೆ ಪ್ರಕರಣಗಳು ಸೇರಿವೆ.

ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ವಿವಿಧ ಸಾರ್ವಜನಿಕ ಪ್ರತಿನಿಧಿಗಳು ಮತ್ತು ಸಾರ್ವಜನಿಕರಿಂದ ಬಂದ ಮನವಿಗಳ ಆಧಾರದ ಮೇಲೆ, ಗೃಹ ಇಲಾಖೆಯು ಅನುಮೋದನೆಗಾಗಿ ಸಚಿವ ಸಂಪುಟದ ಮುಂದೆ ಇಟ್ಟಿತ್ತು. ಪ್ರತಿಯೊಂದು ಪ್ರಕರಣದಲ್ಲಿಯೂ ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು, ಪ್ರಾಸಿಕ್ಯೂಷನ್‌ಗಳು ಮತ್ತು ಸರ್ಕಾರಿ ಮೊಕದ್ದಮೆಗಳ ನಿರ್ದೇಶಕರು ಮತ್ತು ಕಾನೂನು ಇಲಾಖೆಯ ಅಭಿಪ್ರಾಯಗಳನ್ನು ಪ್ರತ್ಯೇಕವಾಗಿ ಪಡೆಯಲಾಗುತ್ತದೆ. ನಂತರ, ಸರ್ಕಾರ ರಚಿಸಿದ ಸಚಿವ ಸಂಪುಟ ಉಪಸಮಿತಿಯ ಮುಂದೆ ಇದನ್ನು ಇಡಲಾಗುತ್ತದೆ. ಸಂಪುಟ ಉಪಸಮಿತಿಯಲ್ಲಿ ಸೂಕ್ತವೆಂದು ನಿರ್ಧರಿಸಲಾದ ಪ್ರಕರಣಗಳನ್ನು ಅಂತಿಮವಾಗಿ ಸಂಪುಟದ ಮುಂದೆ ಇಡಲಾಗುತ್ತದೆ ಎಂದು ಅಧಿಕಾರಿಯೊಬ್ಬರು ಪ್ರಕ್ರಿಯೆಯನ್ನು ವಿವರಿಸುತ್ತಾ ಹೇಳಿದರು.

# ಬುರುಡೆ ಪ್ರಕರಣ: ವಿಚಾರಣೆ ನಡೆಸಿ ಮಾಹಿತಿ ಪಡೆದ ಎಸ್‌ಐಟಿ

**ಬೆಳ್ತಂಗಡಿ:** ಬುರುಡೆ ಪ್ರಕರಣ ಸಂಬಂಧ ಹೋರಾಟಗಾರ ಜಯಂತ್ ಟಿ ಅವರನ್ನು ಎಸ್‌ಐಟಿ ಇಂದು ಬೆಳಗಿನ ಜಾವದವರೆಗೂ ವಿಚಾರಣೆ ನಡೆಸಿ, ಹಲವು ಮಾಹಿತಿಗಳನ್ನು ಪಡೆದುಕೊಂಡಿದೆ.

ನಿನ್ನೆ ಸಂಜೆ ವಿಚಾರಣೆಗೆ ಜಯಂತ್ ಒಂದು ಬ್ಯಾಗ್ ಜೊತೆ ಬೆಳ್ತಂಗಡಿಯ ಎಸ್‌ಐಟಿ ಕಚೇರಿಗೆ ಹಾಜರಾದರು. ಎಸ್‌ಐಟಿ ಅಧಿಕಾರಿಗಳು ಇಂದು ಬೆಳಗಿನ ಜಾವ 2.30ರವರೆಗೂ ವಿಚಾರಣೆ ಮಾಡಿ, ಮತ್ತೆ ಕರೆದಾಗ ವಿಚಾರಣೆಗೆ ಹಾಜರಾಗಬೇಕೆಂದು ಸೂಚಿಸಿ ವಾಪಸ್ ಕಳುಹಿಸಿದ್ದಾರೆ.

ಬೆಂಗಳೂರಿನ ಬಗಲಗುಂಟೆ ಪೊಲೀಸ್ ಠಾಣೆ ವ್ಯಾಪ್ತಿಯ ಮಲ್ಲಸಂದ್ರದ ಬಾಡಿಗೆ ಮನೆಯಲ್ಲಿ ವಾಸವಿರುವ ಜಯಂತ್ ಮನೆಯಲ್ಲಿ ಎಸ್‌ಐಟಿ ಇತ್ತೀಚೆಗೆ ಮಹಜರು ನಡೆಸಿ ಅವರ ಕುಟುಂಬ ಸದಸ್ಯರ ಮೊಬೈಲ್‌ಗಳನ್ನು ವಶಕ್ಕೆ ಪಡೆದಿದೆ. ಆ ಸಂದರ್ಭದಲ್ಲಿ ಜಯಂತ್ ಮನೆಯಲ್ಲಿರಲಿಲ್ಲ. ಬುರುಡೆ ಚಿನ್ನಯ್ಯ ಮಲ್ಲಸಂದ್ರದ ಜಯಂತ್ ಟಿ ಅವರ ಮನೆಯಲ್ಲಿ ಎರಡು ದಿನ ಬುರುಡೆ ಜೊತೆ ತಂಗಿದ್ದನೆಂಬ ಮಾಹಿತಿ ಮೇರೆಗೆ ಅವರ ಮನೆ ಮಹಜರು ನಡೆಸಲಾಯಿತು. ಮಾರನೇ ದಿನ ವಿದ್ಯಾರಣ್ಯಪುರದ ತಿಂಡ್ಲು ಸರ್ಕಲ್‌ನಲ್ಲಿರುವ ಸರ್ವೀಸ್ ರಸ್ತೆಯ ಅಪಾರ್ಟ್‌ಮೆಂಟ್‌ನಲ್ಲಿ ತಂಗಿದ್ದಾಗಿ ಚಿನ್ನಯ್ಯ ಹೇಳಿದ್ದರಿಂದ ಆ ಅಪಾರ್ಟ್‌ಮೆಂಟ್‌ನಲ್ಲೂ ಸಹ ಎಸ್‌ಐಟಿ ಮಹಜರು ನಡೆಸಿ ಅಲ್ಲಿನ ಸಿಬ್ಬಂದಿಯನ್ನು ವಿಚಾರಣೆ ಮಾಡಿ ಮಾಹಿತಿಯನ್ನು ಪಡೆದುಕೊಂಡಿದೆ. ಜಯಂತ್ ಟಿ ಅವರನ್ನು ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ಸೂಚಿಸಿದ್ದರಿಂದ ಬ್ಯಾಗ್‌ನಲ್ಲಿ ಕೆಲವೊಂದು ದಾಖಲಾತಿಗಳನ್ನು ಇಟ್ಟುಕೊಂಡು ವಿಚಾರಣೆಗೆ ಹಾಜರಾಗಿದ್ದರು.

# ಒಳಮೀಸಲಾತಿ ಹೊಸದಾಗಿ ನೇಮಕಾತಿ ಅಧಿಸೂಚನೆ

**ಬೆಂಗಳೂರು:** ಸೆ.4ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ಮಂಡಳಿ/ನಿಗಮ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಹೊರಡಿಸಿದ ಅಧಿಸೂಚನೆಗಳನ್ನು ರದ್ದುಗೊಳಿಸಿ ಸರಕಾರ ಆದೇಶ ಹೊರಡಿಸಿದೆ. ಪರಿಶಿಷ್ಟ ಜಾತಿ ಒಳಮೀಸಲಾತಿಯನ್ನು ಅಳವಡಿಸಿಕೊಂಡು ಕಾಲಬದ್ಧವಾಗಿ (Time Bound) ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸುವಂತೆ ಸೂಚಿಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸುತ್ತೋಲೆ ಹೊರಡಿಸಿದೆ. ದಿನಾಂಕ: 28.10.2024ರ ಹಿಂದೆ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿ, ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ಮಂಡಳಿ/ನಿಗಮ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಯಾವುದಾದರೂ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಅಂತಹ ಎಲ್ಲಾ ಅಂತಹ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನೂ ಸಹ ರದ್ದುಗೊಳಿಸಿ, ಪರಿಶಿಷ್ಟ ಜಾತಿ ಒಳ ಮೀಸಲಾತಿಯನ್ನು ಅಳವಡಿಸಿಕೊಂಡು ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸಬೇಕೆಂದೂ ಸಹ ಹಾಗು ಕಾಲಬದ್ಧವಾಗಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಆಯ್ಕೆ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

# ಸಮಾಜದಲ್ಲಿ ಶಿಕ್ಷಕರ ಪಾತ್ರ ದೊಡ್ಡದು: ಸಂಸದ ರಮೇಶ ಜಿಗಜಿಣಗಿ

**ವಿಜಯಪುರ:** ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರ ಪಾತ್ರ ಸಮಾಜದಲ್ಲಿ ಮಹತ್ವದ್ದಾಗಿದ್ದು, ಶಿಕ್ಷಕರಿಗೆ ಸಮಾಜದಲ್ಲಿ ಬಹಳ ಗೌರವದ ಸ್ಥಾನವಿದ್ದು, ಶಿಕ್ಷಕರು ನಿರ್ವಹಿಸುವ ಕಾರ್ಯ ಅನನ್ಯವಾಗಿದೆ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯ ಹಾಗೂ ನಗರ ವಲಯ ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರ ಸಹಯೋಗದಲ್ಲಿ ಶುಕ್ರವಾರದಂದು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವದ ಬೆಳವಣಿಗೆಗೆ ಪೂರಕವಾಗಿ ಪಾಠ ಬೋಧನೆ ಮಾಡುವ ಮೂಲಕ ಮುಂದಿನ ಉತ್ತಮ ನಾಗರಿಕರನ್ನಾಗಿ ರೂಪಿಸುವ ಬಹು ದೊಡ್ಡ ಜವಾಬ್ದಾರಿ ಶಿಕ್ಷಕರ ಮೇಲಿದೆ. ಕಲ್ಲಿನ ಮೂರ್ತಿಯನ್ನು ಶಿಲೆಯನ್ನಾಗಿಸುವಂತೆ ಅಮೂರ್ತ ರೂಪದ ಮಕ್ಕಳನ್ನು ಮೂರ್ತರೂಪ ಕೊಡುವ ಮಕ್ಕಳ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ಶಿಕ್ಷಕರ ಮೇಲಿದೆ. ಮಕ್ಕಳ ಅಂತರಾಳವನ್ನು ಅರಿತು, ಪರಿಣಾಮಕಾರಿಯಾಗಿ ಬೋಧನೆ ಮಾಡುವ ಮೂಲಕ ಮಕ್ಕಳು ಸುಂದರ ವ್ಯಕ್ತಿತ್ವ ರೂಪಿಸಿಕೊಳ್ಳುವ ಜವಾಬ್ದಾರಿ ನಿಭಾಯಿಸುವ ಶಿಕ್ಷಕರ ಸ್ಥಾನ ಗೌರವಕ್ಕೆ ಭಾಜನವಾಗಿದ್ದು, ಶಿಕ್ಷಕ ಓರ್ವ ವ್ಯಕ್ತಿ ಅಲ್ಲ ಅದೊಂದು ಶಕ್ತಿಯಾಗಿದ್ದು, ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ನಾಗಠಾಣ ಶಾಸಕ ವಿಠಲ ಕಟಕಧೋಂಡ ಅವರು ಮಾತನಾಡಿ, ಜ್ಞಾನದ ದೀವಿಗೆ ಬೆಳಗುವ ಶಿಕ್ಷಕ ಜ್ಞಾನಯೋಗಿ,



ದಾರ್ಶನಿಕ, ಶಿಕ್ಷಕ, ಲೇಖಕ ಮತ್ತು ರಾಜಕಾರಣಿಯಾಗಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ನೀಡಿದ ಕೊಡುಗೆ ಅಪಾರವಾಗಿದೆ. ವ್ಯಕ್ತಿಯ ಜೀವನ ಹಾಗೂ ಭವ್ಯ ಭವಿತವ್ಯವನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅಪಾರವಾಗಿದ್ದು, ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಅರಿತು ಕರ್ತವ್ಯ ನಿಷ್ಠೆಯ ಪರಿಪಾಲನೆಯೊಂದಿಗೆ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಪಾಠ ಬೋಧನೆ ಮಾಡಿ, ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸಬೇಕು. ತಂದೆ ತಾಯಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿದರೆ, ಶಿಕ್ಷಕ ಶಿಕ್ಷಣದ ಮೂಲಕ ನೀರೆರೆದು ಪೋಷಿಸಿ ಅವರ ಸರ್ವಾಂಗೀಣ ವ್ಯಕ್ತಿತ್ವ ನಿರ್ಮಾಣಕ್ಕಾಗಿ ಶ್ರಮಿಸುವ ಸಾಕಾರಮೂರ್ತಿಯಾಗಿದ್ದಾರೆ ಎಂದರು. ನೈತಿಕ ಮೌಲ್ಯಗಳನ್ನು ತಿಳಿಸುವುದರೊಂದಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಈ ಸಮಾಜದ ರಕ್ಷಣೆ ಮಾಡುವ ಕಾರ್ಯ ನಿರ್ವಹಿಸುವ ಶಿಕ್ಷಕರದ್ದು ಅನುಪಮ ಕಾರ್ಯವಾಗಿದೆ. ಸದೃಢ ಹಾಗೂ ಸಶಕ್ತ ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಕಾರ್ಯ ಮಹತ್ವದ್ದಾಗಿದೆ. ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ಸುಭದ್ರ ಶಿಕ್ಷಣ ನೀಡುವ ಮೂಲಕ ಮಾದರಿ ಹಾಗೂ ಶ್ರೇಷ್ಠ ವ್ಯಕ್ತಿಗಳನ್ನಾಗಿ ನಿರ್ಮಾಣ ಮಾಡಿ ಆದರ್ಶ ಶಿಕ್ಷಕರಾಗಿ ಎಂದು ಹೇಳಿದರು.ಸರ್ಕಾರ ಶಿಕ್ಷಣ ಕ್ಷೇತ್ರಕ್ಕಾಗಿ ಸಾಕಷ್ಟು ಅನುದಾನ ಮೀಸಲಿರಿಸಿ, ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಉತ್ತಮ ಶಿಕ್ಷಣ ಪಡೆದುಕೊಳ್ಳಲು ಇದರಿಂದ ಮಕ್ಕಳಿಗೆ ಅನುಕೂಲ ಒದಗಿಸಿದೆ. ಮಕ್ಕಳನ್ನು ಸತ್ಪ್ರಜೆಯಾಗಿ ರೂಪುಗೊಳ್ಳಲು ಶಿಕ್ಷಕ ತನ್ನ ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಎಂದು ಹೇಳಿದರು.

ಧಾರವಾಡ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಅವರು ಮಾತನಾಡಿ, ಇದು ಶಿಕ್ಷಕರಿಗೆ ಮಹತ್ವದ ದಿನವಾಗಿದೆ. ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಕಟಿಬದ್ಧರಾಗಿ ಶ್ರಮಿಸಿ,ಗುರುವಿನ ಸ್ಥಾನ ಬಹುದೊಡ್ಡದು,ಮಕ್ಕಳ ಬದುಕನ್ನು ಬಂಗಾರವಾಗಿಸುವ ಕಾರ್ಯ ಮಾಡಿ ಮಕ್ಕಳ ಸರ್ವೋತೋಮುಖ ಏಳಿಗೆಗಾಗಿ ಶ್ರಮಿಸಿ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ದೇಶದ ಭವಿಷ್ಯ ಮಕ್ಕಳಾಗಿದ್ದಾರೆ. ಅಂತಹ ಮಕ್ಕಳ ಭವ್ಯ ಭವಿಷ್ಯವನ್ನು ರೂಪಿಸಿ ಸುಭದ್ರ ದೇಶ ನಿರ್ಮಾಣಕ್ಕೆ ಶಿಕ್ಷಕರ ಕೊಡುಗೆ ಬಹುಮುಖ್ಯವಾಗಿದ್ದು, ಮಕ್ಕಳಿಗೆ ಶಿಕ್ಷಕರು ತತ್ವಜ್ಞಾನಿಯಾಗಿ ಮಾರ್ಗದರ್ಶಕರಾಗಿ ಅವರ ಸುಂದರ ಕನಸಿಗೆ ಪ್ರೇರಣಾದಾಯಕವಾಗಿ ಪ್ರೋತ್ಸಾಹಿಸಬೇಕು. ಗುಣಾತ್ಮಕ ಶಿಕ್ಷಣ ನೀಡುವಲ್ಲಿ ಆಸ್ಥೆ ವಹಿಸಿ, ನಿಯಮಿತವಾಗಿ ವೇಳಾಪಟ್ಟಿ ಹಮ್ಮಿಕೊಂಡು ಮಕ್ಕಳ ಸರ್ವೋತೋಮುಖ ವ್ಯಕ್ತಿತ್ವದ ಬೆಳವಣಿಗೆಗೆ ಜವಾಬ್ದಾರಿಯುತವಾಗಿ ಹಾಗೂ ಅತ್ಯಂತ ಕಾಳಜಿ ಪೂರ್ವಕವಾಗಿ ಇನ್ನೂ ಉತ್ತಮವಾಗಿ ಕಾರ್ಯ ನಿರ್ವಹಿಸಬೇಕು. ಮಕ್ಕಳಿಗೆ ನಿರಂತರ ಪರಿಹಾರ ಬೋಧನೆ ಮಾಡಬೇಕು. ಮಕ್ಕಳಲ್ಲಿ ಆತ್ಮ ವಿಶ್ವಾಸ ತುಂಬಿ, ಜಿಲ್ಲೆಯ ಶೈಕ್ಷಣಿಕ ಫಲಿತಾಂಶ ಹೆಚ್ಚಿಸುವಲ್ಲಿ ಕೈಜೋಡಿಸಬೇಕು ಎಂದು ಹೇಳಿದರು. ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಮಾತನಾಡಿ, ಶಿಕ್ಷಕ ಓರ್ವ ತತ್ವಜ್ಞಾನಿಯಾಗಿ, ನಿರಂತರ ಅಧ್ಯಯನಶೀಲತೆಯನ್ನು ರೂಢಿಸಿಕೊಂಡು, ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿ ರೂಪಿಸಿ ಸಮಾಜ ಸ್ಮರಿಸುವ ಕಾರ್ಯ ನಿರ್ವಹಿಸಬೇಕು. ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಶಿಕ್ಷಣ ಗುಣಮಟ್ಟ ಹೆಚ್ಚಿಸುವಲ್ಲಿ ವಿವಿಧ ಶೈಕ್ಷಣಿಕಾ ಕಾರ್ಯಚಟುವಟಿಕೆಗಳನ್ನು ನಿರಂತರವಾಗಿ ಹಮ್ಮಿಕೊಳ್ಳಬೇಕು ಎಂದರು.

# ಸಮುದಾಯದ ಅಭಿವೃದ್ಧಿಗೆ ಶಿಕ್ಷಣ ಪ್ರಮುಖ ಅಸ್ತ್ರ

**ಜಮಖಂಡಿ:** ಸಮುದಾಯ ಅಭಿವೃದ್ಧಿ ಹೊಂದಲು ಶಿಕ್ಷಣ ಪ್ರಮುಖ ಅಸ್ತ್ರವಾಗಿದೆ. ಮಹಿಳೆಯರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸುವ ಮೂಲಕ ಸಂಸ್ಕೃತಿಯನ್ನು ಕಲಿಸಬೇಕೆಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.

ನಗರದ ಸರಕಾರಿ ಪ್ರಾಥಮಿಕ ತಾಲೂಕ ಶಾಲೆ ಆವರಣದಲ್ಲಿ ಶುಕ್ರವಾರ ಸಿರಾಜ ಕಮೀಟಿ ಹಮ್ಮಿಕೊಂಡಿದ್ದ ಪ್ರವಾದಿ ಮೊಹಮದ್ ಪೈಗಂಬರರ 1500ನೇ ಜನ್ಮದಿನಾಚರಣೆ ಮತ್ತು ಈದ್ ಮಿಲಾದ್ ಕಾರ್ಯಕ್ರಮದಲ್ಲಿ ಭಾರತೀಯ ಪರಂಪರೆಯಲ್ಲಿ ದೇವನೊಬ್ಬನಿದ್ದು ನಾಮಗಳು ಹಲವಾರು ಇವೆ. ಆಚರಣೆಯಲ್ಲಿ ವಿವಿಧತೆ ಇದ್ದರೂ ಒಳ್ಳೆಯ ಮನುಷ್ಯನಾಗಿ ಬದುಕು ಸಾಗಿಸಬೇಕೆನ್ನುವ ತತ್ವ ಅಡಗಿದೆ ಎಂದರು.



ಜಮಖಂಡಿಯಲ್ಲಿ ಗಣೇಶ ಹಬ್ಬವನ್ನು ಹಿಂದು-ಮುಸ್ಲಿಂ ಒಂದಾಗಿ ಆಚರಿಸುವ ಮೂಲಕ ರಾಜ್ಯಕ್ಕೆ ಮಾದರಿ ಆಗಿದೆ. ಪೈಗಂಬರರು ಮುಸ್ಲಿಂ ಸಮುದಾಯದ ಜಯಂತಿ ಆಚರಣೆ ಅಲ್ಲ, ಸಮಸ್ತ ದೇಶದ ಎಲ್ಲ ಧರ್ಮಗಳ ಆಚರಣೆ ಆಗಿದೆ. ಮುಸ್ಲಿಂ ಮಹಿಳೆಯರು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದರೇ ಮಾತ್ರ ಸಮುದಾಯ ಅಭಿವೃದ್ಧಿ ಆಗಲಿದೆ ಎಂದರು. ಡಿ.ವೈ.ಎಸ್.ಪಿ.ರೋಷನ ಜಮೀರ ಮಾತನಾಡಿ, ಸಾಧು-ಸಂತರ ಮತ್ತು ಪೈಗಂಬರರ ಆದರ್ಶ ತತ್ವಗಳನ್ನು ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ಸಾಗುವುದೇ ನಿಜವಾದ ಜಯಂತಿ ಆಚರಣೆಯಾಗಬೇಕು. ಸರಕಾರಗಳು ಮುಸ್ಲಿಂ ಜನಾಂಗಕ್ಕೆ ಹೆಚ್ಚಿನ ಕೊಡುಗೆ ನೀಡಬೇಕು. ಮೀಸಲಾತಿ ಹೆಚ್ಚಿಸಬೇಕು. ಮುಸ್ಲಿಂ ಸಮುದಾಯ ಮಕ್ಕಳಿಗೆ ಶಿಕ್ಷಣ ನೀಡುವ ಗೌರವಿಸುವ ಸಂಸ್ಕೃತಿಯನ್ನು ಬೆಳಸಬೇಕು ಎಂದರು.

ಮುತ್ತಿನಕಂತಿ ಹಿರೇಮಠದ ಶಿವಲಿಂಗ ಪಂಡಿತಾರಾಧ್ಯ ಶಿವಾಚಾರ್ಯರು ಮಾತನಾಡಿದರು. ಓಲೇಮಠದ ಪ.ಪೂ. ಆನಂದದೇವರು, ಮೌಲಾನಾ ಜುನೇದ, ಮೌಲಾನಾ ಅಬು ಸಾಲಿಯಾನ ಸಾನಿಧ್ಯ ವಹಿಸಿದ್ದರು ವೇದಿಕೆಯಲ್ಲಿ ಸಿರಿಯತ್ ಕಮೀಟಿ ಅಧ್ಯಕ್ಷ ಕುತಬುದ್ದೀನ ಬಿಜಾಪೂರ, ನಗರಸಭೆ ಅಧ್ಯಕ್ಷ ಈಶ್ವರ ವಾಳೆನ್ನವರ, ನಗರ ಪ್ರಾಧಿಕಾರ ಅಧ್ಯಕ್ಷ ಅನ್ವರ ಮೋಮಿನ, ನಜೀರ ಕಂಗನೊಳ್ಳಿ, ಸುಶೀಲಕುಮಾರ ಬೆಳಗಲಿ, ರಫೀಕ ಬಾರಿಗಡ್ಡಿ, ಮಾಮೂನ ಪಾರತನಳ್ಳಿ, ಕಾಶೀಂ ಅವಟಿ, ದಿಲಾವರ ಶಿರೋಳ, ಅಜೀಮ ಅವಟಿ, ಸಲೀಂ ಮುಧೋಳ, ಮುಬಾರಕ ಅಪರಾಧ, ಮಹಮ್ಮದ ಮುಲ್ಲಾ, ಸಿಪಿಐ ಮಲ್ಲಪ್ಪ ಮಡ್ಡಿ, ಪಿಎಸ್.ಐ ಅನೀಲ ಕುಂಬಾರ ಸಹಿತ ಹಲವರು ಇದ್ದರು.

# ಕಬ್ಬಿನ ಬೆಳೆಯ ತರಬೇತಿ ಕಾರ್ಯಗಾರ




**ತಾಲೂಕಿನ ಸವಸುದ್ದಿ ಗ್ರಾಮದಲ್ಲಿ ರಾಯಬಾಗ ರೇಣುಕಾ ಶುಗರ್ಸನವರು ಹಮ್ಮಿಕೊಂಡಿದ್ದ ಸಮಗ್ರ ಕಬ್ಬಿನ ಬೆಳೆಯ ತರಬೇತಿ ಕಾರ್ಯಗಾರವನ್ನು ಗಣ್ಯರು ಉದ್ಘಾಟಿಸಿದರು.**

**ರಾಯಬಾಗ:** ಕಬ್ಬಿನ ಬೆಳೆಗೆ ನೀಡಬೇಕಾದ ಪೋಷಕಾಂಶಗಳು ಸರಿಯಾದ ಸಮಯಕ್ಕೆ ನೀಡಿದರೆ ರೈತರು ಹೆಚ್ಚಿನ ಇಳುವರಿಯನ್ನು ಪಡೆಯಬಹುದು ಎಂದು ಬೆಂಗಳೂರು ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಚೇತನಾ ಪಾಟೀಲ ಹೇಳಿದರು.

'ಗುರುವಾರ ತಾಲೂಕಿನ ಸವಸುದ್ದಿ ಗ್ರಾಮದಲ್ಲಿ ರಾಯಬಾಗ ರೇಣುಕಾ ಶುಗರ್ಸನವರು ಹಮ್ಮಿಕೊಂಡಿದ್ದ ಸಮಗ್ರ ಕಬ್ಬಿನ ಬೆಳೆಯ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ರೈತರು ಸರ್ಕಾರದಿಂದ ಬರುವ ಯೋಜನೆಗಳು, ಸೌಲಭ್ಯಗಳನ್ನು ಪಡೆದುಕೊಂಡು ಉತ್ತಮ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಬೇಕೆಂದರು.

ಬೆಳಗಾವಿ ಎಸ್.ನಿಜಲಿಂಗಪ್ಪ ಶುಗರ್ಸನ ಸಂತೋಷಕುಮಾರ ಪೂಜೇರಿ ಮಾತನಾಡಿ, ಕಬ್ಬಿನ ಬೆಳೆ ಹೆಚ್ಚಿನ ಇಳುವರಿ ತಗೆಯುವಲ್ಲಿ ಬಹಳಷ್ಟು ಖರ್ಚು ಮಾಡಿ ನಾವು ರಾಸಾಯನಿಕ ಗೊಬ್ಬರವನ್ನು ಹಾಕಿ ಭೂಮಿಯನ್ನು ಹಾಳು ಮಾಡುತ್ತಿದ್ದೇವೆ. ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡರೆ ಒಳ್ಳೆ ಫಲವತ್ತಾದ ಭೂಮಿ ಉಳಿಸಿ, ಹೆಚ್ಚಿನ ಇಳುವರಿ ತೆಗೆಯಬಹುದು ಎಂದರು.

ಕೃಷಿ ಸಹಾಯಕ ನಿರ್ದೇಶಕ ವಿನೋದ ಮಾವರಕರ, ಬೆಳಗಾವಿ ರೇಣುಕಾ ಶುಗರ್ಸನ ಕಾರ್ಯನಿರ್ವಾಹಕ ನಿರ್ದೇಶಕ ಶ್ರೀಪಾದ ನೆರ್ಲಿಕರ, ರಾಚಪ್ಪಾ ಸುತಗುಂಡಿ, ಮಹಾವೀರ ಮಲಗೌಡನ್ನವರ, ವಿರುಪಾಕ್ಷ ಕರಲಿಂಗನ್ನವರ ಹಾಗೂ ಸವಸುದ್ದಿಯ ಸುತ್ತಮುತ್ತಲಿನ ಗ್ರಾಮದ ಕಬ್ಬು ಬೆಳೆಗಾರರು ಇದ್ದರು.



# ಜಲಾವೃತ ಜಮೀನಿಗೆ ತಹಸೀಲ್ದಾರ ಭೇಟಿ

**ಜಮಖಂಡಿ:** ಸತತ ಮಳೆಯಿಂದ ಉಂಟಾಗಿರುವ ಹಾನಿಯ ಕುರಿತು ಪರಿಶೀಲನೆ ನಡೆಸಲು ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ತಹಸೀಲ್ದಾರ ಅನೀಲ ಬಡಗೇರ, ಕೃಷಿ ಅಧಿಕಾರಿ ಸಿದ್ದಪ್ಪ ಪಟ್ಟಿಹಾಳ ಸಹಿತ ಕಂದಾಯ ಇಲಾಖೆ ಅಧಿಕಾರಿಗಳು, ಪಿಡಿಓ, ಗ್ರಾಮಲೆಕ್ಕಾಧಿಕಾರಿಗಳ ತಂಡ ತಾಲೂಕಿನ ತುಬಚಿ ಹಾಗೂ ಮುತ್ತೂರು ನಡುಗಡ್ಡೆ ಪ್ರದೇಶಗಳಿಗೆ, ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ಪರಿಶೀಲನೆ ನಡೆಸಿದರು. ಭಾರಿ ಮಳೆಯಿಂದಾಗಿ ಪ್ರವಾಹ ಪರಿಸ್ಥಿತಿ ಉಂಟಾಗಿ ರೈತರ ಬೆಳೆಗಳ ಹಾನಿಯ ಬಗ್ಗೆ ಮಾಹಿತಿ ಸಂಗ್ರಹಿಸಿ ಸರ್ಕಾರಕ್ಕೆ ಸಲ್ಲಿಸಲಾಗುವದು ಎಂದು ಪತ್ರಿಕೆಗೆ ತಿಳಿಸಿದರು.

# ರೈತರು ನಿಗದಿತ ಅವಧಿಯೊಳಗೆ ಸಾಲ ಮರು ಪಾವತಿಸುವಂತೆ ಎಚ್ಚರಿಕೆ

**ಯರಗಟ್ಟಿ:** 'ರೈತರಿಗೆ ಶೂನ್ಯ ಬಡ್ಡಿದರದಲ್ಲಿ ಬೆಳೆ ಸಾಲ ನೀಡಲಾಗುತ್ತಿದೆ. ಸಾಲ ಪಡೆದ ರೈತರು ನಿಗದಿತ ಅವಧಿಯೊಳಗೆ ಮರು ಪಾವತಿಸಬೇಕು. ಒಂದು ದಿನ ತಡವಾದರೂ ಶೇಕಡ 12ರಷ್ಟು ಬಡ್ಡಿ ಕಟ್ಟಬೇಕಾಗುತ್ತದೆ' ಎಂದು ಬಿಡಿಸಿಸಿ ಬ್ಯಾಂಕ್ ನಿರ್ದೇಶಕಿ ಎಚ್ಚರಿಸಿದರು. ಸಮೀಪದ ಸತ್ತಿಗೇರಿ ಗ್ರಾಮದ ಮಳಿಮಲ್ಲೇಶ್ವರ ಕೃಷಿ ಪತ್ತಿನ ಸಹಕಾರ ಸಂಘದಿಂದ ರೈತರಿಗೆ ಮಂಜೂರು ಮಾಡಿದ್ದ ನಾಲ್ಕು ಕೋಟಿ ಸಾಲವನ್ನು ಶನಿವಾರ ವಿತರಿಸಿ ಅವರು ಮಾತನಾಡಿದರು.

ಮಾಜಿ ಶಾಸಕ ದಿ. ಆನಂದ ಮಾಮನಿಯವರ ಅವಧಿಯಲ್ಲಿ ರೈತರಿಗೆ ಬೆಳೆಸಾಲ, ಟ್ರ್ಯಾಕ್ಟರ್ ಸಾಲ ಸೇರಿದಂತೆ ಅನೇಕ ಸಾಲ ಸೌಲಭ್ಯಗಳನ್ನ ಮಾಡಿ ಅವರ ಬೆನ್ನಿಗೆ ನಿಂತಿದ್ದರು. ಬೇರೆ ಯಾವುದೇ ರಾಜ್ಯದಲ್ಲೂ ರೈತರಿಗೆ ಶೂನ್ಯ ಬಡ್ಡಿದರದಲ್ಲಿ ಬೆಳೆ ಸಾಲ ನೀಡುತ್ತಿಲ್ಲ. ಕರ್ನಾಟಕದಲ್ಲಿ ಮಾತ್ರ ನೀಡಲಾಗುತ್ತಿದೆ. ಬೆಳೆ ಸಾಲ ಮಿತಿಯನ್ನು 2 ಲಕ್ಷದವರೆಗೂ ವಿಸ್ತರಿಸಲಾಗಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಜ್ಯದಲ್ಲಿ ಬಿಜೆಪಿ-ಜೆಡಿಎಸ್ ಸಮ್ಮಿಶ್ರ ಸರ್ಕಾರ ಇದ್ದಾಗ ಬೆಳೆ ಸಾಲವನ್ನು ಮನ್ನಾ ಮಾಡಲಾಗಿದೆ. ಕಾಂಗ್ರಾಸ್ ಸರ್ಕಾರ ಯಾವುದೇ ಕಾರಣಕ್ಕೂ ಸಾಲ ಮನ್ನಾ ಮಾಡುವುದಿಲ್ಲವೆಂದು ಹೇಳಿದೆ. ಹಾಗಾಗಿ, ಸಾಲ ಪಡೆದಿರುವ ರೈತರು ಮೈ ಮರೆಯಬಾರದು. ಸಾಲ ಪಡೆದ ಪೂರ್ಣ ಹಣವನ್ನು ಅವಧಿಗಿಂತ ಮುಂಚಿತವಾಗಿ ಮರುಪಾವತಿಸಬೇಕು ಎಂದರು.

ಸಾನಿಧ್ಯವನ್ನು ಚಂದ್ರಶೇಖರ ಶಿರ್ವಾಚಾರ್ಯ ಸ್ವಾಮಿಜಿ, ಅಧ್ಯಕ್ಷತೆಯನ್ನು ಪಿಕೆಪಿಎಸ್ ಅಧ್ಯಕ್ಷ ಮಹಾಂತೇಶ ಗೋಡಿ, ಪಿಕೆಪಿಎಸ್ ಉಪಾಧ್ಯಕ್ಷ ಪರ್ವಾತೆವ್ವ ಹರಳಿ, ವಹಿಸಿದ್ದರು ಗ್ರಾ.ಪಂ. ಅಧ್ಯಕ್ಷ ಗುರು ವಾಲಿ, ಮಾಜಿ ಜಿ. ಪಂ. ಸದಸ್ಯ ಅಜೀತಕುಮಾರ ದೇಸಾಯಿ, ಮಾಜಿ ತಾ. ಪಂ. ಅಧ್ಯಕ್ಷ ಪರ್ವಗೌಡ ಪಾಟೀಲ, ರೈನಾಪೂರ ಪಿಕೆಪಿಎಸ್ ಅಧ್ಯಕ್ಷ ವಿಠ್ಠಲ ಬಂಟನೂರ, ಪಿಕೆಪಿಎಸ್ ಸದಸ್ಯರಾದ ಗೌರವ್ವ ಪಾಟೀಲ, ಸುಶೀಲಾ ವಾಲಿ, ಲಕ್ಷ್ಮಣ ಹೆಗಡಿ, ಶ್ರೀಶೈಲ ಸವದತ್ತಿ, ಗುರುಪಾದ ಗೋಡಿ, ಬಸವರಾಜ ಮುನ್ಯಾಳ, ಷಣ್ಮುಖ ಬಳಿಗಾರ, ದುರಗಪ್ಪ ಬಂಡಿವಡ್ಡರ, ಬ್ಯಾಂಕ್ ನೀರಿಕ್ಷಕರಾದ ಎಸ್. ಎಸ್. ಗೋಣಿ, ಬ್ಯಾಂಕ್ ವ್ಯವಸ್ಥಾಪಕ ಎಂ. ಎಂ. ಸಿದ್ದನ್ನವರ, ಮುಖ್ಯ ಕಾರ್ಯನಿರ್ವಾಹಕ ಸಂಗಮೇಶ ಸಂಗಪ್ಪನ್ನವರ ಸೇರಿದಂತೆ ಅನೇಕರು ಇದ್ದರು.

# ಡಾ.ಸರ್ವಪಲ್ಲಿ ರಾಧಾಕೃಷ್ಣನರವರ 138ನೇ ಜನ್ಮದಿನಾಚರಣೆ




**ಗೋಕಾಕ:** ಉತ್ತಮ ನಾಗರಿಕರನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ ಹೇಳಿದರು.

ಅವರು, ಶುಕ್ರವಾರದಂದು ನಗರದ ಮಹಾಲಕ್ಷ್ಮೀ ಸಭಾ ಭವನದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಗೋಕಾಕ ಇವರು ಡಾ.ಸರ್ವಪಲ್ಲಿ ರಾಧಾಕೃಷ್ಣನ ರವರ 138ನೇ ಹುಟ್ಟು ಹಬ್ಬದ ನಿಮಿತ್ಯ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆಯನ್ನು ಉದ್ಘಾಟಿಸಿ, ನಿವೃತ್ತ ಹಾಗೂ ಉತ್ತಮ ಶಿಕ್ಷಕರನ್ನು ಸತ್ಕರಿಸಿ ಮಾತನಾಡಿದರು. ಶಿಕ್ಷಕರನ್ನು ಗೌರವಿಸುವ ಈ ದಿನ ಮಹತ್ವದ ದಿನವಾಗಿದೆ. ಅತ್ಯಂತ ಪವಿತ್ರವಾದ ವೃತ್ತಿ ಶಿಕ್ಷಕ ವೃತ್ತಿಯಾಗಿದೆ. ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ ನೀಡಿ ಅವರನ್ನು ಸಮಾಜ ಗೌರವಿಸುವ ವ್ಯಕ್ತಿಗಳನ್ನಾಗಿಸಿ ದೇಶ ಕಟ್ಟುವ ಶಿಲ್ಪಿಗಳನ್ನಾಗಿಸಿದ್ದಾರೆ. ಗೋಕಾಕ ವಲಯದ ವಿಭಿನ್ನ ಕಾರ್ಯಕ್ರಮಗಳ ಮೂಲಕ ಗುರುಗಳ ಮಹತ್ವವನ್ನು ಹೆಚ್ಚಿಸುತ್ತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು. ಮುಂಜಾನೆ ಬಸವೇಶ್ವರ ವೃತ್ತದಲ್ಲಿ ಬಸವೇಶ್ವರರ ಮೂರ್ತಿಗೆ ಮಾಲಾರ್ಪಣೆಯನ್ನು ಮಾಡಿ, ಭವ್ಯ ರಥದಲ್ಲಿ ಡಾ.ರಾಧಾಕೃಷ್ಣನ್ ಅವರ ಭಾವಚಿತ್ರದೊಂದಿಗೆ ಸಮಾರಂಭದ ವೇದಿಕೆಗೆ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗಿತ್ತು.

ವೇದಿಕೆಯ ಮೇಲೆ ಜಿಪಂ ಮಾಜಿ ಸದಸ್ಯರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ತಹಶೀಲದಾರ ಡಾ.ಮೋಹನ ಭಸ್ಮೆ, ತಾಲೂಕು ಮಟ್ಟದ ಅಧಿಕಾರಿಗಳಾದ ಪರಶುರಾಮ ಘಸ್ತೆ, ಎಮ್ ಎಲ್ ಜನ್ಮಟ್ಟಿ, ಎ ಬಿ ಮಲಬನ್ನವರ, ಎಮ್ ಎಸ್ ಬಾಗಡಿ, ಎಸ್ ಪಿ ವರಾಳೆ, ಬಿ ಎಸ್ ಕುಡುವಕ್ಕಲಿಗ, ಎಲ್ ಕೆ ತೋರಣಗಟ್ಟಿ, ನೌಕರರ ಸಂಘದ ತಾಲೂಕಾಧ್ಯಕ್ಷ ವಿನಾಯಕ ಮಾಳಿ, ವಿವಿಧ ಶಿಕ್ಷಕ ಸಂಘಗಳ ಅಧ್ಯಕ್ಷರುಗಳಾದ ಎಮ್ ವಿ ಬಾಗೆನ್ನವರ, ಜಿ ಆರ್ ಸನದಿ ಇದ್ದರು.



# ಸರ್ವೇಪಲ್ಲಿ ರಾಧಾಕೃಷ್ಣನ್ ಜಯಂತ್ಯೋತ್ಸವ

**ಮುಗಳಖೋಡ:** ಪಟ್ಟಣದ ಚ.ವಿ.ವ ಸಂಘದ ರೈನಬೋ ಸೆಂಟ್ರಲ್ ಆಂಗ್ಲ ಮಾದ್ಯಮ ಶಾಲೆಯ ಆವರಣದಲ್ಲಿ ಸರ್ವೇಪಲ್ಲಿ ರಾಧಾಕೃಷ್ಣನ್ ಅವರ ಜಯಂತ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಮುಖ್ಯೋಪಾಧ್ಯಾಯ ಶಿವಾನಂದ ಮರನೂರ ಪೋಟೋಪೂಜೆ ನೆರವೇರಿಸಿ ಪುಷ್ಪ ವೃಷ್ಠಿಯೊಂದಿಗೆ ಡಾ.ಸರ್ವೇಪಲ್ಲಿ ರಾಧಾಕೃಷ್ಣನ್ ಅವರಿಗೆ ವಿಶೇಷ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಾಲೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಶಿಕ್ಷಕ ಡಾ.ಕುಂಬಾರ ಅವರಿಗೆ ವಿದ್ಯಾರ್ಥಿಗಳಿಂದ ಸನ್ಮಾನ

**ಜಮಖಂಡಿ:** ತಾಲೂಕಿನ ಹಿರೇಪಡಸಲಗಿಯ ಶಾಲೆಯಲ್ಲಿ ಸರ್ವಪಲ್ಲಿ ಡಾ. ರಾಧಾಕೃಷ್ಣ ಅವರ ಜನ್ಮ ದಿನಾಚರಣೆ ಮತ್ತು ಶಿಕ್ಷಕರ ದಿನೋತ್ಸವದಲ್ಲಿ ಶುಕ್ರವಾರ ವಿಜ್ಞಾನ ಶಿಕ್ಷಕ ಡಾ. ಶಶಿಧರ ಕುಂಬಾರ ಅವರನ್ನು ವಿದ್ಯಾರ್ಥಿಗಳು ಸನ್ಮಾನಿಸಿದರು.



# ದೇಶವಿದೇಶಗಳಲ್ಲೂ ಶಿಕ್ಷಕರ ದಿನಾಚರಣೆ: ಪಟಗಾರ

**ಮುದ್ದೇಬಿಹಾಳ:** ಭಾರತ ದೇಶ ಒಳಗೊಂಡು ನೂರಾರು ದೇಶಗಳಲ್ಲಿ ಸಪ್ಟೆಂಬರ್ 5 ರಂದು ರಾಷ್ಟ್ರೀಯ ಶಿಕ್ಷಕರ ದಿನವನ್ನು ಆಚರಿಸಲಾಗುತ್ತದೆ ಆಸ್ಟ್ರೇಲಿಯಾದಲ್ಲಿಯೂ ಈ ದಿನವು ಸಾಮಾನ್ಯವಾಗಿ ಶಾಲಾ ರಜೆ ದಿನಗಳಲ್ಲಿ ಬರುವದರಿಂದ ಆಸ್ಟ್ರೇಲಿಯಾದ ರಾಜ್ಯಗಳು ಮತ್ತು ಪ್ರದೇಶಗಳು ಪ್ರತೀ ವರ್ಷ ಅಕ್ಟೋಬರ್ ಪ್ರತೀ ಶುಕ್ರವಾರರಂದು ಆಚರಿಸುತ್ತಾ ಸಾಗಿ ಬರುತ್ತಲಿವೆ ಎಂದು ಸ್ಥಳೀಯ ಪ್ರಾರ್ಥನಾ ವಿದ್ಯಾಮಂದಿರದ ಪ್ರಾಥಮಿಕ ವಿಭಾಗದ ಮುಖ್ಯ ಗುರುಗಳಾದ ವಿನೋದ ಪಟಗಾರ ಅವರು ನುಡಿದರು.

ಶುಕ್ರವಾರರಂದು ಪ್ರಾಥಮಿಕ ವಿಭಾಗ ಮತ್ತು ಪ್ರೌಢಶಾಲಾ ವಿಭಾಗಗಳೊಂದಿಗೆ ನಡೆಸಲಾದ ರಾಷ್ಟ್ರೀಯ ಶಿಕ್ಷಕರ ದಿನಾಚರಣೆ ಆಚರಣೆ ದಿನದಂದು ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪಹಾರ ಹಾಕಿ ಗೌರವಿಸಿ ಮಾತನಾಡುತ್ತಿದ್ದ ಅವರು 2030 ರ ವೇಳೆಗೆ 69 ಕ್ಕೂ ದಶಲಕ್ಷಕ್ಕೂ ಹೆಚ್ಚು ಹೊಸ ಶಿಕ್ಷಕರ ಅಗತ್ಯವಿದೆ ಎಂದು ಯುನೆಸ್ಕೋ ಅಂದಾಜಿಸಿದೆ ಮತ್ತು ಈ ಕೊರತೆಯು ಬೆಳೆಯುತ್ತಾ ಸಾಗಲಿದೆ ಎಂದರು. ವಿಶ್ವ ಶಿಕ್ಷಕರ ದಿನವನ್ನು ಆಚರಿಸಲು ವಿಶ್ವ ಶಿಕ್ಷಣ ಸಂಸ್ಥೆಯ ಶೈಕ್ಷಣಿಕ



ಮತ್ತು ವೈಜ್ಞಾನಿಕ ಸಾಂಸ್ಕೃತಿಕ ಸ್ಪರ್ದೆ ಮತ್ತು ಎಜುಕೇಶನಲ್ ಇಂಟರನ್ಯಾಶನಲ್ ಶಿಕ್ಷಕರ ಭಗ್ಗೆ ಮತ್ತು ಸಮಾಜದ ಅಭಿವೃದ್ದಿಯಲ್ಲಿ ಅವರು ವಹಿಸುತ್ತಿರುವ ಪಾತ್ರದ ಭಗ್ಗೆ ಜಗತ್ತಿದೆ ಉತ್ತಮ ತಿಳುವಳಿಕೆ ನೀಡಲು ಸಹಾಯ ಮಾಡಲು ಅಭಿಯಾನಗಳನ್ನು ನಡೆಸುತ್ತವೆ ಈ ಉದ್ದೇಶವನ್ನು ಸಾಧಿಸಲು ಅವರು ಮಾಧ್ಯಮ ಸಂಸ್ಥೆಗಳಂತ ಖಾಸಗಿ ವಲಯದೊಂದಿಗೆ ಪಾಲುದಾರರಾಗುತ್ತಾರೆಂದು ಅಭಿಯಾನವು ಪ್ರತೀವರ್ಷವಿಭಿನ್ನ ವಿಷಯಗಳ ಮೇಲೆ ಕೇಂದ್ರಿಕರಿಸುತ್ತದೆ ಎಂದು ಕೆಲವು ಉಧಾಹರಣೆಗಳನ್ನು ನೀಡಿ ವಿಶ್ವ ಶಿಕ್ಷಕರ ದಿನ ಬೆಳೆದು ಬಂದಿದ್ದರ ಕುರಿತು ಬಹು ಮಾರ್ಮಿಕವಾಗಿ ವಿವರಿಸಿದರು.

ಇದೇ ಸಮಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಶಿಕ್ಷಕ ವೃಂದದವರು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆಗೈದು ಗೌರವಿಸಿದರು.

ಈ ಸಮಯದಲ್ಲಿ ಪ್ರೌಢಶಾಲಾ ಮುಖ್ಯಗುರು ಮಾತೆಯಾದ ಶ್ರೀಮತಿ ದಿವ್ಯಾ ಹೆಬ್ಬಾರ, ಶಿಕ್ಷಕರಾದ ಶ್ರೀವಲ್ಲಭ ಕುಲಕರ್ಣಿ, ಹಣಮಂತ ಜಾವಡಗಿ, ಮುತ್ತಣ್ಣ ನೆರಬೆಂಚಿ, ರಾಮನಗೌಡ ಬಿರಾದಾರ, ಶಿಕ್ಷಕಿಯರಾದರಜ ರಜನಿ ಪಟಗಾರ, ಗೀತಾ ಉಗ್ಗನ್ನವರ, ಶಾರದಾ ಗೌಡ, ತ್ರಿವೇಣಿ ರಾಠೋಡ, ಅಂಜನಾ ಬಸರಕೋಡ, ಸುಗ್ಲಾ ಕಂಠಿ, ಸಮರೀನ್ ದೇಸಾಯಿ, ಸವಿತಾ ಹಿರೇಮಠ, ಭವಾನಿ ನಾಯ್ಕ, ಲಾವಣ್ಯ ಶಿರೋದ್ಕರ, ಸನ್ಮತಿಶೆಟ್ಟಿ, ಶಾಹಿನ್ ಎಂ, ಸೌಜನ್ಯ ಬೂದಿಹಾಳ, ರೇಶ್ಮಾ ಎಚ್, ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯವರು ಉಪಸ್ತಿತರಿದ್ದರು.

## ಅರ್ಜಿ ಆಹ್ವಾನ

**ಬಾಗಲಕೋಟೆ:**ಜಿಲ್ಲಾ ಚಲವಾದಿ ಸಮಾಜದ ಹಿರಿಯ ನಾಗ-ರಿಕರ ಸಂಘದಿಂದ ಸೆಪ್ಟಂಬರ್-2025ರ ಕೊನೆಯ ವಾರದಲ್ಲಿ ಜರುಗುವ ಛಲವಾದಿ ಸಮಾಜದ ಕಾರ್ಯಕ್ರಮದಲ್ಲಿ 2024-25ನೇ ಸಾಲಿನಲ್ಲಿ ಎಸ್-ಎಸ್ಎಲ್ಸಿ & ಪಿಯುಸಿ ಪರೀಕ್ಷೆಯಲ್ಲಿ ಪ್ರತಿಶತ 80% ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಹರಾಗುವವರು ವಿದ್ಯಾರ್ಥಿಗಳ ಅಂಕಪಟ್ಟಿ, ಆಧಾರ್ ಕಾರ್ಡ್, ಫೋನ್ ನಂಬರ್, ತಾಲೂಕು - ಊರು ವಿಳಾಸದೊಂದಿಗೆ ದಿನಾಂಕ: 15-09-2025 ರೊಳಗಾಗಿ ಸಂಘದ ನಿರ್ದೇಶಕರುಗಳಾದ ರಾಮಚಂದ್ರ ನಾಟಿಕಾರ ಮೊ.8123136921 ಹಾಗೂ ವೈ.ಎನ್.ಚಲವಾದಿ ಮೊ.9449644862 ಇವರಿಗೆ ವಾಟ್ಸಪ್ ಮುಖಾಂತರ ಕಳಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾತ್ಮರ ಆದರ್ಶಗಳು ನೆಮ್ಮದಿ ಬದುಕಿಗೆ ಸೂತ್ರ




**ತೇರದಾಳ:** ಈ ನಾಡಿನಲ್ಲಿ ಸಾಮಾಜಿಕ, ಆಧ್ಯಾತ್ಮಿಕವಾಗಿ ಸಾಕಷ್ಟು ಬದಲಾವಣೆಗೈದ ಮಹಾತ್ಮರ ಆದರ್ಶಗಳು ನೆಮ್ಮದಿ ಬದುಕಿನ ಸೂತ್ರಗಳಾಗಿವೆ ಎಂದು ರಾಜ್ಯ ಕೈಮಗ್ಗ ಅಭಿವೃದ್ಧಿ ನಿಮಗದ ಮಾಜಿ ನಿರ್ದೇಶಕ ಪ್ರವೀಣ ನಾಡಗೌಡ ಹೇಳಿದರು.

ಇಲ್ಲಿನ ಕಿಲ್ಲಾಭಾಗದಲ್ಲಿ ಹಮ್ಮಿಕೊಂಡಿದ್ದ ಮಹಮ್ಮದ ಪೈಗಂಬರ ಜಯಂತಿ ನಿಮಿತ್ತ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು. ಪೈಗಂಬರ ಅವರ ಸಾಮಾಜಿಕ ಕಳಕಳಿ ಇಂದಿನ ವ್ಯವಸ್ಥೆಗೆ ಮಾದರಿ ಆಗಿದೆ. ನಿಸ್ವಾರ್ಥದ ಜೀವನ ನಡೆಸಿದರೆ ಅಂತಹವರನ್ನು ಸಮಾಜ ಗುರುತಿಸುತ್ತದೆ ಎಂಬುದಕ್ಕೆ ಪೈಗಂಬರ ನಿದರ್ಶನರಾಗಿದ್ದಾರೆಂದು ಹೇಳಿದರು.

ಜಾಮೀಯಾ ಮಸಜೀದಿಂದ ಪ್ರಾರಂಭಗೊಂಡ ಮೆರವಣಿಗೆ, ತಹಸೀಲ್ದಾರ್ ಕಚೇರಿ, ಸರಕಾರಿ ಚಾವಡಿ, ಕನ್ನಡ ಶಾಲೆ, ಕಾಳಿನ ಬಜಾರ, ಯಲ್ಲಮ್ಮದೇವಿ ದೇವಸ್ಥಾನ, ಹರಳಯ್ಯ ಗಲ್ಲಿ ಮುಖಾಂತ ಬಸ್ ನಿಲ್ದಾಣ ತಲುಪಿತು. ಮೆರವಣಿಗೆಯಲ್ಲಿ ಮಕ್ಕಳು ಪೈಗಂಬರ ಜಯ ಘೋಷಣೆಗಳನ್ನು ಕೂಗಿ ಸಂಭ್ರಮಿಸಿದರು.

ಮೌಲಾನಾ ಶಮಸುಲ್ ಹಕ್ ರಜವಿ, ಮುಖಂಡರದಾದ ಗೌತಮ ರೋಡಕರ, ಮಾಸೂಂ ಇನಾಂದಾರ, ಪಜಲ್ ಅತಾರಾವುತ್, ರುಸ್ತಂ ನಿಪ್ಪಾನಿ, ಮೌಲಾಅಲಿ ಚಿತ್ರಬಾನುಕೋಟೆ, ಆದಿನಾಥ ಸಪ್ತಸಾಗರ, ಪೈಜುಲ್ಲಾ ಇನಾಂದಾರ, ರಾಜೇಸಾಬ ನಗಾರ್ಜಿ, ದಸ್ತಗೀರ ಜಮಾದಾರ ಇದ್ದರು.

# ಸರಕಾರಿ ಕಾಲೇಜಿನ ಕ್ರೀಡಾಪಟುಗಳ ಉತ್ತಮ ಸಾಧನೆ



**ಹಾವೇರಿ:** ಪ್ರಸಕ್ತ2025-26 ನೇ ಸಾಲಿನಲ್ಲಿ ನಡೆದ ಪದವಿ ಪೂರ್ವ ಕಾಲೇಜುಗಳ ಆಕ್ಸಪರ್ಡ ಪದವಿ ಪೂರ್ವ ಕಾಲೇಜು, ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ತಾಲ್ಲೂಕಾ ಮಟ್ಟದ ಕ್ರೀಡಾಕೂಟದಲ್ಲಿ ಬಸವೇಶ್ವರ ನಗರದ ಸರಕಾರಿ ಪದವಿಪೂರ್ವ ಕಾಲೇಜಿನ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿದ್ದಾರೆ.

ಬಾಲಕರ ಗುಂಪು ಸ್ಪರ್ಧೆಯಲ್ಲಿ ಥ್ರೋಬಾಲ್‌ನಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದೆ. ಖೋ-ಖೋ ನಲ್ಲಿ ದ್ವಿತೀಯ ಸ್ಥಾನ, ಚೆಸ್‌ನಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ವೈಯಕ್ತಿಕ ಸ್ಪರ್ಧೆಯಲ್ಲಿ 200 ಮೀ ಓಟದಲ್ಲಿ ಪ್ರಥಮ, ಎತ್ತರ ಜಿಗಿತದಲ್ಲಿ ಪ್ರಥಮ, ವೇಗದ ನಡಿಗೆಯಲ್ಲಿ ಪ್ರಥಮ ಸ್ಥಾನ ಗಳಿಸಿ ಜಿಲ್ಲಾಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸಾಧನೆಗೈದ ಎಲ್ಲ ಕ್ರೀಡಾಪಟುಗಳಿಗೆ ಕಾಲೇಜಿನ ಪ್ರಾಚಾರ್ಯರು ಅಭಿನಂದನೆ ಸಲ್ಲಿಸಿ, ವೈಯಕ್ತಿಕ ನಗದು ಬಹುಮಾನ ಘೋಷಿಸಿದರು. ಹಾಗೂ ಸಾಧಕ ಕ್ರೀಡಾಪಟುಗಳಿಗೆ ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಎಲ್ಲ ಸರ್ವ ಸದಸ್ಯರು ಮತ್ತು ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

# ಕೆರೆ ತುಂಬಿಸುವ ಕಾಮಗಾರಿ ಪೂರ್ಣಗೊಳಿಸುವಂತೆ ಆಗ್ರಹಿಸಿ ಮನವಿ

**ರಾಯಬಾಗ:** ತಾಲೂಕಿನ ಬಾವನಸೌಂದತ್ತಿ ಮತ್ತು ಚಿಂಚಲಿ ಜಾಕ್ವೆಲ್‌ದಿಂದ ತಾಲೂಕಿನ 58 ಕೆರೆಗಳನ್ನು ತುಂಬಿಸುವ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ, ಕೆರೆಗಳನ್ನು ತುಂಬಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಪದಾಧಿಕಾರಿಗಳು ಮತ್ತು ರೈತರು ಜಿಲ್ಲಾಧಿಕಾರಿ ಮೊಹಮ್ಮದ ರೋಷನ ಅವರಿಗೆ ಮನವಿ ಸಲ್ಲಿಸಿದರು.

ಗುರುವಾರ ಮಧ್ಯಾಹ್ನ ಪಟ್ಟಣದ ಝೇಂಡಾ ಕಟ್ಟೆ ಹತ್ತಿರ ರೈತರು ಹಸು, ಚಕ್ಕಡಿ ಗಾಡಿ ಮತ್ತು ಕುರಿಆಡುಗಳೊಂದಿಗೆ ಆಗಮಿಸಿ ರಸ್ತೆಯನ್ನು ಬಂದ ಮಾಡಿ ಉಗ್ರ ಪ್ರತಿಭಟನೆ ನಡೆಸಿದರು. ಸುಮಾರು 5 ಗಂಟೆಗಳ ಕಾಲ ಹಾರೂಗೇರಿ-ರಾಯಬಾಗ-ಚಿಕ್ಕೋಡಿ ರಸ್ತೆ ಬಂದ ಮಾಡಿದ್ದರಿಂದ ಪ್ರಯಾಣಿಕರು, ವಾಹನ ಸವಾರರು ಪರದಾಡುವಂತಾಯಿತು.

ಬಳಿಕ ಮಾತನಾಡಿದ ರೈತ ಸಂಘದ ರಾಜ್ಯಾಧ್ಯಕ್ಷ ಚುನಪ್ಪ ಪೂಜೇರಿ, ತಾಲೂಕಿನ ರಾಯಬಾಗ ಮತ್ತು ಕುಡಚಿ ಮತಕ್ಷೇತ್ರಗಳ 58 ಕೆರೆಗಳನ್ನು ತುಂಬಿಸುವ ಯೋಜನೆಗೆ ಚಾಲನೆ ನೀಡಿ 7 ವರ್ಷಗಳು ಕಳೆದರೂ, ಇನ್ನುವರೆಗೂ ಕಾಮಗಾರಿಯನ್ನು ಪೂರ್ಣಗೊಳಿಸದೇ ಸರ್ಕಾರ ಕಾಲಹರಣ ಮಾಡುತ್ತಿರುವುದರಿಂದ ಮಳೆ ಆಶ್ರಿತ ಪ್ರದೇಶಗಳಲ್ಲಿನ ಜನಜಾನುವರುಗಳಿಗೆ ಮತ್ತು ರೈತರ ಕೃಷಿ ಭೂಮಿಗೆ ತುಂಬ ತೊಂದರೆಯಾಗುತ್ತಿದೆ ಎಂದೂ ಆರೋಪಿಸಿದರು.



ಕೆರೆ ತುಂಬು ಯೋಜನೆ ಶೀಘ್ರವಾಗಿ ಪೂರ್ಣಗೊಳಿಸಲು ಒತ್ತಾಯಿಸಿ ಈಗಾಗಲೇ ಎರಡು ಬಾರಿ ರೈತ ಸಂಘದಿಂದ ಧರಣಿ ಹೋರಾಟ ನಡೆಸಿದರೂ ಇನ್ನುವರೆಗೂ ಯೋಜನೆ ಪೂರ್ಣಗೊಳ್ಳದೇ ಇರುವುದು ಅತ್ಯಂತ ನಾಚಿಕೆಗೇಡು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೆರೆ ತುಂಬು ಯೋಜನೆ ಪೂರ್ಣಗೊಳಿಸಿ, ಕೆರೆಗಳಿಗೆ ನೀರು ತುಂಬಿಸಿದರೆ ಅಂತರಜಲಮಟ್ಟ ಹೆಚ್ಚಾಗಿ ನೀರಿನ ತೊಂದರೆ ಬಗೆಹರಿಸಬಹುದು ಮತ್ತು ರೈತರಿಗೆ ಮತ್ತು ಜನಜಾನುವಾರುಗಳಿಗೆ ನೀರಿನ ಶಾಶ್ವತ ಪರಿಹಾರ ಆಗಲಿದೆ ಎಂದರು. 10 ದಿನಗಳಲ್ಲಿ ನಮ್ಮ ಬೇಡಿಕೆ ಈಡೇರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ಕೆರೆ ತುಂಬುವ ಯೋಜನೆ ಜಾಕ್ವೆಲ್‌ಗಳಿಗೆ ಭೇಡಿ ನೀಡಿ ಪರೀಶಿಲನೆ ನಡೆಸಿ, ಕೆರೆ ತುಂಬುವ ಯೋಜನೆ ಪ್ರಾರಂಭಿಸಲು ಅಧಿಕಾರಿಗಳ ಜೊತೆ ಚರ್ಚಿಸಿ ಶೀಘ್ರವಾಗಿ ಸೂಕ್ತವಾಗಿ ಕ್ರಮಕೈಗೊಳ್ಳ ಲಾಗುವುದು ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಎಸ್.ಡಿ.ಮಲ್ಲಾಪೂರ, ರಮೇಶ ಕಲ್ಹಾರ, ಪರಸಪ್ಪ ಚಿನಗುಂಡಿ, ಮಲ್ಲಪ್ಪ ಅಂಗಡಿ, ನಿಂಗಪ್ಪ ಪಕಾಂಡಿ, ವಿಜಯ ನಾಯಿಕ, ನಿಂಗಪ್ಪ ಪಾತ್ರೋಟ, ಅಜೀತ ಜಾಧವ ಸೇರಿ ನೂರಾರು ರೈತರು ಭಾಗವಹಿಸಿದ್ದರು.

# ಮಹಾದೇವ ಸತ್ತಿಗೇರಿಗೆ ನಾವಿಕ ಕನ್ನಡ ರತ್ನ ಪ್ರಶಸ್ತಿ



**ರಾಮದುರ್ಗ:** ಅಮೇರಿಕದ ಫ್ಲೋರಿಡಾ ರಾಜ್ಯದ ಲೇಕ್ ಲ್ಯಾಂಡ್ ನಗರದಲ್ಲಿ ಅದ್ದೂರಿಯಾಗಿ ಜರುಗಿದ 8ನೇಯ ನಾವಿಕ ವಿಶ್ವ ಕನ್ನಡ ಸಮ್ಮೇಳನದಲ್ಲಿ ತಾಲೂಕಿನ ಹುಲಕುಂದ ಗ್ರಾಮದ ಅಂತಾರಾಷ್ಟ್ರೀಯ ನಗೆ ಭಾಷಣಕಾರ ಹಾಗೂ ಸರಸ್ವತಿಯ ಆರಾಧಕ ಮಹದೇವ ಸತ್ತಿಗೇರಿಗೆ ನಾವಿಕ ಕನ್ನಡ ರತ್ನ ಪ್ರಶಸ್ತಿ ಪ್ರಧಾನಮಾಡಿ ಗೌರವಿಸಲಾಯಿತು.

ಇವರು ವೃತ್ತಿಯಲ್ಲಿ ಶಿಕ್ಷಕರು ಪ್ರವೃತ್ತಿಯಲ್ಲಿ ಹಾಸ್ಯ ಚಕ್ರವರ್ತಿಯೆಂದು ಪ್ರಪಂಚದ 20 ಕ್ಕೂ ಅಧಿಕ ದೇಶಗಳಲ್ಲಿ ಕನ್ನಡಿಗರ ಮನಗೆದ್ದ ಮಹಾನ್ ಹಾಸ್ಯ ಕಲಾವಿದರು ಇವರು ಮೊದ ಮೊದಲು ರಂಗಭೂಮಿಯ ಕಲಾವಿದರಾಗಿ ಗಾಯಕರಾಗಿ ಬೆಳ್ಳಿ ಪರದೆಯ ಮೇಲೆ ಕಾಣಿಸಿಕೊಂಡ ಪ್ರತಿಭಾವಂತ ಕಲಾವಿದರಾಗಿ ಹೊರಹೊಮ್ಮಿದ ಹಿರಿಮೆ ಇವರದು.ಇವರು ವಿಶೇಷವಾಗಿ ಕರಗತ ಮಾಡಿಕೊಂಡಿರುವ ತಮ್ಮ ಅಂತರ್ಗತದ ಹಾಸ್ಯ ಕಲೆಯ ಮೂಲಕ ಹಾಸ್ಯದ ರಸದೌತಣ ನೀಡುವುದು ವಿಶಿಷ್ಟ. 8 ನೇಯ ನಾವಿಕ ವಿಶ್ವ ಕನ್ನಡ ಸಮ್ಮೇಳನದಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ರಕ್ಷಣೆಯ ಜೊತೆಗೆ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಅಮೇರಿಕದ ಸಂಯುಕ್ತ ಸಂಸ್ಥಾನದಲ್ಲಿ ಸ್ಥಾಪನೆಗೊಂಡ ರಾಷ್ಟ್ರೀಯ ಕನ್ನಡ ಸಂಘಟನೆಯಾಗಿದ್ದು ಬಹು ವಿಶೇಷ ಈ ಸಮ್ಮೇಳನದಲ್ಲಿ ನಾಟಕಗಳು, ಸಂಗೀತ ಕಛೇರಿಗಳು, ಸಾಹಿತ್ಯ ಚರ್ಚೆಗಳು, ಚಲನಚಿತ್ರೋತ್ಸವ, ವ್ಯಾಪಾರ ವಿಚಾರ ವೇದಿಕೆ ಆಧ್ಯಾತ್ಮಿಕ ಚಿಂತನೆಗಳು, ಮಹಿಳಾ ವೇದಿಕೆ, ಇನ್ನೂ ಅನೇಕ ವಿಚಾರ ಗೋಷ್ಠಿಗಳು ನಡೆದವು ಈ ಸಮ್ಮೇಳನದಲ್ಲಿ ಕರ್ನಾಟಕ ಸರಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಹಿರಿಯ ಚಲನಚಿತ್ರ ನಟರಾದ ಶ್ರೀನಾಥ್ ರಮೇಶ ಅರವಿಂದ ಸಿಹಿಕಹಿ ಚಂದ್ರು ಶಿಕ್ಷಣ ತಜ್ಞ ಗುರುರಾಜ ಕರ್ಜಗಿ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ ಯಶವಂತ ದೇಶಪಾಂಡೆ ಹಾಗೂ ಗೋ ನಾ ಸ್ವಾಮಿ ಸೇರಿದಂತೆ 84 ಕಕ್ಕೂ ಅಧಿಕ ಕಲಾವಿದರು ಭಾಗಿಯಾಗಿದ್ದರು ನಾವಿಕ ವಿಶ್ವ ಕನ್ನಡ ಸಂಘದ ಅಧ್ಯಕ್ಷ ಶಿವಕುಮಾರ ಬೆಂಗಳೂರು ಸಮಾವೇಶದ ಸಂಚಾಲಕ ಹರ್ಷಿತ್ ಗೌಡ ಅಜೀತ ಬಾಕರ್ ಇನ್ನೂ ಅನೇಕ ಪ್ರಮುಖರು ಇದ್ದರು.

# ಕ್ರೀಡೆಯಲ್ಲಿ ಸೋಲು-ಗೆಲುವು ಸಮಾನ



**ರಬಕವಿ ಬನಹಟ್ಟಿ:** ಮುಂದಿನ ದಿನಗಳಲ್ಲಿ ಸರ್ಕಾರಗಳು ದೇಸಿ ಕ್ರೀಡೆಗೆ ಇನ್ನಷ್ಟು ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಗಮನ ನೀಡಬೇಕು. ನಾಡಹಬ್ಬದ ಕುರಿತು ಜಾಗೃತಿಯನ್ನು ಮೂಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಾಂತ ದಸರಾ ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಕ್ರೀಡೆಯಲ್ಲಿ ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ಇದುವೇ ನಮ್ಮ ಬದುಕಿಗೆ ದಾರಿಯಾಗಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಭಾನುವಾರ ಇಲ್ಲಿನ ಎಸ್ ಆರ್ ಎ ಮೈದಾನದಲ್ಲಿ ರಬಕವಿ ಬನಹಟ್ಟಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು. ಇಂದಿನ ದಿನಗಳಲ್ಲಿ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಕ್ರೀಡೆ ನಮ್ಮ ವ್ಯಕ್ತಿತ್ವವನ್ನು ನಿರ್ಮಾಣ ಮಾಡುವುದರ ಜೊತೆಗೆ ನಮ್ಮನ್ನು ಆರ್ಥಿಕವಾಗಿ ಸಬಲರನ್ನಾಗಿಯೂ ಮಾಡುತ್ತದೆ. ಆದ್ದರಿಂದ ಪ್ರತಿಯೊಬ್ಬರು ತಾವು ಆಸಕ್ತಿ ಹೊಂದಿದೆ ಕ್ರೀಡೆಯಲ್ಲಿ ಭಾಗವಹಿಸಬೇಕು. ಕ್ರೀಡೆಯ ಮೂಲಕ ದೇಶಕ್ಕೆ ಹೆಸರು ತರಲು ಸಾಧ್ಯ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ನಂದೀಶ ಪಂಚಾಕ್ಷರಿ, ದೈಹಿಕ ಶಿಕ್ಷಕರಾದ ಪಾಂಡು ಸಿಂಗರೆಡ್ಡಿ, ಬಿ.ಜೆ.ಜೋರಾಪು, ಎಸ್.ಎಸ್.ಹಿರೇಮಠ, ಬಸವರಾಜ ಮಾಳಿ, ಚನಾಳ ಸೇರಿದಂತೆ ಅನೇಕರು ಇದ್ದರು.

**ರಾಷ್ಟ್ರೀಯ ಫ್ಲೋರೋಸಿಸ್ ನಿಯಂತ್ರಣ : ಕೊಪ್ಪಳ ಜಿಲ್ಲಾ ಸಮನ್ವಯ ಸಮಿತಿ ಸಭೆ**

# ಫ್ಲೋರೈಡ್ ಅಂಶ ಕಂಡುಬರುವ ನೀರಿನ ಮೂಲಗಳನ್ನು ಪರೀಕ್ಷೆಗೆ ಒಳಪಡಿಸಿ

**ಕೊಪ್ಪಳ:** ರಾಷ್ಟ್ರೀಯ ಫ್ಲೋರೋಸಿಸ್ ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯಲ್ಲಿ ಫ್ಲೋರೈಡ್ ಅಂಶ ಹೆಚ್ಚಾಗಿ ಕಂಡುಬರುವ ಪ್ರತಿ ಗ್ರಾಮಗಳ ನೀರಿನ ಮೂಲಗಳ ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಹೇಳಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ್ ಸಮಿತಿ ಕೊಠಡಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಫ್ಲೋರೋಸಿಸ್ ನಿಯಂತ್ರಣ ಕಾರ್ಯಕ್ರಮದ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಷ್ಟ್ರೀಯ ಫ್ಲೋರೋಸಿಸ್ ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯಲ್ಲಿ ಫ್ಲೋರೈಡ್ ಅಂಶ ಕಂಡುಬರುವ ಹಳ್ಳಿಗಳ ಕುರಿತು ತಾಲ್ಲೂಕುವಾರು ಮಾಹಿತಿಯನ್ನು ನೀಡಿ. ಶಾಲೆ ಮತ್ತು ಅಂಗನವಾಡಿಗಳಲ್ಲಿ ಮಕ್ಕಳಿಗೆ ಕಡ್ಡಾಯವಾಗಿ ಆರ್.ಓ ಘಟಕಗಳಿಂದ ಶುದ್ಧೀಕರಿಸಿದ ನೀರನ್ನು ನೀಡಬೇಕು. ಗ್ರಾಮಗಳ ಬೋರ್‌ವೆಲ್ ನೀರನ್ನು ಪರೀಕ್ಷೆಗೆ ಒಳಪಡಿಸಬೇಕು. ಫ್ಲೋರೈಡ್‌ಯುಕ್ತ ನೀರಿನ ಸೇವನೆಯಿಂದ ಆಗುವ ದಂತಕ್ಷಯ, ಮೂಳೆಗಳ ದುರ್ಬಲತೆ ಕುರಿತು ಗ್ರಾಮೀಣ ಭಾಗದ ಜನರಲ್ಲಿ ತಿಳುವಳಿಕೆ ಮೂಡಿಸಿ ಗ್ರಾಮಗಳಲ್ಲಿ ಸ್ಥಾಪಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳಿಂದಲೇ



ನೀರನ್ನು ಉಪಯೋಗಿಸುವಂತೆ ತಿಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಲಸಿಕೆ ಬಗ್ಗೆ ಪಾಲಕರಿಗೆ ಜಾಗೃತಿಯಿರಬೇಕು: ಮಗು ಜನಿಸಿದ 24 ಗಂಟೆಯೊಳಗೆ ಹಾಕಬೇಕಾದ ಕಡ್ಡಾಯ ಲಸಿಕೆಗಳು, ಮಗುವಿನ ಬೆಳವಣಿಗೆಯ ವಿವಿಧ ಹಂತಗಳಲ್ಲಿ ಹಾಕಬೇಕಾದ ಲಸಿಕೆಗಳು, ಲಸಿಕೆಯಿಂದ ಮಗುವಿಗೆ ಆಗುವ ಆರೋಗ್ಯ ಪ್ರಯೋಜನೆಗಳು, ಲಸಿಕೆ ಹಾಕಿಸದೇ ಇರುವುದರಿಂದ ಆಗುವ ತೊಂದರೆಗಳು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಪ್ರತಿಯೊಬ್ಬ ತಾಯಂದಿರಿಗೆ ಮತ್ತು ಪಾಲಕರಿಗೆ ಗೊತ್ತಿರಬೇಕು. ಅರ್ಹವಿರುವ ಪ್ರತಿಯೊಬ್ಬ ಮಗುವಿಗೂ ಲಸಿಕೆ ಹಾಕಿಸಲು ಕ್ರಮಕೈಗೊಳ್ಳಬೇಕು. ಈ ಕಾರ್ಯಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯವರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು ಅವರು ಮಾತನಾಡಿ, ಕುಡಿಯುವ ನೀರು, ಆಹಾರ, ಕೆಲವು ಔಷಧಿಗಳ ಸೇವನೆ ಹಾಗೂ ಕಾರ್ಖಾನೆಗಳಿಂದ ಹೊರಹೊಮ್ಮುವ ಧೂಳು, ಹೊಗೆ ಮುಂತಾದವುಗಳಿಂದ ಫ್ಲೋರೈಡ್ ದೇಹದೊಳಗೆ ಪ್ರವೇಶಿಸುತ್ತದೆ. ಇದು ವಯಸ್ಸಿನ ಅಂತರ, ಲಿಂಗಬೇಧವಿಲ್ಲದೆ ಚಿಕ್ಕಮಕ್ಕಳು, ವಯಸ್ಕರು, ಮಹಿಳೆಯರು, ಪುರುಷರು ಎಲ್ಲರಲ್ಲಿಯೂ ಕಂಡುಬರುತ್ತದೆ. ಇದರಲ್ಲಿ ದಂತ ಫ್ಲೋರೋಸಿಸ್, ಮೂಳೆ ಫ್ಲೋರೋಸಿಸ್ ಹಾಗೂ ದೇಹದ ಇತರೆ ಭಾಗದ ಫ್ಲೋರೋಸಿಸ್ ಎಂದು ಮೂರು ವಿಧಗಳಿವೆ. ಇದು ಮುಖ್ಯವಾಗಿ ಅಂತರ್ಜಲ, ಹಾಲಿಲ್ಲದ ಕಪ್ಪು ಟೀ, ಕಪ್ಪು ಕಲ್ಲುಪ್ಪು, ಅಡಿಕೆ, ತಂಬಾಕು ಸೇವನೆಯಿಂದ, ಡಬ್ಬದಲ್ಲಿನ ತಿಂಡಿ ತಿನಿಸುಗಳು, ಔಷಧಿಗಳು, ಸೋಡಿಯಂ ಫ್ಲೋರೈಡ್ ಮಾತ್ರೆ, ಮಂಪರು ಔಷಧಿಗಳು, ಆಹಾರದಲ್ಲಿ ಫ್ಲೋರೈಡ್ ಅಂಶ ಹೆಚ್ಚಾಗಿದ್ದರೆ, ಸಮತೋಲನ ಆಹಾರ ಸೇವಿಸದಿದ್ದರೆ ಫ್ಲೋರೋಸಿಸ್ ಖಾಯಿಲೆ ಉಂಟಾಗುತ್ತದೆ. ಇದು ಒಂದು ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿದ್ದು, ಇದರ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಪ್ರಾಕಾಶ ವಿ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ರವಿಂದ್ರನಾಥ ಎಂ.ಹೆಚ್., ವಿಶ್ವ ಆರೋಗ್ಯ ಸಂಸ್ಥೆಯ ಸಲಹೆಗಾರರಾದ ಡಾ. ಶ್ರೀಧರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಗೋನಾಳ ಕುಮಾರಸ್ವಾಮಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಶಶೀಧರ ಎ., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಪ್ರಕಾಶ ಹೆಚ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ್ ಸೇರಿದಂತೆ ಎಲ್ಲಾ ತಾಲೂಕುಗಳ ಆರೋಗ್ಯಾಧಿಕಾರಿಗಳು, ತಜ್ಞವೈದ್ಯರು ಹಾಗೂ ಇತರೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮನೆ ಮನೆಗೆ ಪೊಲೀಸ್ ಕಾರ್ಯಕ್ರಮ

**ಯರಗಟ್ಟಿ:** ಕರ್ನಾಟಕ ಸರ್ಕಾರವು ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ನಿರ್ಮಿಸುವ ಮಹತ್ತರ ಉದ್ದೇಶದಿಂದ 'ಮನೆ ಮನೆಗೆ ಪೊಲೀಸ್' ಎಂಬ ವಿನೂತನ ಯೋಜನೆಯನ್ನು ಪ್ರಾರಂಭಿಸಿದೆ.

ಸಾರ್ವಜನಿಕರು ಮತ್ತು ಪೊಲೀಸರ ನಡುವೆ ಭ್ರಾತೃತ್ವ ಮತ್ತು ವಿಶ್ವಾಸವನ್ನು ಬೆಳೆಸಲು ಇದು ಸಹಾಯಕವಾಗಲಿದೆ. ಪೊಲೀಸ್ ಅಧಿಕಾರಿಗಳು ತಮ್ಮ ಸ್ಥಳೀಯ ಪ್ರದೇಶದ ಪ್ರತಿ ಮನೆಗೂ ಭೇಟಿ ನೀಡಿ, ನಿವಾಸಿಗಳೊಂದಿಗೆ ಸೌಹಾರ್ದಯುತ ಸಂಬಂಧ ಬೆಳೆಸುತ್ತಾರೆ. ಅವರ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುತ್ತಾರೆ ಮತ್ತು ಸುರಕ್ಷತೆ ಹಾಗೂ ಭದ್ರತಾ ಕ್ರಮಗಳ ಬಗ್ಗೆ ಮಾರ್ಗದರ್ಶನ ನೀಡುತ್ತಾರೆ ಎಂದು ಪಿಎಸ್‌ಐ ಎಲ್. ಬಿ. ಮಾಳಿ ಹೇಳಿದರು.

ಸಮೀಪದ ಮುಗಳಿಹಾಳ ಗ್ರಾಮದಲ್ಲಿ ಮನೆ ಮನೆಗೆ ಪೊಲೀಸ್' ಎಂಬ ವಿನೂತನ ಯೋಜನೆಯ ಜಾಗೃತಿ ಕಾರ್ಯಕ್ರಮವನ್ನು ಮುರಗೋಡ ಸಿಪಿಐ ಆಯ್. ಎಂ. ಮಠಪತಿಯವರ ಆದೇಶದ ಮೇರೆಗೆ ಗ್ರಾಮಸ್ಥರಿಗೆ ಮೂಡಿಸಿದರು.

ಈ ಸಂದರ್ಭದಲ್ಲಿ ನಿಂಗಪ್ಪ ದಳವಾಯಿ, ಯಲ್ಲಪ್ಪ ದಳವಾಯಿ, ಬಸವರಾಜ ದಳವಾಯಿ, ಸಿದ್ದು ಬಡಿಗೇರ, ಮಾರುತಿ ಮಾದರ, ಈರಪ್ಪ ನಾವಿ, ಚಂಬಣ್ಣ ಗಾಣಿಗೇರ, ವಿಠ್ಠಲ ದಳವಾಯಿ, ಗ್ರಾಮದ ಬೀಟ್ ಪೊಲಿಸ್ ವಿಠ್ಠಲ ಬಾಂಗಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.



**ಬೈಲಹೊಂಗಲದ ಕಿತ್ತೂರು ಚೆನ್ನಮ್ಮ ನಗರ ಬಡಾವಣೆಯ ಸಾರ್ವಜನಿಕ ಶ್ರೀ ಗಜಾನನ ಉತ್ಸವ ಕಮೀಟಿ ಅಡಿಯಲ್ಲಿ ಗುರುವಾರ ನಡೆದ ಅನ್ನ ಪ್ರಸಾದ ಕಾರ್ಯಕ್ರಮದಲ್ಲಿ ಶಾಖಾ ಮೂರು ಸಾವಿರ ಮಠದ ಪ್ರಭು ನೀಲಕಂಠ ಶ್ರೀಗಳನ್ನು ಉತ್ಸವ ಕಮೀಟಿ ಆಡಳಿತ ಮಂಡಳಿಯ ಸದಸ್ಯರು ಸನ್ಮಾನಿಸಿದರು. ಈ ಸಂಧರ್ಭದಲ್ಲಿ ಸಂಘದ ಸದಸ್ಯರು, ಭಕ್ತರು ಪಾಲ್ಗೊಂಡಿದ್ದರು.**

# ಪಾರ್ಶ್ವನಾಥ ಸಂಸ್ಥೆಗಳ ವಾರ್ಷಿಕ ಸರ್ವ ಸಾಧಾರಣ ಸಭೆ



**ರಾಯಬಾಗ:** ನೂರರಷ್ಟು ಸಾಲ ವಸೂಲಾತಿ ಆಗಿರುವ ಸಂಘದ ಸದಸ್ಯರಿಗೆ ಶೇ.25 ರಷ್ಟು ಲಾಭಾಂಶ ನೀಡಲಾಗುವುದು ಎಂದು ಶ್ರೀ ಪಾರ್ಶ್ವನಾಥ ಸಹಕಾರಿ ಸಮೂಹದ ಸಂಸ್ಥಾಪಕ ಅಧ್ಯಕ್ಷ ಭರತೇಶ ಬನವನೆ ಹೇಳಿದರು.

ತಾಲೂಕಿನ ನಸಲಾಪೂರ ಗ್ರಾಮದಲ್ಲಿ ನಡೆದ ಶ್ರೀ ಪಾರ್ಶ್ವನಾಥ ಸಹಕಾರಿ ಸಮೂಹದ ಸಂಸ್ಥೆಗಳ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, 5 ಸಂಸ್ಥೆಗಳ 1.75 ಕೋಟಿ ರೂಗಳಲ್ಲಿ ಸ್ವಂತ ಕಟ್ಟಡ ಇದ್ದು, ಗ್ರಾಮೀಣ ಭಾಗದ ರೈತರಿಗೆ ಸಿಬಿಲ್ ಸ್ಕೋರ ಚೆನ್ನಾಗಿ ಇಟ್ಟುಕೊಂಡರೆ ಸಾಲಸೌಲಭ್ಯ ಪಡೆದುಕೊಳ್ಳಲು ಅನುಕೂಲವಾಗುತ್ತದೆ. ಇನ್ನೂ ಸಂಘಗಳಿಂದ ಗೊಬ್ಬರ ಹಾಗೂ ಸಿಮೆಂಟ್ ಅಂಗಡಿಗಳನ್ನು ಶೀಘ್ರದಲ್ಲಿ ಪ್ರಾರಂಭಿಸಲಾಗುವುದು. ಎಲ್ಲಾ ಸಂಸ್ಥೆಗಳು ಸದಸ್ಯರಿಗೆ ಅಪಘಾತ ವಿಮೆ ಹಾಗೂ ಆರೋಗ್ಯ ವಿಮೆ ಸೌಲಭ್ಯ ಪಡೆದುಕೊಳ್ಳಬೇಕು ಎಂದರು.

ಆರು ಸಹಕಾರಿ ಸಂಸ್ಥೆಗಳು 1,58,23,127 ರಷ್ಟು ಲಾಭ ಗಳಿಸಿದ್ದು, ಒಟ್ಟಾರೆ ಈ ಎಲ್ಲಾ ಸಂಸ್ಥೆಗಳ ದುಡಿಯುವ ಬಂಡವಾಳ 71,79,48,256 ರೂ. ರಷ್ಟು ಇದೆ. ಗ್ರಾಮ ಮಟ್ಟದಲ್ಲಿ ಇಂತಹ ಸಹಕಾರಿ ಸಂಸ್ಥೆಗಳು ಇರುವುದುರಿಂದ ಗ್ರಾಮದ ಮತ್ತು ಸುತ್ತಮುತ್ತಿನ ಜನರ ಆರ್ಥಿಕ ಪ್ರಗತಿ ಸಾಕಷ್ಟು ಸುಧಾರಿಸಿದೆ ಎಂದರು. ವಿವಿದೊದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ, ವಿವಿದೊದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿ-2, ನಸಲಾಪೂರ ಅರ್ಬನ ಕೊ-ಆಫ್ ಕ್ರೆಡಿಟ್ ಸೊಸಾಯಿಟಿ ಲಿ., ನಸಲಾಪೂರ ಕಬ್ಬು ಬೆಳೆಗಾರರ ಸಹಕಾರಿ ಸಂಘ ನಿ., ನಸಲಾಪೂರ ಮಹಿಳಾ ಪತ್ತಿನ ಸಹಕಾರಿ ಸಂಘ ನಿ., ಪಾರ್ಶ್ವನಾಥ ಸೌಹಾರ್ದ ಸಹಕಾರಿ ಸಂಘ ನಿ. ಸಂಘಗಳ ಕಾರ್ಯದರ್ಶಿಗಳು ವರದಿ ವಾಚನ ಮಾಡಿದರು.

ಈ ಸಂದರ್ಭದಲ್ಲಿ ರಾಜಗೌಡ ಪಾಟೀಲ, ಜಯಪಾಲ ಬನವಣೆ, ಪಾಸಗೌಡಾ ಪಾಟೀಲ, ಮಹಾವೀರ ಪಾಟಿಲ , ಚೌಗೌಡ ಪಾಟೀಲ, ಸುರೇಂದ್ರ ಸಮಾಜೆ, ಮಹಾವೀರ ಖೋಂಬಾರೆ, ಬಾಹುಬಲಿ ಸಮಾಜೆ, ವರ್ಧಮಾನ ಬನವಣೆ, ನೇಮಗೌಡ ಪಾಟಿಲ, ರಾಹುಸಾಹೇಬ ಬೊಕೆ, ರಾಜು ಪರಮಾಜೆ, ರಾಜು ನಾಯಕ, ರಜಾಕ ತಾಂಬಟ, ನೇಮಗೌಡಾ ಪಾಟೀಲ, ಅರುಣ ನಾಯಿಕ, ಮಹಾದೇವ ಕಾಂಬಳೆ ಸಂಘದ ಉಪಾಧ್ಯಕ್ಷರು ನಿರ್ದೇಶಕರು ಸಿಬ್ಬಂದಿ ವರ್ಗ ಸೇರಿ ಈ ವೇಳೆ ಅನೇಕರು ಉಪಸ್ಥಿತರಿದ್ದರು.

# ಕೇಂದ್ರ ಸರ್ಕಾರದ ಕ್ರಮ ಸ್ವಾಗತಾರ್ಹ

**ಬೆಳಗಾವಿ:** ಭಾರತೀಯ ಯುವ ವೃತ್ತಿಪರರು, ಕುಟುಂಬಸ್ಥರು, ಹಿರಿಯ ಪ್ರಜೆಗಳಿಗೆ ಆರ್ಥಿಕ ರಕ್ಷಣೆಯ ಜೋತೆಗೆ ಜೀವನಂಶಕ ವಸ್ತುಗಳ ತೆರೆಗೆ ಶೂನ್ಯಕ್ಕೆ ಬಂದಿರುವದರಿಂದ ಜನಸಾಮನ್ಯರ ಜೀವನಕ್ಕೆ ಬಂಪರ ಕೊಡುಗೆ ನೀಡಿರುವ ಕೇಂದ್ರ ಸರ್ಕಾರದ ನಿರ್ಧಾರ ಸ್ವಾಗತಾರ್ಹ ಎಂದು ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಎಫ್.ಎಸ್.ಸಿದ್ದನಗೌಡರ ಹೇಳಿದ್ದಾರೆ.



ಮಾಧ್ಯಮ ಪ್ರಕಟಣೆ ಮೂಲಕ ತಿಳಿಸಿದ ಅವರು, ಜೀವ ಉಳಿಸುವ ಔಷಧಿಗಳು, ವೈದ್ಯಕೀಯ ಸಾಧನಗಳು ಗಮನಾರ್ಹವಾಗಿ ಅಗ್ಗವಾಗಿವೆ.

ಸಾಬೂನುಗಳು ಮತ್ತು ಶ್ಯಾಂಪೂಗಳಿಂದ ಹಿಡಿದು ಬೈಸಿಕಲ್‌ಗಳು ಮತ್ತು ಕಿಚನ್‌ವೇರ್ ವರೆಗೆ, ಜಿಎಸ್‌ಟಿ ದರಗಳನ್ನು 5%ಕ್ಕೆ ಇಳಿಸಲಾಗಿದೆ. ಹಾಲು, ಪನೀರ್, ಚಪಾಟಿಸ್, ಪರೋಟಾಸ್-ಎಲ್ಲಾ ಅಗತ್ಯ ವಸ್ತುಗಳು-ಈಗ ತೆರಿಗೆ ಮುಕ್ತವಾಗಿದೆ.

ದೇಶದ ರೈತರು ಟ್ರಾಕ್ಟರುಗಳು, ಕೃಷಿ-ಉಪಕರಣಗಳು ಮತ್ತು ರಸಗೊಬ್ಬರಗಳು ಈಗ ಕೇವಲ 5% ಜಿಎಸ್ ಟಿಗೆ ಒಳಪಡುವದರಿಂದ ಕಡಿಮೆ ವೆಚ್ಚದಲ್ಲಿ, ಹೆಚ್ಚು ಉತ್ಪಾದನೆ ಮಾಡುವದಾಗಿದೆ. ಸಣ್ಣ ವ್ಯಾಪಾರಿಗಳು, ಕುಶಲಕರ್ಮಿಗಳು ಮತ್ತು ಎಂಎಸ್‌ಎಂಇಗಳು ಕಾರ್ಯಕ್ಷಮತೆ ಹೆಚ್ಚಾಗಲಿದೆ.

ರಾಜಕಿಯಕ್ಕಿಂತ ಮೊದಲು ರಾಷ್ಟ್ ಎನ್ನುವ ಹಾಗೆ, ಸಹಕಾರಿ ತತ್ವದಡಿ ಜನರ ಪರ, ಬಡವರ ಪರ, ಮಧ್ಯಮವರ್ಗದ ಪರವಾದ ನಿರ್ಣಯ ಇದಾಗಿದ್ದು ನೇರವಾಗಿ ಜೀವನ ವೆಚ್ಚವನ್ನು ಕಡಿಮೆ ಮಾಡಿದಂತಾಗಿದೆ. ಎಲ್ಲಾ ಜೀವನ ಮತ್ತು ಆರೋಗ್ಯ ವಿಮಾ ಪಾಲಿಸಿಗಳ ಮೇಲೆ ಜಿಎಸ್ಟಿ ವಿನಾಯಿತಿ ನಿಡಿದ್ದರಿಂದ ಜೀವನ ರಕ್ಷಣೆ ನೀಡಿದಂತಾಗಿದೆ. ಶಿಕ್ಷಣಕ್ಕೆ ಸಂಬಂಧಿಸಿದ ನಕ್ಷೆಗಳು ಅಟ್ಲಾಸ್ಗಳು, ಗ್ಲೋಬ್ಗಳು ಪೆನ್ಸಿಲ್ಗಳು, ಕ್ರೇಯಾನ್ಗಳು ನೋಟ್ಬುಕ್ ಶೂನ್ಯ ಜಿಎಸ್ಟಿಗೆ ಒಳಪಡುವದರೊಂದಿಗೆ ಶಿಕ್ಷಣ ವಲಯಕ್ಕೆ ಆದ್ಯತೆ ನೀಡಿದಂತಾಗಿದೆ. ಎಲೆಕ್ಟ್ರಾನಿಕ ವಸ್ತಗಳ ಮೇಲಿನ ಜಿಎಸ್ಟಿ 28% ರಿಂದ 18%ಕ್ಕೆ ಇಳಿದಾಗಿದೆ. ಹನಿ ನೀರಾವರಿ ವ್ಯವಸ್ಥೆಗಳು ಮತ್ತು ಸ್ಪ್ರಿಂಕ್ಲರ್ಗಳು ಸಣ್ಣ ಡೀಸೆಲ್ ಎಂಜಿನ್ಗಳು ಟ್ರ್ಯಾಕ್ಟರ್ಗಳು ನಿರ್ದಿಷ್ಟ ಜೈವಿಕ ಕೀಟನಾಶಕಗಳು, ಸೂಕ್ಷ್ಮ ಪೋಷಕಾಂಶಗಳು-ಕೃಷಿ, ತೋಟಗಾರಿಕೆ ಅಥವಾ ಅರಣ್ಯ ಯಂತ್ರಗಳು ಮಣ್ಣಿನ ಸಿದ್ಧತೆ, ಕೃಷಿ, ಕೊಯ್ಲು ಮತ್ತು ಒಕ್ಕಣಿಕೆ ಯಂತ್ರಗಳ ಜಿಎಸ್ಟಿ ಕಡಿಮೆಯಾಗಿದೆ. ರಸಗೊಬ್ಬರ ಕಚ್ಚಾ ವಸ್ತುಗಳಾದ ಸಲ್ಫ್ಯೂರಿಕ್ ಆಮ್ಲ, ನೈಟ್ರಿಕ್ ಆಮ್ಲ, ಅಮೋನಿಯಾ, ಜೈವಿಕ ಕೀಟನಾಶಕಗಳು ಮತ್ತು ಸೂಕ್ಷ್ಮ ಪೋಷಕಾಂಶಗಳು 18% ಅಥವಾ 12% ರಿಂದ 5% ಕ್ಕೆ ಇಳಿದಿದ್ದು ಕೃಷಿ ಚಟುವಟಿಕೆಗಳಿಗೆ ಬೂಸ್ಟ್ ನೀಡಿದಂತಾಗಿದೆ. ರಕ್ಷಣಾವಲಯದ ವಿಮಾನ ಸಿಮ್ಯುಲೇಟರ್ಗಳು, ಗುರಿ ಸಿಮ್ಯುಲೇಟರ್ಗಳನ್ನು 18% ರಿಂದ ಶೂನ್ಯ ಜಿಎಸ್ಟಿಗೆ ಇಳಿಸಲಾಗಿದ್ದು ದೇಶದ ಭದ್ರತೆ ಸುಭದ್ರದ ಕಡೆ ಸಾಗಿದೆ.

ತೆರಿಗೆ ವಿವಾದಗಳ ತ್ವರಿತ ಪರಿಹಾರಕ್ಕಾಗಿ 2025 ರ ಅಂತ್ಯದ ವೇಳೆಗೆ ಜಿಎಸ್ಟಿ ಮೇಲ್ಮನವಿ ನ್ಯಾಯಮಂಡಳಿ ಕಾರ್ಯಾರಂಭ ಮಾಡಲಿದೆ ಎಂದು ತಿಳಿಸಿದ್ದಾರೆ.

# ಮಕ್ಕಳ ಪಾಲನೆ ಪೋಷಣೆ ನಮ್ಮೆಲ್ಲರ ಕರ್ತವ್ಯ

**ಗದಗ:** ಅನಾಥ, ಏಕ ಪಾಲಕ, ಭಿಕ್ಷಾಟನೆ ಮಾಡುತ್ತಿದ್ದ ಮಕ್ಕಳನ್ನು ದೈವಾಂಶ ಮಕ್ಕಳೆಂದು ತಿಳಿದು ಅವರ ಪಾಲನೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಸಭಾಭವನದಲ್ಲಿ ಗುರುವಾರ ಜರುಗಿದ ಮಕ್ಕಳ ರಕ್ಷಣೆ ಮತ್ತು ಪಾಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲಮಂದಿರದಲ್ಲಿರುವ ಮಕ್ಕಳ ಪಾಲನೆಯನ್ನು ಚೆನ್ನಾಗಿ ಮಾಡವುದು ನಮ್ಮೆಲ್ಲರ ಆದ್ಯ ಕರ್ತವ್ಯ ವಾಗಿದೆ,ಸಮಿತಿಯಲ್ಲಿರುವ ಸರ್ವ ಸದಸ್ಯರು ಜೆ ಜೆ ಆಯಟ್ ಕುರಿತು ಸಮಗ್ರವಾಗಿ ತಿಳಿದುಕೊಳ್ಳಬೇಕು ಅಂದಾಗ ಸಮಿತಿಯಿಂದ ಉತ್ತಮ ಕಾರ್ಯ ಕೈಗೊಂಡು ಮಕ್ಕಳನ್ನು ರಕ್ಷಿಸಿ ಪಾಲನೆ ಮಾಡಬಹುದಾಗಿದೆ ಬಾಲಮಂದಿರದಲ್ಲಿ ಕೆಲವು ಮಕ್ಕಳು ಅತಿಯಾಗಿ ತುಂಟತನ ಚೇಷ್ಠೆ ಮಾಡುತ್ತಿರುತ್ತಾರೆ ಅಂತಹವರನ್ನು ಗಮನಿಸಿ ಅವರನ್ನು ಬೇರೆ ಕೆಲಸಗಳಲ್ಲಿ ತೊಡುಗುವಂತೆ ಮಾಡಬೇಕು ಎಂದರು



ಮಕ್ಕಳ ರಕ್ಷಣೆ ಮತ್ತ ಪಾಲನೆಗೆ ನೇಮಿಸಿದ ಸಮಿತಿಯು ಪ್ರತಿ ತಿಂಗಳು ಸಂಬಂಧಿಸಿದ ಬಾಲಂಮದಿರಗಳಿಗೆ ಭೇಟಿ ನೀಡಿ ಅಲ್ಲಿನ ವಾಸ್ತವ ಸ್ಥಿತಿ ಯನ್ನು ತಿಳಿದುಕೊಳ್ಳಬೇಕು, ಅಲ್ಲಿರುವ ಕುಂದು ಕೊರತೆಗಳನ್ನು ಸರ್ಕಾರದ ಗಮನಕ್ಕೆ ತರಬೇಕು ಮತ್ತು ಅಲ್ಲಿರುವ ಮಕ್ಕಳ ಬೇಡಿಕೆಗಳನ್ನು ತಿಳಿಯಬೇಕು, ಇಂತಹ ಸಂದರ್ಭದಲ್ಲಿ ಎಲ್ಲರ ಪಾಲ್ಗೊಳುವಿಕೆ ಅತ್ಯವಶ್ಯಕವಾಗಿದೆ ಸಮಾಜದಲ್ಲಿರುವ ಮಕ್ಕಳ ಭವಿಷ್ಯವನ್ನು ನಿರ್ಮಾಣ ಮಾಡಲು ದೊರೆತ ಅವಕಾಶ ಎಂದು ಭಾವಿಸಿ ಎಲ್ಲರು ಕಾರ್ಯ ಮಾಡಬೇಕು ಜಿಲ್ಲಾಡಳಿತದಿಂದ ಬಾಲಮಂದಿರದಲ್ಲಿರುವ ಮಕ್ಕಳಿಗೆ ವಿದ್ಯಾಭ್ಯಾಸ ಮಾಡಲು ಅನುಕೂಲ ಕಲ್ಪಿಸಲಾಗುತ್ತದೆ ಮತ್ತು ಕಿತ್ತೂರು ಚೆನ್ನಮ್ಮ, ಮೊರಾರ್ಜಿ ದೇಸಾಯಿ ಅಂತಹ ಶಾಲೆಗಳಲ್ಲಿ ಪ್ರಮುಖ್ಯತೆ ನೀಡಲಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಡಾ ದುರಗೇಶ ಅವರು ತಿಳಿಸಿದರು.

ಸಭೆಯಲ್ಲಿ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಮಾತನಾಡಿ ಜಿಲ್ಲೆಯಲಿರುವ ಸರ್ಕಾರಿ ಮತ್ತು ಖಾಸಗಿ ಬಾಲಮಂದಿರ ಅಂಕಿ ಅಂಶ ನೀಡಿದರು,ಹಾಗು ಸರ್ಕಾರಿ ಬಾಲ ಮಂದಿರ ನಿರ್ಮಾಣಕ್ಕೆ ಬೇಕಾದ ಅನುದಾನಕ್ಕೆ ಈಗಾಗಲೇ ಸರ್ಕಾರಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು.

ಸಭೆಗೆ ಆಗಮಿಸಿದ ಬಾಲಮಂದಿರದ ಮುಖ್ಯಸ್ಥರು ಬಾಲಮಂದಿರದಲ್ಲಿರುವ ಮಕ್ಕಳ ಮಾಹಿತಿಯನ್ನು ಸಭೆಗೆ ತಿಳಿಸಿದರು. ಸಭೆಯಲ್ಲಿ ಬಾಲಂಮದಿರದ ಮುಖ್ಯಸ್ತರು ಬಾಲ ಮಕ್ಕಳ ರಕ್ಷಣೆ ಮತ್ತು ಪಾಲನಾ ಸಮಿತಿಯ ಸದಸ್ಯರು ಹಾಜರಿದ್ದರು.

# ರಾಜ್ಯ ಪ್ರಶಸ್ತಿಗೆ ಉಪನ್ಯಾಸಕಿ ಜ್ಯೋತಿ ಆಯ್ಕೆ

**ಬೆಳಗಾವಿ:** ನಗರದ ಶಹಾಪುರದಲ್ಲಿರುವ ಸರ್ಕಾರಿ ಚಿಂತಾಮಣಿ ರಾವ್ ಪದವಿ ಪೂರ್ವ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿರುವ ಕನ್ನಡ ಉಪನ್ಯಾಸಕರಾದ ಜ್ಯೋತಿ ಸಿ .ಎಂ ಅವರು ರಾಜ್ಯ ಸರ್ಕಾರ ನೀಡುವ ಉತ್ತಮ ಉಪನ್ಯಾಸಕ ರಾಜ್ಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.



ಜ್ಯೋತಿ ಸಿ.ಎಂ. ಅವರು ವಿವಿಧ ಸಂಘ ಸಂಸ್ಥೆಗಳು ನೀಡುವ ರಾಷ್ಟ್ರ ಹಾಗೂ ರಾಜ್ಯ 92 ಕ್ಕಿಂತ ಹೆಚ್ಚು ಪ್ರಶಸ್ತಿಗಳನ್ನು ಪಡೆದಿರುತ್ತಾರೆ. ವಿದ್ಯಾರ್ಥಿಗಳ ಪ್ರಗತಿಗಾಗಿ ಸಾಕಷ್ಟು ಶ್ರಮಿಸಿದ್ದು ಪ್ರತಿಶತ ನೂರರಷ್ಟು ಫಲಿತಾಂಶ ಮಾಡುವಲ್ಲಿ ಯಶಸ್ವಿಯಾಗಿರುತ್ತಾರೆ. ರಾಷ್ಟ್ರೀಯ ಸೇವೆ ಯೋಜನೆ ಸಾಂಸ್ಕೃತಿಕ ಕಾರ್ಯಕ್ರಮಗಳು ಕ್ರೀಡಾ ಚಟುವಟಿಕೆಗಳು ಹಾಗೂ ಇನ್ನಿತರ ಎಲ್ಲಾ ರಂಗಗಳಲ್ಲಿ ತಮ್ಮದೇ ಆದ ಸೇವೆಯನ್ನ ಸಲ್ಲಿಸಿರುತ್ತಾರೆ. ಅಂತರಾಷ್ಟ್ರೀಯ ಸಾಂಸ್ಕೃತಿಕ ವಿಶ್ವವಿದ್ಯಾಲಯ ದವರು ಇವರ ಶಿಕ್ಷಣ, ಸಾಹಿತ್ಯ ಹಾಗೂ ಸಮಾಜ ಸೇವೆಯ ಕ್ಷೇತ್ರದ ಸೇವೆಗಾಗಿ ಗೌರವ ಡಾಕ್ಟರೇಟ್ ಪದವಿಯನ್ನು ನೀಡಿ ಗೌರವಿಸಿರುತ್ತಾರೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ (ಸೆ.05) ಬೆಳಿಗ್ಗೆ 10 ಗಂಟೆಗೆ ಬ್ಯಾಂಕ್ವೆಟ್ ಸಭಾಂಗಣ, ವಿಧಾನಸೌಧ ಡಾ.ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರಿನಲ್ಲಿ ನಡೆಯುವ ಭಾರತ ರತ್ನ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ರವರ ಜನ್ಮ ದಿನಾಚರಣೆ ಅಂಗವಾಗಿ ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭ-2025 ದಲ್ಲಿ ಉಪನ್ಯಾಸಕರಾದ ಜ್ಯೋತಿ ಸಿ.ಎಂ ಅವರಿಗೆ ಪ್ರಶಸ್ತಿ ಪ್ರಧಾನ ಮಾಡಲಾಗುವುದು.

# ಮೋದಿ ಸರ್ಕಾರ ಜಾಗತಿಕ ಸವಾಲುಗಳನ್ನು ಮೆಟ್ಟಿ ನಿಂತಿದೆ

**ವಿಜಯಪುರ:** ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ಜಾಗತಿಕ ಸವಾಲುಗಳನ್ನು ಮೆಟ್ಟಿ ನಿಂತು ದೇಶವನ್ನು ಅಭಿವೃದ್ಧಿಯ ಮುಂಚೂಣಿಗೆ ಕೊಂಡೊಯ್ದಿದೆ, ಇದರ ಜೊತೆ ಜೊತೆಗೇ ಸಾಮಾಜದ ಕಟ್ಟಕಡೆಯ ಜನರೂ ಆರ್ಥಿಕ ಚೈತನ್ಯ ಹೊಂದಲು ಹತ್ತು-ಹಲವು ಯೋಜನೆಗಳನ್ನು ರೂಪಿಸಿದೆ ಓಂ ಮೂಲಕ ಸ್ವಾವಲಂಬಿ ಭಾರತದ ಸಂಕಲ್ಪ, ವಿಕಸಿತ ಭಾರತದ ಯೋಜನೆಗಳು ಸಾಕಾರಗೊಳ್ಳಲು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿದೆ.

ಜನಸಾಮಾನ್ಯರಿಗೆ 'ತೆರಿಗೆ ಹೊರೆ ಹೆಚ್ಚಿಸುವುದು ಆದ್ಯತೆಯಲ್ಲ, ಇಳಿಸುವುದು ನಮ್ಮ ಕಾಳಜಿ' ಎಂದು ಪರಿಭಾವಿಸಿ ನೂತನ GST ದರ ಜಾರಿಗೆ ತರುವ ಮೂಲಕ ದಸರಾ ಹಾಗೂ ದೀಪಾವಳಿ ಉಡುಗೊರೆ ನೀಡಿರುವ ಹೆಮ್ಮೆಯ ಪ್ರಧಾನಿ ಮೋದಿ ಜೀ ಅವರ ನೇತೃತ್ವದ ಸರ್ಕಾರವನ್ನು ನಾಡಿನ ಜನಸಾಮಾನ್ಯರ ಪರವಾಗಿ ಅಭಿನಂದಿಸುವೆ ಎಂದು ಸಂಸದ ರಮೇಶ ಜಿಗಜಿಣಗಿ ತಿಳಿಸಿದ್ದಾರೆ.



ದೇಶದ ರೈತರು, ಸಣ್ಣ ಮತ್ತು ಮಧ್ಯಮ ವರ್ಗದವರು, ಮಹಿಳೆಯರು ಮತ್ತು ಯುವಕರು ಈ ಸುಧಾರಣೆಗಳಿಂದ ಪ್ರಯೋಜನ ಪಡೆಯುವುದರ ಜೊತೆಗೆ ಸಣ್ಣ ವ್ಯಾಪಾರಿಗಳು, ಮತ್ತು ಉದ್ಯಮಿಗಳು ವ್ಯಾಪಾರ ಮಾಡುವುದು ಸುಲಭವಾಗುವ ಮೂಲಕ ದೇಶದ ಆರ್ಥಿಕತೆಯನ್ನು ಬಲಪಡಿಸುತ್ತದೆ. ಸಾಮಾನ್ಯ ಜನರ ಜೀವನವನ್ನು ಸರಳಗೊಳಿಸುವುದು ಮತ್ತು ಸಣ್ಣ ವ್ಯವಹಾರಗಳಿಗೆ ವ್ಯಾಪಾರ ವಾತಾವರಣವನ್ನು ಸುಧಾರಿಸುವುದು ಈ ಸುಧಾರಣೆಗಳ ಉದ್ದೇಶವಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶಿ ಹಾಡುಗಳು ಕಾರ್ಯಕ್ರಮ

**ಮೂಡಲಗಿ:** ನಮ್ಮ ಉತ್ತರ ಕರ್ನಾಟಕದ ಹಳ್ಳಿ ಹಳ್ಳಿಯಲ್ಲಿ ಮುಂಜಾನೆ ಆರಂಭವಾಗುವದೆ ಜಾನಪದ ಹಾಡಿನ ಮೂಲಕ, ನಮ್ಮ ಹಳ್ಳಿ ಜನರು ಪದ ಕಟ್ಟಿ ಹಾಡಿ ತಲತಲಾಂತರದವರೆಗೆ ನಾಲಿಗೆಯಿಂದ ನಾಲಿಗೆಗೆ ಹಂಚಿ ಹೋದ ಜಾನಪದ ಸಾಹಿತ್ಯದ ಪರಂಪರೆಯನ್ನು ಉಳಿಸಿ ಬೆಳೆಸುವ ದೊಡ್ಡ ಜವಾಬ್ದಾರಿ ಇಂದಿನ ಯುವ ಪೀಳಿಗೆಗೆ ಬರಬೇಕಿದೆ ಎಂದು ಯುವ ಲೇಖಕ ಶಿವಲಿಂಗ ದಾನನ್ನವರ ಹೇಳಿದರು,

ಬುಧವಾರ ಗಜಾನನ ಉತ್ಸವ ಸಮೀತಿ ಖಾನಟ್ಟಿ ಹಾಗೂ ಸಿರಿ ಸಂಗಮ ಸಮೀತಿ ಖಾನಟ್ಟಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ಯುಟುಬ್‌ನಲ್ಲಿ ಪ್ರಖ್ಯಾತಿ ಪಡೆದ ಜನಪದ ಶೈಲಿಯ ಗಾಯಕರಿಂದ "ದೇಶಿ ಹಾಡುಗಳು' ಕಾರ್ಯಕ್ರಮದಲ್ಲಿ ಜನಪದ ಕಲಾವಿದರನ್ನು ಸತ್ಕರಿಸಿ ಮಾತನಾಡಿದರು. ನಮ್ಮ ಉತ್ತರ ಕರ್ನಾಟಕದ ಭಾಷೆ ಎಂದರೆ ಅದೊಂದು ದೇವ ಭಾಷೆ,ನಮ್ಮ ಪೂರ್ವಜರು ಈ ಭಾಷೆಯನ್ನು ಮಾತಾಡಿ ದೇವರನ್ನು ಒಲಿಸಿಕೊಂಡಿದ್ದರು, ಬಸವಣ್ಣ,ಅಕ್ಕ ಮಾಹಾದೇವಿ ಅಲ್ಲಮರಂತಹ ಬಸವಾದಿ ಶರಣರೆಲ್ಲ ನುಡಿದು,ನುಡಿಸಿ ಕನ್ನಡಿಗರನೆಲ್ಲ ಹಾಡಿಸಿದ ಸುಂದರವಾದ ಸೊಗಡಿನ ಭಾಷೆ ನಮ್ಮ ಕನ್ನಡ ಎಂದರು.

ಇದೇ ಸಂದರ್ಭದಲ್ಲಿ ಗಾಯಕಿರಾದ ಪ್ರೇಮಾ ವಿಜಯಪೂರ ದೀಪಾ ಹಳ್ಯಾಳ, ಶ್ರಾವಣಿ ಕೊಲ್ಹಾಪುರ, ನೃತ್ಯ ಕಲಾವಿದ ಬಸವರಾಜ ಬಿರಾದಾರ, ಹಾಲೇಶ ಇದ್ದರು.

# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಚ್ಚುಕಟ್ಟಾಗಿ ಆಚರಿಸಿ

**ಕೊಪ್ಪಳ:** ಪ್ರತಿ ವರ್ಷದಂತೆ ಈ ವರ್ಷವು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ಆಚರಣೆ ಮಾಡಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸೆಪ್ಟೆಂಬರ್ 17 ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಧ್ವಜಾರೋಹಣವಾದ ನಂತರ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರ ಧ್ವಜಾರೋಹಣ ನೆರವೇರಲಿದ್ದು, ಈ ಕಾರ್ಯಕ್ರಮಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಎಲ್ಲಾ ಅಧಿಕಾರಿಗಳು ಭಾಗವಹಿಸಬೇಕು. ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳಿಗೆ ಬೆಳಗಿನ ಉಪಹಾರದ ವ್ಯವಸ್ಥೆಯನ್ನು ಮಾಡಬೇಕೆಂದು ಹೇಳಿದರು.



ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದ ವೇದಿಕೆ ನಿರ್ಮಾಣ, ಪೆಂಡಾಲ ವ್ಯವಸ್ಥೆ ಸರಿಯಾಗಿ ಮಾಡಬೇಕು. ನಗರಸಭೆ ವತಿಯಿಂದ ಕ್ರೀಡಾಂಗಣದ ಸ್ವಚ್ಚತೆ, ಲೈಟಿಂಗ್ ವ್ಯವಸ್ಥೆ ಮತ್ತು ಕಾರ್ಯಕ್ರಮಕ್ಕೆ ಬರುವವರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಶಾಲಾ-ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಂಬಂಧಿಸಿದ ಇಲಾಖೆಯವರು ಚೆನ್ನಾಗಿ ಆಯೋಜನೆ ಮಾಡಬೇಕೆಂದರು. ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಗಾಗಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ತಮಗೆ ನೀಡಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮದ ದಿನದಂದು ನಗರದ ಎಲ್ಲಾ ಕಡೆ ಲೈಟಿಂಗ್ ವ್ಯವಸ್ಥೆ ಇರುವಂತೆ ನಗರಸಭೆ ಅವರು ನೋಡಿಕೊಳ್ಳಬೇಕು. ಪೊಲೀಸ್ ಇಲಾಖೆ ಸೇರಿದಂತೆ ಎನ್.ಸಿ.ಸಿ., ಎನ್.ಎಸ್.ಎಸ್. ಮಕ್ಕಳು ಪಥ ಸಂಚಲನ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು.

ಯಾವುದೇ ಅಗ್ನಿ ಅವಗಡ ಸಂಭವಿಸದಂತೆ ನೋಡಿಕೊಳ್ಳಲು ಅಗ್ನಿಶಾಮಕ ದಳದ ವಾಹನವನ್ನು ಜಿಲ್ಲಾ ಕ್ರೀಡಾಂಗಣದ ಹತ್ತಿರ ನಿಲ್ಲಿಸಬೇಕು. ಕಾರ್ಯಕ್ರಮದಲ್ಲಿ ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಆರ್.ಹೇಮಂತಕುಮಾರ್, ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟಿಲ್, ಕೊಪ್ಪಳ ತಹಶಿಲ್ದಾರ ವಿಠ್ಠಲ್ ಚೌಗಲಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಕೊಪ್ಪಳ ನಗರಸಭೆ ಪೌರಾಯುಕ್ತರಾದ ವೆಂಕಟೇಶ ನಾಗನೂರು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



## ತಹಶೀಲ್ದಾರರಿಂದ ಜಮೀನುಗಳಲ್ಲಿ ಸಮೀಕ್ಷೆ

**ಮುದ್ದೇಬಿಹಾಳ:** ಕಳೆದ 1 ತಿಂಗಳಿಂದಲೂ ಸುರಿದ ಧಾರಾಕಾರ ಮಳೆಗೆ ನಾಲತವಾಡ ಸೇರಿ ವಿವಿಧ ಜಮೀನುಗಳಲ್ಲಿ ಹಾಳಾದ ಬೆಳೆಗಳನ್ನು ತಹಶೀಲ್ದಾರ್ ಕೀರ್ತಿ ಚಾಲಕ ಭೇಟಿ ನೀಡಿ ಸಮೀಕ್ಷೆ ಕೈಗೊಂಡರು.
ಶೇ.33 ರಷ್ಟು ಬೆಳೆ ಹಾನಿಗೀಡಾದ ಪ್ರದೇಶ ಗಳಾದ

ತಾಲ್ಲೂಕಿನ ನಾಲತವಾಡ ಹೋಬಳಿ ಗೋನಾಳ(ಎಸ್‌ಎಚ್), ಜೈನಾಪೂರ, ಕಿಲಾರಹಟ್ಟಿ ಮಾವಿನಬಾವಿ ಗ್ರಾಮದ ವ್ಯಾಪ್ತಿಯಲ್ಲಿ ಹಾನಿಗೀಡಾದ ಹತ್ತಿ ಈರುಳ್ಳಿ ಬೆಳೆಗಳನ್ನು ವೀಕ್ಷಿಸಿದ ಅವರು ಸ್ಥಳದಲ್ಲಿದ್ದ ರೈತರಿಗೆ ಕಡ್ಡಾಯವಾಗಿ ವಿಮೆ ಮಾಡಿದ್ದಲ್ಲಿ ಪರಿಹಾರ ಸಿಗುತ್ತದೆ ಎಂದರು. ಒಂದು ವೇಳೆ ವಿಮೆ ಮಾಡಿಸದಿದ್ದಲ್ಲಿ ಎನ್ ಡಿಆರ್‌ಎಫ್, ಎಸ್‌ಆರ್‌ಎಫ್ ಯೋಜನೆಯಲ್ಲಿ ಪರಿಹಾರ ಮಾತ್ರ ಸಿಗಬಹುದು. ವಿಮೆ ಮೂಲಕ ಕ್ಲೈಮ್ ಮಾಡಿಕೊಳ್ಳುವವರು ತಮಗೆ ಈಗಾಗಲೇ ಒದಗಿಸಲಾದ ಟೋಲ್ ಫ್ರೀ ಸಂಖ್ಯೆಗೆ ಬೆಳೆ ಹಾನಿ ಕುರಿತು ಮಾಹಿತಿ ನೀಡಬೇಕು ಅಧಿಕಾರಿಗಳು ರೈತರಿಗೆ ತಿಳಿಸಿದರು. ಹಲವು ರೈತರಿಗೆ ಬೆಳೆ ಹಾನಿ ಕುರಿತು ಮತ್ತು ವಿಮೆ ಮಾಡಿಸಿಕೊಳ್ಳುವಲ್ಲಿ ಗೊಂದಲಕ್ಕೀಡಾಗುವ ಸಾಧ್ಯತೆ ಇದೆ. ಈ ನಿಟ್ಟಿನಲ್ಲಿ ರೈತರು ಕಂದಾಯ ಮತ್ತು ಕೃಷಿ ಇಲಾಖೆ ಅಧಿಕಾರಿಗಳಿಗೆ ಹಾಗೂ ಗ್ರಾಮಲೆಕ್ಕಿಗರನ್ನು ಸಮಸ್ಯೆ ಉಂಟಾಗದಂತೆ ಮಾಹಿತಿ ಪಡೆದುಕೊಳ್ಳಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ವೆಂಕಟೇಶ ಅಂಬಿಗೇರ, ಗ್ರಾಮ ಅಡಳಿತಧಿಕಾರಿ ಗಂಗಮ್ಮ ಕುಂಬಾರ, ಸೇರಿದಂತೆ ರೈತರು ಭಾಗವಹಿಸಿದ್ದರು

## ಮಧ್ಯವರ್ತಿಗಳಿಂದ ಮೋಸ ಹೋಗದಂತೆ ಎಚ್ಚರಿಕೆ

**ಕೊಪ್ಪಳ:** ಕನಕಗಿರಿ, ಕಾರಟಗಿ ಮತ್ತು ಗಂಗಾವತಿ ತಾಲ್ಲೂಕಿನಲ್ಲಿ ರೈತರಿಗೆ ಕೆಲ ಮಧ್ಯವರ್ತಿಗಳು ತೋಟಗಾರಿಕೆ ಇಲಾಖೆಯ ಹಾಗೂ ಕೆಲವೊಂದು ಕಂಪನಿಗಳ ಹೆಸರು ಹೇಳಿಕೊಂಡು ಪಿಎಂಕೆಎಸ್‌ವೈ ಯೋಜನೆಯಡಿ ಹನಿ ನೀರಾವರಿ ಸಲಕರಣೆಗಳನ್ನು ಕೊಡಿಸುವುದಾಗಿ ತಮಗೆ ತಿಳಿದಂತೆ ಸುಳ್ಳು ಹೇಳಿ ರೈತರಿಂದ ಹಣ ವಸೂಲಿ ಮಾಡಿ ರೈತರಿಗೆ ಮೋಸ ಮಾಡುತ್ತಿರುವುದು ತಿಳಿದು ಬಂದಿರುತ್ತದೆ.

ಆದ್ದರಿಂದ ರೈತರು ಮಧ್ಯವರ್ತಿಗಳಿಂದ ಮೋಸ ಹೋಗದೆ, ನೇರವಾಗಿ ತೋಟಗಾರಿಕೆ ಇಲಾಖೆ ಗಂಗಾವತಿ ಕಛೇರಿ ಅಥವಾ ಸಂಬಂಧಿಸಿದ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಭೇಟಿ ಮಾಡಿ ಸಂಪೂರ್ಣ ಮಾಹಿತಿ ಪಡೆದುಕೊಳ್ಳಬೇಕು. ತೋಟಗಾರಿಕೆ ಇಲಾಖೆಯಿಂದ ರೈತರಿಗೆ ತೋಟಗಾರಿಕೆ ಬೆಳೆಗಳಿಗೆ ಪಿಎಂಕೆಎಸ್‌ವೈ ಯೋಜನೆಯಡಿ ತಮ್ಮ ಹೊಲದಲ್ಲಿ ಹನಿ ನೀರಾವರಿ ಅಳವಡಿಸಿಕೊಂಡು ಸಹಾಯಧನ ಪಡೆಯಲು ಅವಕಾಶವಿರುತ್ತದೆ. ರೈತರು ಯಾವುದೇ ಮಧ್ಯವರ್ತಿಗಳ ಬಳಿ ತೆರಳದೇ ನೇರವಾಗಿ ತೋಟಗಾರಿಕೆ ಇಲಾಖೆಯಲ್ಲಿ ಅರ್ಜಿ ಸಲ್ಲಿಸಿ, ಸರ್ಕಾರದಿಂದ ಅಧಿಕೃತವಾಗಿ ಅನುಮೋದನೆಗೊಂಡ ತಮ್ಮ ಇಚ್ಛೆಯ ಕಂಪನಿಗಳನ್ನು ಆಯ್ಕೆ ಮಾಡಿಕೊಂಡು ತಾವು ಬೆಳೆಯುವ ತೋಟಗಾರಿಕೆ ಬೆಳೆಗಳಾದ ತರಕಾರಿ, ಹಣ್ಣು, ಹೂವು ಹಾಗೂ ಇತರೆ ತೋಟಗಾರಿಕೆ ಬೆಳೆಗಳಿಗೆ ಬೆಳೆಯುವ ವಿಸ್ತೀರ್ಣ ಹಾಗೂ ಬೆಳೆಗಳ ಅಂತರ ತಿಳಿಸಿ ಬೆಳೆಗೆ ಸಂಬಂಧಿಸಿದ ಹನಿ ನೀರಾವರಿ ಘಟಕದ ವೆಚ್ಚ ಹಾಗೂ ವಂತಿಕೆಯನ್ನು ಪಾವತಿಸುವ ಬಗ್ಗೆ ಅಳವಡಿಸುವ ಕಂಪನಿಯಿಂದ ಕೊಟೇಷನ್ ಪಡೆದು ದಾಖಲಾತಿಗಳನ್ನು ಕಂಪನಿಗೆ ಸಲ್ಲಿಸಿ, ನಂತರ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿ ಯೋಜನೆಯ ಸದುಪಯೋಗ ಪಡಸಿಕೊಳ್ಳಬೇಕು. ಯಾವುದೇ ಮಧ್ಯವರ್ತಿಗಳು ಮೋಸ ಮಾಡುವುದು ಕಂಡುಬಂದಲ್ಲಿ ನೇರವಾಗಿ ತೋಟಗಾರಿಕೆ ಇಲಾಖೆಗೆ ತಿಳಿಸಬೇಕು ಎಂದು ಗಂಗಾವತಿ, ಕನಕಗಿರಿ ಮತ್ತು ಕಾರಟಗಿಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಮ್ಮಲ್ಲಿರುವ ಇಚ್ಛಾಶಕ್ತಿಯೇ ನಿಜವಾದ ಗುರು



**ಘಟಪ್ರಭಾ:** ಪ್ರತಿಯೊಬ್ಬ ವಿದ್ಯಾರ್ಥಿಯು ನಿರ್ದಿಷ್ಟವಾದ ಗುರಿಯೊಂದಿಗೆ ಏಕ ಚಿತ್ತದಿಂದ ಅಭ್ಯಾಸ ಮಾಡುದರೊಂದಿಗೆ ನನಗೆ ನಾನೇ ಗುರು ಎನ್ನುವ ತತ್ವದೊಂದಿಗೆ ತಮ್ಮಲ್ಲಿರುವ ಇಚ್ಛಾಶಕ್ತಿಯನ್ನು ಅರಿತು ಏಕ ಚಿತ್ತದಿಂದ ಅಭ್ಯಾಸ ಮಾಡಿದರೆ ಯಶಸ್ಸು ಗಳಿಸುವುದು ನಿಶ್ಚಿತ ಎಂದು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗದ ಸಂಯೋಜಕರಾದ ಡಾ. ದೊಡ್ಡನಗೌಡ ಪಾಟೀಲ ಹೇಳಿದರು.

ಅವರು ಗುರುವಾರದಂದು ಪಟ್ಟಣದ ಕೆ ಎರ್ ಎಚ್ ವಿದ್ಯಾವರ್ಧಕ ಸಂಘದ ಪಾರ್ವತಿ ಕಾಡಪ್ಪಾ ಹುಕ್ಕೇರಿ ಪದವಿ ಮಹಾವಿದ್ಯಾಲಯ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಬಿ. ಶಂಕರಾನಂದ ಕಾಲೇಜಿನ ಪ್ರಾಂಶುಪಾಲರಾದ ಡಾ, ಹಿರಿಯಕ್ಕನವರ, ಸಾಮಾಜಿಕ ಕಾರ್ಯಕರ್ತ ಶ್ರೀಕಾಂತ ವಿ ಮಹಾಜನ, ಹಿರಿಯರಾದ ಸುರೇಶ್ ಪಾಟೀಲ,
ಎಸ್ ಕೆ ಹುಕ್ಕೇರಿ ಪಿ ಯ ಕಾಲೇಜಿನ ಪ್ರಾಂಶುಪಾಲ ಕಾಮಗೌಡರ, ಶ್ರೀಮತಿ, ಕೋಟಿ ಮೇಡಮ್ ಮುಂತಾದವರು ಮಾತನಾಡಿ ತಮ್ಮನ್ನು ಈ ಶಿಕ್ಷಣ ಸಂಸ್ಥೆಗೆ ಕಳಿಸಿದ ಪಾಲಕರಿಗೆ ವಿದ್ಯಾದಾನ ಮಾಡುತ್ತಿರುವ ಆಡಳಿತ ಮಂಡಳಿ ಹಾಗೂ ಶಿಕ್ಷಕರಿಗೆ ಕೀರ್ತಿ ತರಬೇಕು ಮತ್ತು ವಿದ್ಯಾರ್ಥಿಗಳು ಪರಿಶ್ರಮ ವಹಿಸಿ ಉತ್ತಮ ಅಂಕಗಳನ್ನು ಪಡೆದು ತಮ್ಮ ಪಾಲಕರಿಗೆ ಮತ್ತು ಸಂಸ್ಥೆಯ ಶತಮಾನದ ಸಾರ್ಥಕ ಗೊಳಿಸಬೇಕುಎಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ರಾಮಣ್ಣ ಹುಕ್ಕೇರಿ ಮಾತನಾಡಿ ಘಟಪ್ರಭಾದಲ್ಲಿ ನಾವು ಬೆಳೆಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ನಮ್ಮ ಮಕ್ಕಳು ಮುನ್ನಡೆಸುತ್ತಿದ್ದಾರೆ, ವಿದ್ಯಾರ್ಥಿಗಳು ಮತ್ತು ಪಾಲಕರು ಈ ಸೌಲಭ್ಯವನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು.

ಸಂಸ್ಥೆಯ ಕಾರ್ಯದರ್ಶಿ ಸಂತೋಷ ಹುಕ್ಕೇರಿ ಎಲ್ಲರನ್ನೂ ಸ್ವಾಗತಿಸಿದರು,

ಮಹಾವಿದ್ಯಾಲಯದ ಪ್ರಾಂಶುಪಾಲ ಮಾಳಗಿ ಅವರು ವಂದನಾರ್ಪಣೆ ನೆರವೇರಿಸಿದರು.

## ಬೆಳೆ ಹಾನಿ: ಶೀಘ್ರವೇ ಸರ್ಕಾರಕ್ಕೆ ವರದಿ ಸಲ್ಲಿಕೆ

**ಇಂಡಿ:** ತಾಲೂಕಿನ್ಯಾದಂತ ಭೀಮಾ ನದಿ ಪ್ರವಾಹದಿಂದ ಉಂಟಾದ ಬೆಳೆ ಹಾನಿಯ ಬಗ್ಗೆ ಜಂಟಿ ಸಮೀಕ್ಷೆ ನಡೆಸಲಾಗುತ್ತಿದ್ದು ಎನ್‌ಡಿಆರ್‌ಎಫ್ ಎಸ್‌ಡಿಆರ್‌ಎಫ್ ಸಮೀಕ್ಷೆ ಪಡೆದು ಭೀಮಾ ನದಿ ಭಾದಿತ ಪ್ರದೇಶಗಳ ಬೆಳೆ ಹಾನಿ ವರದಿ ಒಂದೆರಡು ದಿನದಲ್ಲಿ ಸಿಗಲಿದ್ದು ಶೀಘ್ರವೇ ಜಿಲ್ಲಾಧಿಕಾರಿಗಳ ಮೂಲಕ ಸರಕಾರಕ್ಕೆ ಸಲ್ಲಿಸಲಾಗುವದೆಂದು ಕಂದಾಯ ಉಪವಿಬಾಗಾಧಿಕಾರಿ ಅನುರಾಧಾ ವಸ್ತ್ರದ ಹೇಳಿದರು.

ತಾಲೂಕಿನ ಭೀಮಾ ನದಿ ದಂಡೆಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಎಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಭೀಮಾ ನದಿ ಪ್ರವಾಹದಿಂದ ಹಾನಿಯಾದ ಕೃಷಿ ಬೆಳೆಗಳನ್ನು ಜಂಟಿ ಸಮೀಕ್ಷೆ ಕೈಕೊಂಡ ಪಟ್ಟಿಯನ್ನು ಆಯಾ ಗ್ರಾ.ಪಂ ಗಳಲ್ಲಿ ಲಗ್ತಿಸಲಾಗಿದೆ. ಒಂದು ವಾರ ಕಾಲಾವಕಾಶ ಅಕ್ಷೇಪಣೆಗೆ ಸಲ್ಲಿಸಲು ನೀಡಿದೆ. ಅಂತಿಮ ವರದಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗುವದು ಎಂದರು. ಕಳೆದ ಹದಿನೈದು ದಿನಗಳಿಂದ ಮೇಲಿಂದ ಮೇಲೆ ಮಳೆ ಬರುತ್ತಿರುವದರಿಂದ ಸಮೀಕ್ಷೆಗೆ ಸೂಕ್ತ ಅವಕಾಶ ಸಿಗಲಿಲ್ಲ. ಈಗ ಸ್ವಲ್ಪ ಮಟ್ಟಿಗೆ ಮಳೆ ಕಡಿಮೆಯಾಗಿರುವದರಿಂದ ಸಮೀಕ್ಷೆ ನಡೆಸಲಾಗುತ್ತಿದೆ ಎಂದರು.ಬೆಳೆ ಹಾನಿ ಪರಿಶೀಲಿಸಿದ ಎಸಿ ತಾಲೂಕಿನ ಬಬಲಾದ ಸೇರಿದಂತೆ ವಿವಿಧ ಗ್ರಾಮಗಳಿಗೆ ಗುರುವಾರ ಭೇಟಿ ನೀಡಿ ಮಳೆಯಿಂದ ಆದ ಬೆಳೆ ಹಾನಿ ಪರಿಶೀಲನೆ ನಡೆಸಿದರು. ಮಳೆಯಿಂದ ಹಾನಿಯಾದ ಹೆಸರು, ಹತ್ತಿ, ತೊಗರಿ, ಉಳ್ಳಾಗಡ್ಡೆ ಮತ್ತಿತರ ಬೆಳೆ ಪರಿಶೀಲಿಸಿದರು. ಸಹಾಯಕ ನಿರ್ದೇಶಕರು ಕೃಷಿ ಮಹಾದೇವಪ್ಪ ಏವೂರ, ಪಿಡಿಒ ಬಬಲಾದ ಸಿದ್ದರಾಯ ಬಿರಾದಾರ ಮತ್ತಿತರಿದ್ದರು.

## ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ಕಾರ್ಯಾಗಾರ

**ಕಾರವಾರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಬೌದ್ಧಿಕ ಆಸ್ತಿ ಹಕ್ಕುಗಳ ವಿಷಯದ ಕುರಿತು ಸೆ.10 ರಿಂದ 12 ವರೆಗೆ ಮೂರು ದಿನಗಳ ಕಾರ್ಯಾಗಾರವನ್ನು ಅಕಾಡೆಮಿಯ ಬೆಂಗಳೂರು ಕಚೇರಿಯಲ್ಲಿ ಆಯೋಜಿಸಲಾಗಿದೆ. ಆಸಕ್ತ ವಿಜ್ಞಾನ, ಪದವಿ, ಸ್ನಾತಕೋತ್ತರ ವಿಜ್ಞಾನ, ಸಂಶೋಧನಾ ವಿದ್ಯಾರ್ಥಿಗಳು, ಕಾನೂನು ವಿದ್ಯಾರ್ಥಿಗಳು, ಉಪನ್ಯಾಸಕರು/ಪ್ರಾಧ್ಯಾಪಕರು ಭಾಗವಹಿಸಬಹುದಾಗಿದ್ದು, ಸೆ. 8 ರೊಳಗಾಗಿ (Google form- https://forms.gle/9Fds6N5vjzLpjNGX7) ಮೂಲಕ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಗಾರದ ಸಂಯೋಜಕ ಉಮೇಶ ಘಾಟಗೆ ಮೊ ಸಂಖ್ಯೆ; 9743084194, ಹಾಗೂ ಅಕಾಡೆಮಿಯ ವೆಬ್‌ಸೈಟ್ https://kstacademy.in ವೀಕ್ಷಿಸಬಹುದೆಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ


**ಬೆಳಗಾವಿ:** ತೋಟಗಾರಿಕೆ ಇಲಾಖೆಯಿಂದ 2025-26 ನೇ ಸಾಲಿನ ರಾಷ್ಟ್ರೀಯ ಖಾದ್ಯ ತೈಲ ಅಭಿವೃದ್ಧಿ ಯೋಜನೆಯಡಿ ಸಹಾಯಧನಕ್ಕಾಗಿ ಅರ್ಜಿ ಅಹ್ವಾನಿಸಲಾಗಿದೆ.ರಾಷ್ಟ್ರೀಯ ಖಾದ್ಯ ತೈಲ ಅಭಿವೃದ್ಧಿ ಯೋಜನೆಯಡಿ: ತಾಳೆ ಬೆಳೆ ಪ್ರದೇಶ ವಿಸ್ತರಣೆಗೆ ಪ್ರತಿ ಹೆಕ್ಟರಗೆ ರೂ. 29,000 ಸಹಾಯಧನ ನೀಡಲಾಗುವುದು.

ನಾಲ್ಕು ವರ್ಷಗಳವರೆಗೆ ತೋಟ ನಿರ್ವಹಣೆಗಾಗಿ ರೂ. 5250/- ಹೆಕ್ಟರ್, ಅಂತರ ಬೇಸಾಯಕ್ಕೆ ರೂ. 5250/- ಹೆಕ್ಟರ್, ಎರೆಹುಳು ಘಟಕ ನಿರ್ಮಾಣಕ್ಕೆ ರೂ.15000, ಡಿಸೇಲ್ ಮೋಟಾರ್ ಪಂಪಸೆಟ್‌ಗೆ ರೂ.8000/-, ಕೊಳವೆ ಬಾವಿ ನಿರ್ಮಾಣಕ್ಕೆ ರೂ.50000/-, ನೀರು ಕೊಯ್ಲು ಘಟಕ ನಿರ್ಮಾಣಕ್ಕೆ ರೂ.75000/- ಹಾಗೂ ಯಾಂತ್ರೀಕರಣಕ್ಕೆ ಸಹಾಯಧನ ನೀಡಲಾಗುವುದು. ಆಸಕ್ತ ಎಲ್ಲ ವರ್ಗದ ರೈತರು ಸವದತ್ತಿ ತೋಟಗಾರಿಕೆ ಇಲಾಖೆ ಕಛೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸವದತ್ತಿ ತೋಟಗಾರಿಕೆ ಇಲಾಖೆ ಕಛೇರಿಗೆ ಭೇಟಿ ನೀಡಬಹುದಾಗಿದೆ ಎಂದು ಸವದತ್ತಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಕುರಿತು ಪ್ರಗತಿ ಪರಿಶೀಲನೆ ಸಭೆ

**ಹಾವೇರಿ:** ಜಿಲ್ಲೆಯಲ್ಲಿ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಕಾರ್ಯಾಗಾರ ಹಾಗೂ ಪ್ರಗತಿ ಪರಿಶೀಲನೆ ಜಿಲ್ಲಾಮಟ್ಟದ ಸಭೆಯನ್ನು ಸೆಪ್ಟೆಂಬರ್ 10 ರಂದು ಬೆಳಿಗ್ಗೆ 10.30 ಗಂಟೆಗೆ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ರುಚಿ ಬಿಂದಲ್ ತಿಳಿಸಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಕಾರ್ಯಾಗಾರ ಹಾಗೂ ಪ್ರಗತಿ ಪರಿಶೀಲನೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾಮಟ್ಟದ ಕಾರ್ಯಾಗಾರವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಇಲಾಖೆಗಳೊಂದಿಗೆ ಇತರೆ ಇಲಾಖೆಗಳು ಸೇರಿ ಸಮನ್ವಯದೊಂದಿಗೆ ಕೆಲಸ ನಿರ್ವಹಿಸಬೇಕು. ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಂದ ಯಶೋಗಾಥೆ ಹಂಚಿಕೊಳ್ಳಲು ಫಲಾನುಭವಿಗಳನ್ನು ಪ್ರತಿ ಯೋಜನೆಗೆ- ಇಬ್ಬರಂತೆ ಆಯ್ಕೆ ಮಾಡಿ ಅವರನ್ನು ಕಾರ್ಯಾಗಾರಕ್ಕೆ ಕರೆದುಕೊಂಡು ಬರಲು ಆಯಾ ಇಲಾಖೆಯ ಮುಖ್ಯಸ್ಥರಿಗೆ ಜವಾಬ್ದಾರಿ ನೀಡಿದರು. ಹಾಗೆಯೇ ಕಾರ್ಯಾಗಾರ ನಡೆಸಲು ತೀರ್ಮಾನಿಸಲಾಗಿರುವ ಸಭಾಂಗಣದ ಸಿದ್ಧತೆ ಮತ್ತು ಸಕಲ ವ್ಯವಸ್ಥೆ ಮಾಡಿಕೊಳ್ಳಬೇಕು. ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಕುರಿತು ಕಲಾ ತಂಡಗಳ ಮೂಲಕ ನಾಟಕ ಪ್ರದರ್ಶನ ಹಾಗೂ ಸಂಗೀತ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು ಹಾಗೂ ಶಾಲಾ ಮಕ್ಕಳಿಂದ ನೃತ್ಯ ಸಂಯೋಜನೆ ಏರ್ಪಡಿಸಿ ಕಾರ್ಯಕ್ರಮದ ಮೆರಗು ಹೆಚ್ಚಿಸುವುದು, ಕಾರ್ಯಾಗಾರಕ್ಕೆ ಆಗಮಿಸುವ ಗ್ಯಾರಂಟಿ ಯೋಜನೆ ಫಲಾನುಭವಿಗಳು ಹಾಗೂ ಸಾರ್ವಜನಿಕರಿಗೆ ಊಟದ ವ್ಯವಸ್ಥೆ ಮಾಡುವಂತೆ ಸೂಚನೆ ನೀಡಿದರು ಯಾವುದೇ ಲೋಪಗಳಾಗದಂತೆ ಎಚ್ಚರಿಕೆಯಿಂದ ಸಕಲ ಪೂರ್ವ ತಯಾರಿ ಮಾಡಿಕೊಳ್ಳುವಂತೆ ಎಲ್ಲ ಅಧಿಕಾರಿಗಳಿಗೆ ಸಲಹೆ ನೀಡಿದರು.

ಸಭೆಯಲ್ಲಿ ಜಿ.ಪಂ.ಉಪ ಕಾರ್ಯದರ್ಶಿ ಪುನೀತ್, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಚಂದನವಾಹಿನಿಯಲ್ಲಿ 'ಸ್ಮಾರ್ಟ್ ಸೊಸೆಯಂದಿರು' ಕಾರ್ಯಕ್ರಮ

**ಬೆಳಗಾವಿ:** ದೂರದರ್ಶನ ಚಂದನವಾಹಿನಿಯಲ್ಲಿ ಅತ್ತೆ ಸೊಸೆಯಂದಿರ ಮಧುರ ಬಾಂಧವ್ಯವನ್ನು ಒಳಗೊಂಡ "ಸ್ಮಾರ್ಟ್ ಸೊಸೆಯಂದಿರು" ಎಂಬ ವಿನೂತನ ಮತ್ತು ಜನಪ್ರಿಯ ಕಾರ್ಯಕ್ರಮ ಪ್ರಸಾರವಾಗುತ್ತಿದೆ.

ಇದೊಂದು ಸಾಮಾಜಿಕ ಕಳಕಳಿಯುಳ್ಳ ಮತ್ತು ಕುಟುಂಬಗಳಲ್ಲಿ ಉತ್ತಮ ಸಂಬಂಧಗಳನ್ನು ಬೆಸೆಯುವ ನಿಟ್ಟಿನಲ್ಲಿ ರೂಪಗೊಂಡ ಕಾರ್ಯಕ್ರಮ. ಇಲ್ಲಿ ಅತ್ತೆ ಮತ್ತು ಸೊಸೆಯಂದಿರು ತಮ್ಮ ಮನದಾಳದ ಮಾತುಗಳ ಜೊತೆಗೆ ಮೋಜಿನ ಆಟ ಮತ್ತು ಹಾಡುಗಳೊಂದಿಗೆ ರಂಜಿಸಲಿದ್ದಾರೆ. ಎಂ. ಜಿ. ಗೋವಿಂದರಾಜು ಅವರ ನೇತೃತ್ವದಲ್ಲಿ ಚಂದನವಾಹಿನಿ ತಂಡ ಕೆಲವು ತಿಂಗಳುಗಳ ಹಿಂದೆ ಕುಂದಾನಗರಿ ಬೆಳಗಾವಿಯ ಶೆಟ್ಟಿಗಲ್ಲಿ, ಶಾಸ್ತ್ರಿ ನಗರ, ಪಂತನಗರ, ತಾರಾ ನಗರ, ಓಂ ನಗರ, ರುಕ್ಮಿಣಿ ನಗರ ಹಾಗೂ ವಿದ್ಯಾನಗರಗಳಲ್ಲಿ ಸ್ಮಾರ್ಟ್ ಸೊಸೆಯಂದಿರು ಕಾರ್ಯಕ್ರಮ ಚಿತ್ರೀಕರಿಸಿದ್ದಾರೆ.

ಬೆಳಗಾವಿಯ ಈ ವಿಶೇಷ ಸಂಚಿಕೆಗಳು ಇದೀಗ ಪ್ರಸಾರಕ್ಕೆ ಸಿದ್ಧವಿದ್ದು, ಸೆಪ್ಟೆಂಬರ್ 5 ರಿಂದ ಪ್ರತಿ ಶುಕ್ರವಾರ, ಸಂಜೆ 7.30ಕ್ಕೆ ದೂರದರ್ಶನ ಚಂದನ ವಾಹಿನಿಯಲ್ಲಿ ಪ್ರಸಾರಗೊಳ್ಳಲಿವೆ.
ಬೆಳಗಾವಿಯ ಜನತೆ ತಪ್ಪದೇ "ಸ್ಮಾರ್ಟ್ ಸೊಸೆಯಂದಿರು" ಕಾರ್ಯಕ್ರಮವನ್ನು ಕುಟುಂಬ ಸಮೇತ ವೀಕ್ಷಿಸಿ, ಆನಂದಿಸಿ ಮತ್ತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಕಾರ್ಯಕ್ರಮದ ನಿರ್ಮಾಪಕರಾದ ಎಂ.ಜಿ.ಗೋವಿಂದರಾಜು ಅವರು ತಿಳಿಸಿದ್ದಾರೆ.

## ಹಿರಿಯ ನಾಗರಿಕರಿಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ

**ಹಾವೇರಿ:** ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಸೆಪ್ಟೆಂಬರ್ 14 ರಂದು ಬೆಳಿಗ್ಗೆ 9-30 ಗಂಟೆಗೆ ಹಾವೇರಿ ನಗರದ ಚನ್ನಬಸಪ್ಪ ಮಾಗಾವಿ (ಗೆಳೆಯರ ಬಳಗ) ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದೆ.
**ಕ್ರೀಡಾ ಸ್ಪರ್ಧೆ:** ಪುರುಷ ಹಾಗೂ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಮ್ಯೂಸಿಕಲ್ ಚೇರ್, ಬಿರುಸಿನ ನಡಿಗೆ ಹಾಗೂ ಬಕೆಟ್‌ನಲ್ಲಿ ಬಾಲ್ ಎಸೆಯುವುದು ಸ್ಪರ್ಧೆ ಏರ್ಪಡಿಸಲಾಗಿದೆ.
**ಸಾಂಸ್ಕೃತಿಕ ಸ್ಪರ್ಧೆ:** ಪುರುಷ ಹಾಗೂ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಗಾಯನ ಸ್ಪರ್ಧೆ ಹಾಗೂ ಏಕ ಪಾತ್ರಾಭಿನಯ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ. ಈ ಸ್ಪರ್ಧೆಗಳಲ್ಲಿ 60 ರಿಂದ 69 ವರ್ಷ ಹಾಗೂ 70 ವರ್ಷ ಹಾಗೂ ಮೇಲ್ಪಟ್ಟವರು ಭಾಗವಹಿಸಬಹುದು.

ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಹಿರಿಯ ನಾಗರಿಕರನ್ನು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಆಸಕ್ತ ಹಿರಿಯ ನಾಗರೀಕರು ಆಯಾ ತಾಲೂಕಿನ ಎಮ್.ಆರ್.ಡಬ್ಲ್ಯೂ.ರವರಲ್ಲಿ ಹೆಸರನ್ನು ನೋಂದಾಯಿಸುವುದರ ಮೂಲಕ ಅಥವಾ ನೇರವಾಗಿ ಭಾಗವಹಿಸಬಹುದು. ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ಹಿರಿಯನಾಗರಿಕರು ಕಡ್ಡಾಯವಾಗಿ ತಮ್ಮ ಆಧಾರ ಕಾರ್ಡ ಪ್ರತಿಯನ್ನು ತಮ್ಮೊಂದಿಗೆ ತಂದು ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧೆಗಳಲ್ಲಿ ಭಾಗವಹಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಎಂ.ಆರ್.ಡಬ್ಲೂಗಳಾದ ಬ್ಯಾಡಗಿ-ನಾಗರಾಜ ಅಗಸನಹಳ್ಳಿ ಮೊ.9900554583, ಶಿಗ್ಗಾಂವ-ಸಿದ್ದಪ್ಪ ಮಸಳಿ ಮೊ.9008032497, ಹಾವೇರಿ- ಲಕ್ಷ್ಮವ್ವ ಈಳಗೇರ ಮೊ.9632052188, ಹಾನಗಲ್- ಶೇಖಪ್ಪ ಹುಲ್ಲತ್ತಿ ಮೊ.7760374425, ಸವಣೂರ-ಶಿವಪ್ಪ ಯರೇಶಿಮಿ ಮೊ.9632441802, ಹಿರೇಕೆರೂರ-ಸುರೇಶ ಅಜ್ಜಪ್ಪನವರ ಮೊ.9986252108, ರಾಣೇಬೆನ್ನೂರು-ತಿಪ್ಪೇಶ ಗಾಡಿ ಮೊ.9481343768 ಅವರನ್ನು ಸಂಪರ್ಕಿಸಲು ಕೋರಲಾಗಿದೆ.

## ಸ್ವಾಗತ ಕಮಾನಗಳ ನಿರ್ಮಾಣಕ್ಕೆ ಮೊದಲ ಆದ್ಯತೆ



**ಮೋಳೆ:** ಪುರಸಭೆಗೆ ನೂತನವಾಗಿ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ ದತ್ತಾ ವಾಸ್ಟರ್ ಇವರನ್ನು ಸ್ಥಾಯಿ ಸಮಿತಿ ಮೊದಲ ಸಭೆಯಲ್ಲಿ ಸರ್ವ ಸದಸ್ಯರು ಸತ್ಕರಿಸಿದರು.

ಗುರುವಾರ ಪುರಸಭೆಯಲ್ಲಿ ನಡೆದ ಮೊದಲ ಸಭೆಯಲ್ಲಿಸನ್ಮಾನ ಸ್ವೀಕರಿಸಿ ಮೊದಲ ಸಭೆಯಲ್ಲಿ ಮಾತನಾಡಿದ ದತ್ತಾ ವಾಸ್ಟರ್, ಪಟ್ಟಣದ ಎಲ್ಲ 27 ಸದಸ್ಯರ ಸಣ್ಣ ಪುಟ್ಟ ಸಮಸ್ಯೆಗಳನ್ನು ಬಗೆ ಹರಿಸಿ ಜನಪರ ಹಾಗೂ ಅಭಿವೃದ್ಧಿ ಪರ ಯೋಜನೆಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪ್ರಯತ್ನಿಸುವೆ ಎಂದ ಅವರು ಅಭಿವೃದ್ಧಿ ವಿಚಾರದಲ್ಲಿ ನಾವೆಲ್ಲರು ಒಂದಾಗಿರೋಣ ಎಂದು ಸರ್ವ ಸದಸ್ಯರಲ್ಲಿ ಮನವಿ ಮಾಡಿದರು. ಮಾಜಿ ಉಪ ಮುಖ್ಯಮಂತ್ರಿ, ಶಾಸಕರಾದ ಲಕ್ಷ್ಮಣ ಸವದಿ ಮಾರ್ಗದರ್ಶನದಲ್ಲಿ ಅಥಣಿ ಪ್ರವೇಶಿಸುವ ನಾಲ್ಕು ಮುಖ್ಯ ರಸ್ತೆಗಳಲ್ಲಿ ಸ್ವಾಗತ ದ್ವಾರಗಳನ್ನು ನಿರ್ಮಿಸುವ ಕಾರ್ಯ ಅತೀ ಶೀಘ್ರದಲ್ಲಿಯೇ ಪ್ರಾರಂಭಿಸುತ್ತೇವೆ ಮತ್ತು ಕಾಯಿಪಲ್ಲೆ ಮಾರುಕಟ್ಟೆಯಲ್ಲಿ ಮಾರಾಟಗಾರರಿಂದ ಹೆಚ್ಚುವರಿ ತೆರಿಗೆ ವಸೂಲಿ ಮಾಡುವುದನ್ನು ತಪ್ಪಿಸಲು ದರ ಪಟ್ಟಿಯುಳ್ಳ ಬೋರ್ಡಗಳನ್ನು ಅಳವಡಿಸಿದ್ದು, ಮಾರಾಟಗಾರರು ಬೋರ್ಡಗಳಲ್ಲಿನಷ್ಟೇ ಹಣ ಕೊಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಮಾತನಾಡಿದ ಪುರಸಭಾ ಸದಸ್ಯ ರಾವಸಾಹೇಬ ಐಹೊಳೆ, ನಿಮ್ಮ ಅಧ್ಯಕ್ಷ ಅವಧಿಯಲ್ಲಿ ಹೆಚ್ಚಿನ ಅಭಿವೃದ್ಧಿ ಕಾರ್ಯಗಳು ಅನುಷ್ಠಾನಗೊಳ್ಳಲಿ ಎಂದ ಅವರು 11 ನೇ ವಾರ್ಡನ ರಸ್ತೆಗಳಲ್ಲಿ ತಗ್ಗು ಬಿದ್ದ ಪರಿಣಾಮ ಸಾರ್ವಜನಿಕರಿಗೆ ಸಾಕಷ್ಟು ಅನಾನಕೂಲವಾಗಿದ್ದು, ತಕ್ಷಣ ಕ್ರಮ ಜರುಗಿಸಿ ಎಂದು ಮನವಿ ಮಾಡಿದರು.

ಸದಸ್ಯ ವಿಲೀನರಾಜ ಯಳಮಲ್ಲೆ ಮಾತನಾಡಿ, ಪಟ್ಟಣದಲ್ಲಿ ಹಂದಿ, ನಾಯಿಗಳ ಸಂಖ್ಯೆ ಹೆಚ್ಚಾದ ಪರಿಣಾಮ ಸಾರ್ವಜನಿಕರಿಗೆ ಅತೀ ತೊಂದರೆಯಾಗಿತ್ತಿದ್ದು, ತಕ್ಷಣ ಅವುಗಳನ್ನು ನಿಯಂತ್ರಣಕ್ಕೆ ಕ್ರಮ ಜರುಗಿಸಿ ಎಂದು ಮನವಿ ಮಾಡಿದರು. ವಾರ್ಡ ನಂಬರ 2 ಸದಸ್ಯ ಕಲ್ಲೇಶ ಮಡ್ಡಿ ಮಾತನಾಡಿ, ವಾರ್ಡಗಳಲ್ಲಿ ಬೀದಿ ದೀಪಗಳ ಕೊರತೆ ಇದೆ ಇದರಿಂದ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು, ತಕ್ಷಣ ಹೆಚ್ಚಿನ ಸಂಖ್ಯೆಯಲ್ಲಿ ಬೀದಿ ದೀಪಗಳನ್ನು ಎಲ್ಲ 27 ವಾರ್ಡ ಗಳಿಗೂ ಮಂಜೂರು ಮಾಡಿಸಿ ಎಂದರು. 13 ನೇ ವಾರ್ಡ ಸದಸ್ಯ ಮಲ್ಲೇಶ ಹುದ್ದಾರ ಮಾತನಾಡಿ, ಪಟ್ಟಣದ ಎಲ್ಲ 27 ವಾರ್ಡಗಳಲ್ಲಿನ 10 ರಿಂದ 15 ಸಾವಿರ ವರೆಗಿನ ಸಣ್ಣ ಪುಟ್ಟ ಕೆಲಸಗಳಿಗೆ ಆದ್ಯತೆ ಕೊಡಿ ಎಂದರು.

ಸಭೆಯಲ್ಲಿ ಸಂತೋಷ ಸಾವಡಕರ, ಪ್ರಮೋದ ಬಿಳ್ಳೂರ, ಉದಯ ಸೋಳಸಿ, ರಿಯಾಜ ಸನದಿ, ಮಲ್ಲಿಕಾರ್ಜುನ ಬುಟಾಳಿ, ದಿಲೀಪ ಲೋಣಾರೆ, ಸೈಯ್ಯದಮೀನ್ ಗದ್ಯಾಳ, ತಿಪ್ಪಣ್ಣ ಭಜಂತ್ರಿ, ಬಸವರಾಜ ಹಳ್ಳದಮಳ, ಬೀರಪ್ಪ ಯಕ್ಕಂಚಿ ಸೇರಿದಂತೆ ವ್ಯವಸ್ಥಾಪಕಿ ದಯಾ ಜೋಶಿ, ಕಂದಾಯ ವಿಭಾಗದ ಸಿದ್ದು ಮಾಂಗ, ಸಿಬ್ಬಂದಿ ರಾಜು ವಾಳವೇಕರ, ರವೀಂದ್ರ ಸಮಗೊಂಡ ಉಪಸ್ಥಿತರಿದ್ದರು.

## ಸೇನಾ ಆಯ್ಕೆಯ ಪೂರ್ವ ಸಿದ್ದತೆ ಬಗ್ಗೆ ತರಬೇತಿ

**ಕಾರವಾರ:** ಭಾರತೀಯ ಸೇನೆ/ಇತರೆ ಯೂನಿಫಾರ್ಮ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2025-26 ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ದತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ ಯುವಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಯು ಕಾರವಾರ ತಾಲೂಕಿನ ಮಾಜಾಳಿ ವೀರ ಬಹದ್ದೂರ ಹೆಂಜಾ ನಾಯ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಯಲ್ಲಿ ಮಾತ್ರ ನೀಡಲಾಗುವುದು. ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಅಕ್ಟೋಬರ್ 3 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ- ಪ್ರವರ್ಗ-1 ಕ್ಕೆ ರೂ. 2.50 ಲಕ್ಷಗಳು ಹಾಗೂ ಪ್ರವರ್ಗ-2(ಎ), 3(ಎ) ಮತ್ತು 3(ಬಿ) ಗಳಿಗೆ ರೂ. 1 ಲಕ್ಷಗಳ ಒಳಗಿರಬೇಕು.
ಅಭ್ಯರ್ಥಿಯು 10ನೇ ತರಗತಿಯನ್ನು ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ. 45 ರಷ್ಟು ಅಂಕಗಳನ್ನು ಪಡೆದಿರಬೇಕು. ವಯೋಮಿತಿಯು ಜನ್ಮ ದಿನಾಂಕ ಮತ್ತು ವಯಸ್ಸು 10ನೇ ತರಗತಿಯ ಅಂಕ ಪಟ್ಟಿಯಲ್ಲಿರುವಂತೆ 3 ಅಕ್ಟೋಬರ್ 2025 ಕ್ಕೆ ಅನ್ವಯಿಸುವಂತೆ ಅಭ್ಯರ್ಥಿಯ ವಯಸ್ಸನ್ನು ಪರಿಗಣಿಸಲಾಗುವುದು. ಅಭ್ಯರ್ಥಿಯು ಅಕ್ಟೋಬರ 3 2005 ರಿಂದ 3 ಅಕ್ಟೋಬರ 2008 ರ ನಡುವಿನ ಅವಧಿಯಲ್ಲಿ ಜನಿಸಿರಬೇಕು. ಅರ್ಜಿ ನಮೂನೆಯನ್ನು ಜಿಲ್ಲಾ /ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಡೆದು ಭರ್ತಿ ಮಾಡಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆಯ ಮೂಲಕ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ :08382-226588 ನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಧಾರವಾಡ:** ಧಾರವಾಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಚಾರ ಆರೋಗ್ಯ ಘಟಕಕ್ಕೆ ವಿವಿಧ ಹುದ್ದೆಗಳಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಎಂ.ಬಿ.ಬಿ.ಎಸ್ ವೈದ್ಯಾಧಿಕಾರಿಗಳು (2), ಶುಶ್ರೂಷಕರು (2), ಪ್ರಯೋಗ ಶಾಲಾ ತಂತ್ರಜ್ಞರು (2), ಒಟ್ಟು 6 ಹುದ್ದೆಗಳ ಆಯ್ಕೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತರು ಸೆಪ್ಟೆಂಬರ 10, 2025 ರಂದು ಬೆಳಿಗ್ಗೆ 10 ರಿಂದ ಮದ್ಯಾಹ್ನ 3 ಘಂಟೆಯವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿ ಸಭಾಭವನದಲ್ಲಿ ಅರ್ಜಿ ಸಲ್ಲಿಸಬಹುದು. ಆಸಕ್ತ ಅರ್ಹ ಅಭ್ಯರ್ಥಿಗಳು ಎನ್.ಹೆಚ್.ಎಮ್ ನಿಯಮಾನುಸಾರ ಮೂಲ ದಾಖಲಾತಿಗಳನ್ನು ಪರೀಶಿಲನೆ ಸಮಯದಲ್ಲಿ ಹಾಜರುಪಡಿಸಬೇಕು. ತದನಂತರ ಬಂದ ಅರ್ಜಿಗಳನ್ನು ಆಯ್ಕೆಯಲ್ಲಿ ಪರಿಗಣಿಸುವುದಿಲ್ಲ ಮತ್ತು ಸದರಿ ಆಯ್ಕೆ ಪ್ರಕ್ರೀಯೆಯಲ್ಲಿನ ಹುದ್ದೆಗಳನ್ನು ಹೆಚ್ಚಿಸುವ ಮತ್ತು ಕಡಿತಗೊಳಿಸುವ ಅಧಿಕಾರವನ್ನು ಧಾರವಾಡ ಜಿಲ್ಲಾ ಆರೋಗ್ಯ ಮತ್ತು ಕಟುಂಬ ಕಲ್ಯಾಣ ಸೊಸೈಟಿ ಹೊಂದಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಧಾರವಾಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿ ಎನ್‌ಎಚ್‌ಎಮ್ ವಿಭಾಗದಲ್ಲಿ ಸಂಪರ್ಕಿಸಬಹುದು ಮತ್ತು ಈ ಕುರಿತ ಮಾಹಿತಿಯನ್ನು ಕಚೇರಿಯ ಸೂಚನಾಫಲಕದಲ್ಲಿ ಪ್ರದರ್ಶಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಡಸಿನಕೊಪ್ಪ: ನಾಳೆ ವಿದ್ಯುತ್ ವ್ಯತ್ಯಯ

**ಧಾರವಾಡ:** 110 ಕೆವಿ. ತಡಸಿನಕೊಪ್ಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆಪ್ಟೆಂಬರ 07, 2025 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು 2ನೇ ತ್ರೈಮಾಸಿಕ ತುರ್ತು ಪಾಲನಾ ಕಾಮಗಾರಿಯನ್ನು ಕೈಗೊಳ್ಳುವುದರಿಂದ ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ 11 ಕೆವಿ ಮಾರ್ಗಗಳಲ್ಲಿ ಸೆಪ್ಟೆಂಬರ 07, 2025 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ತಡಸಿನಕೊಪ್ಪ, ಜೋಗೆಲ್ಲಾಪುರ, ಇಟ್ಟಿಗಟ್ಟಿ, ಕೆ.ಹೆಚ್.ಬಿ, ಉದಯಗಿರಿ, ವನಸಿರಿ ನಗರ, ರಾಜಾಜಿ ನಗರ, ಸತ್ತೂರ ವಿಲೇಜ್, ಸತ್ತೂರ, ಆಶ್ರಯ ಕಾಲೋನಿ, ಎನ್.ಜಿ.ಇ.ಎಫ್, ಎಸ್.ಡಿ.ಎಮ್ ಮೆಡಿಕಲ್ ಕಾಲೇಜ್, ಎಸ್.ಡಿ.ಎಮ್ ಡೆಂಟಲ್ ಕಾಲೇಜ್, 2ನೇ ಕೆ.ಹೆಚ್.ಬಿ ಹಂತ, ಐಐಐಟಿ, ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ ಸತ್ತೂರ, ರಾಶಿಫಾರ್ಮ, ಎಐಆರ್, ನವಲೂರ ರೇಲ್ವೆ ಸ್ಟೇಶನ್, ಸಂಜೀವಿನಿ ಪಾರ್ಕ, ಹುಬ್ಬಳ್ಳಿ–ಧಾರವಾಡ ಡ್ಯೂರೆಬಲ್ ಗೂಡ್ಸ(ಏಕಸ್), ಕೆಎಮ್‌ಎಫ್ ರಾಯಾಪೂರ, ಐಓಸಿಎಲ್ ರಾಯಾಪೂರ ಮತ್ತು ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಶ್ರೀ ವಿಶ್ವಕರ್ಮ ಜಯಂತಿ ಪೂರ್ವಭಾವಿ ಸಭೆ

**ಹುಬ್ಬಳ್ಳಿ:** ತಾಲೂಕು ಆಡಳಿತದಿಂದ ಸೆಪ್ಟೆಂಬರ್ 17 ರಂದು ಶ್ರೀ ವಿಶ್ವಕರ್ಮ ಜಯಂತಿಯನ್ನು ಆಚರಿಸುವ ಹಿನ್ನೆಲೆಯಲ್ಲಿ ಜಯಂತಿ ಪೂರ್ವಭಾವಿ ಸಭೆಯನ್ನು ಸೆಪ್ಟೆಂಬರ್ 9 ರಂದು ಸಂಜೆ 4 ಗಂಟೆಗೆ ತಾಲೂಕು ಆಡಳಿತಸೌಧದ ತಹಶೀಲ್ದಾರ ಕಾರ್ಯಾಲಯದ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿವಿಧ ಸಂಘ, ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು, ಸಾರ್ವಜನಿಕರು ಸಭೆಗೆ ಹಾಜರಾಗುವಂತೆ ಹುಬ್ಬಳ್ಳಿ ನಗರ ತಹಶೀಲ್ದಾರರಾದ ಮಹೇಶ್ ಗಸ್ತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ನೋಂದಣಿ ಮಾಡಬಹುದಾಗಿದೆ.

# ಕಳಪೆ ಕಾಮಗಾರಿ: ಶೀಘ್ರ ಪರಿಹಾರಕ್ಕಾಗಿ ಆಗ್ರಹಿಸಿ ಮನವಿ



**ನಿಡಗುಂದಿ:** ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಸೋಮನಾಳ ಗ್ರಾಮದ ರೈತರಾದ ಮಂಜುನಾಥ ತಳವಾರ ಸರ್ವೇ ನಂಬರ 163/3 ರ ಜಮೀನಿನಲ್ಲಿ ಮುಳವಾಡ ಏತನೀರಾವರಿ ಯೋಜನೆಯಡಿ ವಡವಡಗಿ ಕೆರೆ ನೀರು ತುಂಬುವ ಕಾಮಗಾರಿಗೆ ಸಂಬಂಧಿಸಿದಂತೆ ಈ ರೈತರಿಗೆ ಭೂ ಪರಿಹಾರ ಹಾಗೂ ಇಲ್ಲಿಯವರೆಗೆ ಆಗಿರುವ ನಷ್ಟ ಒದಗಿಸುವುದು ಹಾಗೂ ಈ ನಷ್ಟಕ್ಕೆ ಕಾರಣರಾದ ಇಲಾಖೆ ಅಧಿಕಾರಿಗಳನ್ನ ವಜಾ ಗೊಳಿಸುವುದು ಮತ್ತು ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಕೆ.ಬಿ.ಜೆ.ಎನ್.ಎಲ್‌ನ ಮುಖ್ಯ ಅಭಿಯಂತರರಾದ ಡಿ ಬಸವರಾಜ ಹಾಗೂ ಡಿ.ಸಿ ಆದಂತಹ ಆಯ್.ಎಲ್.ಕಳಸದ ಅವರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಅವರು ಮನವಿ ಸಲ್ಲಿಸಿ ಮಾತನಾಡುತ್ತಾ ತಮ್ಮ ಇಲಾಖೆಯ ವತಿಯಿಂದ ಮಾಡಿರುವ ಮುಳವಾಡ ಏತನೀರಾವರಿ ಯೋಜನೆಯಡಿ ವಡವಡಗಿ ಕೆರೆ ನೀರು ತುಂಬುವ ಕಾಮಗಾರಿಗೆ ಸಂಬಂಧಿಸಿದಂತೆ ಕಾಮಗಾರಿಯೂ ಸಂಪೂರ್ಣ ಮಾಡದೇಗುತ್ತಿಗೆದಾರರು ಬಿಲ್ ಸಂದಾಯ ಮಾಡಿಕೊಂಡಿರುತ್ತಾರೆ, ಇದಕ್ಕೆ ಇಲಾಖೆಯ ಅಧಿಕಾರಿಗಳು ಶಾಮಿಲಾಗಿರುವುದು ಸ್ಪಷ್ಟವಾಗಿ ಕಂಡುಬರುತ್ತಿದೆ.

ನಷ್ಟಗೊಂಡ ರೈತರಿಗೆ ಇಲ್ಲಿಯವರೆಗೆ ಯಾವುದೇ ಭೂ ಪರಿಹಾರ ನೀಡಿರುವುದಿಲ್ಲ, 1972 ರಿಂದ ಜಮೀನಿನಲ್ಲಿ ವಿದ್ಯುತ್ ಸಂಪರ್ಕಇದ್ದುಒಟ್ಟಾರೆ 638 ದಾಳಿಂಬೆ ಇದ್ದು ಒಂದು ಬಾವಿ, ಒಂದು ಬೋರವೆಲ್‌ಇದ್ದು 50 ವರ್ಷಗಳಿಂದ ತೋಟ ಮಾಡುತ್ತಿದ್ದರು ಗಣನೆಗೆ ತೆಗೆದುಕೊಳ್ಳದೇ ಅವುಗಳನ್ನು ಪ್ರಭಾವಿಗಳನ್ನು ಕೈವಾಡದಿಂದರೈತರಿಗೆ ನಷ್ಟ ಉಂಟಾಗುವಂತೆ ಅಧಿಕಾರಿಗಳು ಮಾಡಿದ್ದಾರೆ

ಕೂಡಲೇಕಾಮಗಾರಿಗೆ ಸಂಬಂಧಿಸಿದಂತೆ ಕಳಪೆ ಮಾಡಿರುವ ಗುತ್ತಿಗೆದಾರರನ ಪ್ಪುಪಟ್ಟಿಗೆ ಸೇರಿಸಬೇಕು, ಎಲ್ಲವೂ ಸರಿ ಇದೆ ಎಂದು ಕಾಮಗಾರಿಯ ಬಿಲ್ ಮಾಡಿರುವ ಇಲಾಖೆ ಅಧಿಕಾರಿಗಳನ್ನ ವಜಾ ಗೊಳಿಸಬೇಕು ಇಲ್ಲವಾದಲ್ಲಿ ಒಂದು ವಾರದ ನಂತರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಆಲಿಮಟ್ಟಿಯ ಕೆ.ಬಿ.ಜೆ.ಎನ್.ಎಲ್ ಕಚೇರಿಗೆ ಮುತ್ತಿಗೆ ಹಾಕಿ ಬೀಗ ಹಾಕಲಾಗುವುದು ಎಂದು ಈ ಮೂಲಕ ಉಗ್ರ ಹೋರಾಟ ಮಾಡಲಾಗುವುದು ಎಂದು ಆಗ್ರಹಿಸಿದರು.

ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯ ದರ್ಶಿಗಳಾದ ರಾಮನಗೌಡ ಪಾಟೀಲ, ನಿಡಗುಂದಿ ತಾಲೂಕಾ ಅಧ್ಯಕ್ಷರಾದ ಡಾ.ಕೆ. ಎಂ ಗುಡ್ನಾಳ, ಮುಖಂಡರಾದ ತಿಪ್ಪಣ್ಣ ನಾಟಿಕಾರ, ಮೋತಿಲಾಲ ಉಣ್ಣಿಬಾಯಿ, ದಾನಪ್ಪ ಗದ್ಯಾಳ, ಮಂಜುನಾಥ ನಾಟಿಕಾರ, ಬುಡ್ಡೆಸಾಬ ಡವಳಗಿ, ಮೋದಿನಸಾಬ ಭಾಗವಾನ, ಕಲ್ಲಪ್ಪ ಅಫಜಲಪುರ ಸೇರಿದಂತೆ ಇತರರು ಇದ್ದರು.

### ತೇರದಾಳಕ್ಕೆ ಸರಕಾರಿ ಪ್ರೌಢಶಾಲೆ ಮಂಜೂರು : ನಾಗರಿಕರಲ್ಲಿ ಹರ್ಷ

# ಶೀಘ್ರದಲ್ಲಿ ಸರಕಾರಿ ಪ್ರೌಢಶಾಲೆ ಪ್ರಾರಂಭೋತ್ಸವ



**ತೇರದಾಳ:** ತೇರದಾಳ ಜನತೆಯ ಎರಡು ದಶಕಗಳ ಬೇಡಿಕೆಯಾಗಿದ್ದ ಸರಕಾರಿ ಪ್ರೌಢಶಾಲೆ ಕೊನೆಗೂ ಮಂಜೂರಾಗಿದ್ದು, ನಾಗರಿಕರಲ್ಲಿ ಪಾಲಕರಲ್ಲಿ ಮಕ್ಕಳಲ್ಲಿ ಹರ್ಷವನ್ನುಂಟು ಮಾಡಿದೆ.

ಗುರುವಾರ ತೇರದಾಳ ಎಂಪಿಎಸ್ ಶಾಲೆಯಲ್ಲಿ ನಡೆದ ಹಿರಿಯರ ಸಭೆಯಲ್ಲಿ ಭಾಗವಹಿಸಿದ ಜಮಖಂಡಿ ಬಿಇಓ ಎ.ಕೆ. ಬಸಣ್ಣವರ ಮಾಹಿತಿ ನೀಡಿದ್ದು ಇಷ್ಟು.

ರಾಜ್ಯ ಸರಕಾರ ಬಜೆಟ್‌ನಲ್ಲಿ 147 ಸರಕಾರಿ ಪ್ರೌಢಶಾಲೆಗಳಿಗೆ ಅನುಮೋದನೆ ನೀಡಿದೆ. ಇದರಲ್ಲಿ 76 ರಾಜ್ಯ ಸರಕಾರದಿಂದಲೇ ನಡೆಯುತ್ತವೆ. ಅದರಲ್ಲಿ ತೇರದಾಳಕ್ಕೆ ಮಂಜೂರಾದ ಸರಕಾರಿ ಪ್ರೌಢಶಾಲೆ ಇರುವುದು ಸಂತಸದ ಸಂಗತಿಯಾಗಿದೆ. ಪಟ್ಟಣದ ಎಲ್ಲ ಮುಖಂಡರು ಹಿರಿಯರು ನಿರ್ಧರಿಸಿದಂತೆ ಖಾಲಿ ಇರುವ ಸರಕಾರಿ ಮರಾಠಿ ಶಾಲೆ ಕಟ್ಟಡದಲ್ಲಿ ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭಿಸಲಾಗುವುದು. ಅದಕ್ಕೆ ಬೇಕಾಗುವ ಶಿಕ್ಷಕರು, ಮಕ್ಕಳಿಂದ ಹಿಡಿದ ಎಲ್ಲ ರೀತಿಯ ತಯಾರಿ ಇಲಾಖೆ ಮಾಡಿಕೊಳ್ಳಲಿದೆ. ಪಟ್ಟಣದ ಜನತೆಯ ಸಹಕಾರ ಬಹಳ ಪ್ರಮುಖವಾಗಿದೆ. ಶೀಘ್ರದಲ್ಲಿ ತೇರದಾಳ ಸರಕಾರಿ ಪ್ರೌಢಶಾಲೆ ಪ್ರಾರಂಭಗೊಳ್ಳಲಿದೆ ಎಂದು ತಿಳಿಸಿದರು. ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಪ್ರವೀಣ ನಾಡಗೌಡ, ಮುಖಂಡರಾದ ಗೌತಮ ರೋಡಕರ, ಅಶೋಕ ಆಳಗೊಂಡ, ಸುರೇಶ ಕಬಾಡಗಿ, ಅಪ್ಪು ಮಂಗಸೂಳಿ, ರಾಮಣ್ಣ ಹಿಡಕಲ್, ಭುಜಬಲಿ ಕೆಂಗಾಲಿ, ರಾಜು ಹೊಸಮನಿ, ಮಲ್ಲಪ್ಪಣ್ಣ ಜಮಖಂಡಿ, ನಿಂಗಪ್ಪಣ್ಣ ಮಾಲಗಾಂವಿ, ರಮೇಶ ಧರೆನ್ನವರ, ಹನಮಂತ ಜಗದಮನಿ, ಸಂಜು ಹಾಡಕರ, ಗೋಪಾಲ ಮಾಂಗ ಹಲವು ಸಲಹೆ ಸೂಚನೆಗಳನ್ನು ನೀಡಿದರು. ಇದೇ ಸಂದರ್ಭದಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳನ್ನು ನಾಗರಿಕರ ಪರವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು. ಇಲಾಖೆಯ ಕೆ.ಎಂ. ಕೋಲೂರ, ರಮೇಶ ಅವಟಿ, ಸಂಗಮೇಶ ವಿಜಯಪುರ, ಡಬ್ಲ್ಯೂ.ವೈ. ಭಜಂತ್ರಿ, ಅನಂತ ಮುಧೋಳ, ಮಹೇಶ ಸೋರಗಾಂವಿ ಇದ್ದರು.

# ನಾಳೆ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ

**ಗದಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಸೆಪ್ಟಂಬರ್ 7 ರಂದು ಸಂಜೆ 4 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಗುವುದು.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ತಂಗಡಗಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ, ಅವರುಗಳು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ.ವೆಂಕಟೇಶ್ ಎಂ.ವಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಶ್ರೀಮತಿ ಕೆ.ಎಂ.ಗಾಯತ್ರಿ ಆಗಮಿಸಲಿದ್ದಾರೆ.

ಪರಶುರಾಮ ಈಳಗೇರ ಉಪನ್ಯಾಸ ನೀಡಲಿದ್ದಾರೆ. ಗದಗ ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತಿಸಿದ್ದಾರೆ.

# ಕೋ-ಆಪರೇಟಿವ ಸೊಸೈಟಿಗೆ ದಂಡ: ಪರಿಹಾರಕ್ಕೆ ಆದೇಶ

**ಧಾರವಾಡ:** ಹುಬ್ಬಳ್ಳಿಯ ಸೆಂಟ್ರಲ್‌ಎಕ್ಸೈಸ್ ಕಾಲೋನಿಯ ನಿವಾಸಿಗಳಾದ ಅಶೋಕ ಮತ್ತು ರೇಖಾ ಅನ್ವೇಕರ್ ಹಾಗೂ ಸುಮಾ ಮತ್ತು ಅವರ ಮಗಳು ನಿಸ್ಮಿತಾ ವಿಠ್ಠಲಕರಇವರು ಹುಬ್ಬಳ್ಳಿಯ ಗೋಕುಲ ರೋಡ್‌ನಲ್ಲಿರುವ ಎದುರುದಾರರಾದ ಕಿತ್ತೂರುರಾಣಿ ಚೆನ್ನಮ್ಮ ಕೋ–ಆಪರೇಟಿವ ಸೊಸೈಟಿಯಲ್ಲಿ 2023–24 ರಲ್ಲಿತಲಾ ರೂ:13 ಲಕ್ಷ, ರೂ:5,50,000, ರೂ:14,50,000 ಹಾಗೂ ರೂ:3,50,000 ಮೊತ್ತವನ್ನು ಠೇವಣಿ ಇಟ್ಟಿದ್ದರು. ಕೇಲವು ಠೇವಣಿಗಳ ಅವಧಿ ಮುಕ್ತಾಯವಾಗಿದ್ದವು ಮತ್ತು ಕೇಲವೊಂದು ಮುಂದಿನ ವರ್ಷದಲ್ಲಿ ಮುಕ್ತಾಯವಾಗುತ್ತಿದ್ದವು.

ದೂರುದಾರರು ಎದುರುದಾರರ ಬಗ್ಗೆ ವ್ಯವಹಾರಿಕ ತೊಂದರೆಗಳನ್ನು ಅರಿತು ತಮ್ಮ ಎಲ್ಲ ಠೇವಣಿ ಹಣ ಮರಳಿಸುವಂತೆ ಎದುರುದಾರರಿಗೆ ಸಾಕಷ್ಟು ಸಲ ಕೇಳಿಕೊಂಡಿರುತ್ತಾರೆ. ಆದರೆ ಎದುರುದಾರರು ಠೇವಣಿ ಹಣವನ್ನು ಕೊಡದೆ ತಮಗೆ ಮೋಸ ಮಾಡಿ ಸೇವಾ ನ್ಯೂನ್ಯತೆ ಎಸಗಿದ್ದಾರೆ ಅಂತ ಹೇಳಿ ಸೊಸೈಟಿಯವರ, ಎದುರುದಾರರ ಮೇಲೆ ಕ್ರಮಕೈಗೊಂಡು ತಮ್ಮ ಠೇವಣಿ ಹಣ ಮರುಪಾವತಿಸುವಂತೆ ಮತ್ತು ತಮಗಾದ ತೊಂದರೆ ಮತ್ತು ಮಾನಸಿಕ ಹಿಂಸೆಗೆ ಪರಿಹಾರ ಕೊಡಿಸಬೇಕೆಂದು ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿನಾಂಕ 09.07.2025 ದೂರುಗಳನ್ನು ಸಲ್ಲಿಸಿದ್ದರು.

ಸದರಿ ದೂರು ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿ.ಅ. ಬೋಳಶೆಟ್ಟಿ ಸದಸ್ಯರು ದೂರುದಾರರು ಎದುರುದಾರರ ಸೊಸೈಟಿಯ ಸದಸ್ಯರಾಗಿರುತ್ತಾರೆ. ದೂರುದಾರರು ಠೇವಣಿ ರೂಪದಲ್ಲಿ ಇಟ್ಟಂತಹ ಹಣವನ್ನು ಎದುರುದಾರರು ತಮ್ಮ ಸೊಸೈಟಿಯ ಅಭಿವೃದ್ಧಿಗಾಗಿ ಉಪಯೋಗಿಸಿಕೊಂಡಿರುವುದು ಕಂಡುಬರುತ್ತದೆ.

ಅಲ್ಲದೆ ದೂರುದಾರರಿಗೆ ಹಣದ ಅವಶ್ಯಕತೆ ಇದ್ದು ಅದನ್ನು ಎದುರುದಾರರು ಮರಳಿಸದೆ ಇರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಆಯೋಗ ತೀರ್ಪು ನೀಡಿದೆ. ಠೇವಣಿ ಇಟ್ಟ ದಿನಾಂಕಗಳಿಂದ ಬಡ್ಡಿಯೊಂದಿಗೆ ಲೆಕ್ಕ ಹಾಕಿ ದೂರುದಾರರಿಗೆ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ಹಿಂದಿರುಗಿಸುವಂತೆ ಆಯೋಗ ಆದೇಶಿಸಿದೆ.

ಜೊತೆಗೆ ಸೇವಾ ನ್ಯೂನ್ಯತೆಯಿಂದ ದೂರುದಾರರಿಗೆ ಆಗಿರುವ ಅನಾನುಕೂಲ, ತೊಂದರೆ ಹಾಗೂ ಮಾನಸಿಕ ಹಿಂಸೆಗೆ ತಲಾ ರೂ.50,000 ಪರಿಹಾರ ಹಾಗೂ ತಲಾ ರೂ.10,000 ಪ್ರಕರಣದ ಖರ್ಚು ವೆಚ್ಚ ನೀಡಲು ಎದುರುದಾರರಿಗೆ ಆಯೋಗ ತನ್ನ ತೀರ್ಪಿನಲ್ಲಿ ಆದೇಶಿಸಿದೆ.

# ಕಳಪೆ ಬೀಜ: ನಷ್ಟಗೊಂಡ ರೈತನ ಹೋಲಕ್ಕೆ ವಿಜ್ಞಾನಿಗಳ ಭೇಟಿ



**ವಿಜಯಪುರ:** ಈರುಳ್ಳಿ ನಷ್ಟ ಕುರಿತು ಸಲ್ಲಿಸಿರುವ ದೂರಿಗೆ ಸಂಬಂಧಿಸಿದಂತೆ ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹಾಗೂ ವಿಜ್ಞಾನಿಗಳೊಡನೆ ಬೇಟಿ ನೀಡಿದ್ದೇವೆ ವರದಿ ಬಂದ್ ತಕ್ಷಣ ಈರುಳ್ಳಿ ಬೀಜದ ಕಂಪನಿ ಬೀಜಗಳು ಕಳಪೆ ಅಂತಾ ಸಾಭಿತಾದರೆ ನಾವೇ ಸ್ವತಃ ದೂರನ್ನು ದಾಖಲಿಸಿ ಪರಿಹಾರ ಕೊಡಿಸುತ್ತೆವೆ ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಬಸನಗೌಡ ಪಾಟೀಲ ಅವರು ಮಾತನಾಡಿದರು

ತಾಲೂಕಿನ ಅಂಕಲಗಿ ಗ್ರಾಮದ ಶಾರವ್ವ ಗುರಪ್ಪ ತಳವಾರ ಸರ್ವೆ ನಂ 75/5 ರ ಒಟ್ಟು 4 ಎಕರೆ ಈರುಳ್ಳಿಯೂ ಸಂಪೂರ್ಣ ಹಾಳಾಗಿರುವ ಕುರಿತು ಜಿಲ್ಲಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಪರಿಹಾರ ನೀಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ಮನವಿ ಸಲ್ಲಿಸಿರುವ ಹಿನ್ನಲ್ಲೆಯಲ್ಲಿ ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳೊಡನೆ ಬಾಗಲಕೋಟ ಮತ್ತು ತಿಡಗುಂದಿ ವಿಜ್ಞಾನಿಗಳ ತಂಡ ಗುರುವಾರ ಬೆಳಿಗ್ಗೆ ಬೇಟಿ ನೀಡಿ ಶ್ಯಾಂಪಲ್ ಸಂಗ್ರಹಿಸಿ ಪ್ರಯೋಗಾಲಯದಲ್ಲಿ ಪರೀಕ್ಷೆ ಮಾಡಿ ವರದಿ ಸಲ್ಲಿಸುವುದಾಗಿ ವಿಜ್ಞಾನಿಗಳು ಹೇಳಿದರು.

ಕೃಷಿ ಇಲಾಖೆಯ ಜಾರಿದಳ ಸಹಾಯಕ ನಿರ್ದೇಶಕರಾದ ಎ.ಪಿ ಬಿರಾದಾರ ಅವರು ಮಾತನಾಡಿ ವಿಜ್ಞಾನಿಗಳೊಂದಿಗೆ ಪ್ಲಾಟ್ ವಿಕ್ಷಣೆ ಮಾಡಿದ್ದೇವೆ ವರದಿ ನಂತರ ಸೂಕ್ತ ಕಾನೂನು ಕ್ರಮ ಕೈಗೊಳ್ಳುತ್ತೆವೆ ಅಂದರು.

ಈ ವೇಳೆ ತಿಡಗುಂದಿ ಸಸ್ಯ ಶರೀರ ಕ್ರಿಯಾ ಶಾಸ್ತ್ರ ತಜ್ಞರಾದ ಡಾ. ಮಲ್ಲಿಕಾರ್ಜುನ್ ಅವಟಿ,ಸಸ್ಯ ರೋಗಶಾಸ್ತ್ರ ತಜ್ಞರಾದ ರಮೇಶ್ ರಾಥೋಡ್, ಬಾಗಲಕೋಟೆಯ ಕೀಟಶಾಸ್ತ್ರಜ್ಞರಾದ ಡಾ.ಎಂ.ಎ ವಾಸಿಮ್ ಕೃಷಿ ಇಲಾಖೆಯ ಜಾರಿದಳದ ಸಹಾಯ ಕೃಷು ನಿರ್ದೇಶಕರಾದ ಡಾ.ಎ.ಪಿ ಬಿರಾದಾರ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಬಸನಗೌಡ ಪಾಟೀಲ, ತೋಟಗಾರಿಕಾ ಸಹಾಯಕ ಅಧಿಕಾರಿಗಳಾದ ರಮೇಶ್ ಮಿರ್ಜಿ ಸಹಾಯಕ ಇದ್ದರು

ಈ ಸಂದರ್ಭದಲ್ಲಿ ರೈತ ಮಹಿಳೆ ಶಾರವ್ವ ಗುರಪ್ಪ ತಳವಾರ್, ಗುರಪ್ಪ ತಳವಾರ್, ವಿಜಯಪೂರ ತಾಲೂಕಾ ಅಧ್ಯಕ್ಷರಾದ ಅನಮೇಶ್ ಜಮಖಂಡಿ, ತಾಲೂಕಾ ಸಂಚಾಲಕರಾದ ರಾಜೇಸಾ ನದಾಫ್ , ಅಂಕಲಗಿ ಗ್ರಾಮ ಘಟಕದ ಅಧ್ಯಕ್ಷರಾಧ ಅಮೋಗಿ ಉಕ್ಕಲಿ, ಅಜೀಸ್ ಪಟೇಲ್ ಪಾಟೀಲ್, ಸಿದ್ದಪ್ಪ ಬಿಂಡವಾರ್, ಸುಭಾಷ್ ಹಿಟ್ನಳ್ಳಿ, ತೌಸೀಫ್ ಮುಲ್ಲಾ, ದಾಜಿ ಮಾಲಕರು ಜಾಗೀರ್ದಾರ್, ಬಸವರಾಜ್ ಮಪುಗಾರ್, ಶರಣು ಅವಜಿ ಸೇರಿದಂತೆ ಗ್ರಾಮದ ಅನೇಕ ರೈತರು ಇದ್ದರು



**ತಾಲೂಕಾ ಮಟ್ಟದ ಕ್ರೀಡಾಕೂಟ: ವಿದ್ಯಾರ್ಥಿಗಳ ಸಾಧನೆ**

ನೇಸರಗಿ: ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನೀಯರು ಕಿತ್ತೂರು 2025–26 ನೇ ಸಾಲಿನ ಕಿತ್ತೂರು ತಾಲ್ಲೂಕಾ ಮಟ್ಟದ ಕ್ರೀಡೆಗಳಲ್ಲಿ ನೇಸರಗಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ವಾಲಿಬಾಲ್ ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ತಾಲೂಕಿಗೆ ಹೆಮ್ಮೆಯನ್ನು ತಂದಿರುತ್ತಾರೆ.

## ಪೂರ್ವಭಾವಿ ಸಭೆ

**ಹುಬ್ಬಳ್ಳಿ:** ಅಕ್ಟೋಬರ್ 7 ರಂದು ಕುಂದಗೋಳ ತಾಲೂಕಿನಲ್ಲಿ ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸುವ ಹಿನ್ನಲೆಯಲ್ಲಿ ಸೆಪ್ಟೆಂಬರ್ 11 ರಂದು ಬೆಳಿಗ್ಗೆ 11 ಗಂಟೆಗೆ ಕುಂದಗೋಳದ ತಹಶೀಲ್ದಾರರ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಗೆ ಎಲ್ಲ ತಾಲೂಕು ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು, ವಿವಿಧ ಸಂಘಗಳ ಪದಾಧಿಕಾರಿಗಳು, ಪರಿಶಿಷ್ಟ ಜಾತಿ, ಪಂಗಡದ ಮುಖಂಡರು ಹಾಗೂ ಸಾರ್ವಜನಿಕರು ಪಾಲ್ಗೊಂಡು ಸೂಕ್ತ ಸಲಹೆ ಸೂಚನೆ ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಕಾಶ್ ಎಜುಕೇಷನಲ್ ವತಿಯಿಂದ 250 ಕೋಟಿ ಮೌಲ್ಯದ 100% ವರೆಗಿನ ವಿದ್ಯಾರ್ಥಿವೇತನ

# 2.5 ಕೋಟಿ ಮೌಲ್ಯದ ನಗದು ಪ್ರಶಸ್ತಿ

**ಹುಬ್ಬಳ್ಳಿ** ಆಕಾಶ್ ಎಜುಕೇಷನಲ್ ಸರ್ವಿಸಸ್ ಲಿಮಿಟೆಡ್ (ಎಇಎಸ್‌ಎಲ್) ಅಂಥೆ 2025 (ಆಕಾಶ್ ರಾಷ್ಟ್ರೀಯ ಪ್ರತಿಭಾನ್ವೇಷಣೆ ಪರೀಕ್ಷೆ) ಅನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ. ಅಂಥೆ 2025, 5 ರಿಂದ 12 ನೇ ತರಗತಿಯ ವಿದ್ಯಾರ್ಥಿಗಳು ಸವಾಲುಗಳನ್ನು ಮೀರಿ ಬೆಳೆಯಲು ಮತ್ತು ನಿಜವಾದ ಸಮಸ್ಯೆ ಪರಿಹಾರಕರಾಗಿ ಹೊರಹೊಮ್ಮಲು ಸಬಲೀಕರಣಗೊಳಿಸುವ ಗುರಿ ಹೊಂದಿದೆ.ಆಕಾಶ್ 8 ರಿಂದ 12 ನೇ ತರಗತಿಯ ವಿದ್ಯಾರ್ಥಿಗಳಿಗೆ ಆಕಾಶ್ ಇನ್ವಿಕ್ಟಸ್ ಜೆಇಇ ಅಡ್ವಾನ್ಸ್ಡ ತಯಾರಿ ಕಾರ್ಯಕ್ರಮಕ್ಕೆ ಪ್ರವೇಶಕ್ಕಾಗಿ ವಿದ್ಯಾರ್ಥಿವೇತನ ಪರೀಕ್ಷೆಯಾದ ಇನ್ವಿಕ್ಟಸ್ ಏಸ್ ಪರೀಕ್ಷೆಯನ್ನು ಸಹ ಪ್ರಾರಂಭಿಸುತ್ತಿದೆ. ರಾಷ್ಟ್ರೀಯ ಮಟ್ಟದ ಅರ್ಹತಾ–ಕಮ್–ವಿದ್ಯಾರ್ಥಿವೇತನ ಪರೀಕ್ಷೆಯನ್ನು ಸೆ.7, 2025 ರಂದು ನಡೆಸಲಾಗುವುದು.

ಆನ್‌ಲೈನ್ ಮತ್ತು ಆಫ್‌ಲೈನ್ ವಿಧಾನಗಳಲ್ಲಿ ಲಭ್ಯವಿರುವ ಮೂರು ಗಂಟೆಗಳ ಪರೀಕ್ಷೆಯು (ಬೆಳಗ್ಗೆ 10:00 ರಿಂದ ಮಧ್ಯಾಹ್ನ 1:00 ರವರೆಗೆ)300 ಅರ್ಜಿ ಶುಲ್ಕವನ್ನು ಹೊಂದಿದೆ. ಉತ್ತಮವಾಗಿ ಕಾರ್ಯನಿರ್ವಹಿಸುವವರಿಗೆ 100% ವರೆಗೆ ವಿದ್ಯಾರ್ಥಿವೇತನ ಮತ್ತು ಅತ್ಯಾಕರ್ಷಕ ನಗದು ಬಹುಮಾನಗಳನ್ನು ನೀಡಲಾಗುತ್ತದೆ.ಆಕಾಶ್ ಎಜುಕೇಷನಲ್ ಸರ್ವೀಸಸ್ ಲಿಮಿಟೆಡ್ ವ್ಯವಹಾರ ಮತ್ತು ಶೈಕ್ಷಣಿಕ ವಿಭಾಗದ ಮುಖ್ಯಸ್ಥ ಧೀರಜ್ ಕುಮಾರ್ ಮಿಶ್ರಾ ಮಾತನಾಡಿ,ಂಓಖಿಊಇ 2025 ಅರ್ಹ ವಿದ್ಯಾರ್ಥಿಗಳಿಗೆ ಸಂಪನ್ಮೂಲಗಳು, ಬೆಂಬಲ ಮತ್ತು ಪ್ರೇರಣೆಯನ್ನು ಒದಗಿಸುವ ಮೂಲಕ ಈ ಪರಂಪರೆ ಮುಂದುವರಿಸುತ್ತದೆ. ಗುಣಮಟ್ಟದ ಶಿಕ್ಷಣವನ್ನು ನಿಜವಾಗಿಯೂ ಸಮಗ್ರ ಮತ್ತು ಫಲಿತಾಂಶ–ಕೇಂದ್ರಿತವಾಗಿಸುತ್ತಿದ್ದೇವೆ ಎಂದರು.

ಅಂಥೆ 2025 ರ ಆನ್‌ಲೈನ್ ಮೋಡ್ ಅ. 4 ರಿಂದ 12, 2025 ರವರೆಗೆ ಲಭ್ಯವಿದೆ. ವಿದ್ಯಾರ್ಥಿಗಳು ಒಂದು ಗಂಟೆಯ ಸ್ಲಾಟ್ ಅನ್ನು ಆಯ್ಕೆ ಮಾಡುವ ಮೂಲಕ ತಮ್ಮ ಅನುಕೂಲಕ್ಕೆ ತಕ್ಕಂತೆ ಪರೀಕ್ಷೆ ತೆಗೆದುಕೊಳ್ಳಬಹುದು. ಆಫ್‌ಲೈನ್ ಪರೀಕ್ಷೆಯನ್ನು ಅ.5 ಮತ್ತು 12 ರಂದು 26 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ 415 ಕ್ಕೂ ಹೆಚ್ಚು ಆಕಾಶ್ ಕೇಂದ್ರಗಳಲ್ಲಿ ನಡೆಸಲಾಗುವುದು. ಅಂಥೆ 2025 ಗಾಗಿ ನೋಂದಣಿಗಳು ಈಗ ತೆರೆದಿವೆ. ವಿದ್ಯಾರ್ಥಿಗಳು https://anthe.aakash.ac.in/home ನಲ್ಲಿ ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳಬಹುದು ಅಥವಾ ಹತ್ತಿರದ ಆಕಾಶ್ ಕೇಂದ್ರಕ್ಕೆ ಭೇಟಿ ನೀಡಬಹುದು. ಆನ್‌ಲೈನ್ ಮತ್ತು ಆಫ್‌ಲೈನ್ ವಿಧಾನಗಳೆರಡಕ್ಕೂ ಪರೀಕ್ಷಾ ಶುಲ್ಕ 300. ಮೊದಲೇ ಅರ್ಜಿ ಸಲ್ಲಿಸುವವರಿಗೆ 50% ರಷ್ಟು ರಿಯಾಯಿತಿಯಿದೆ. ಹತ್ತನೇ ತರಗತಿ ವಿದ್ಯಾರ್ಥಿಗಳ ಫಲಿತಾಂಶಗಳನ್ನು ಅ.24, 2025 ರಂದು ಘೋಷಿಸಲಾಗುವುದು, ಆದರೆ VII ರಿಂದ IX ತರಗತಿಗಳ ಫಲಿತಾಂಶಗಳನ್ನು ಅ. 29, 2025 ರಂದು ಘೋಷಿಸಲಾಗುವುದು. ಗಿ ಮತ್ತು ಗಿಖ ನೇ ತರಗತಿಗಳ ಫಲಿತಾಂಶಗಳನ್ನು ನ. 1, 2025 ರಂದು ಘೋಷಿಸಲಾಗುವುದು. ಘಿಖ ಮತ್ತು ಘಿಖಖ ತರಗತಿಗಳ ಫಲಿತಾಂಶಗಳನ್ನು ನ.4, 2025 ರಂದು ಪ್ರಕಟಿಸಲಾಗುವುದು. ಫಲಿತಾಂಶಗಳು ಅಂಥೆ ವೆಬ್‌ಸೈಟ್‌ನಲ್ಲಿ ಲಭ್ಯವಿದೆ.

ವೈದ್ಯಕೀಯ ಶಿಕ್ಷಣವನ್ನು ಬಯಸುವ 10ನೇ ತರಗತಿಯ ವಿದ್ಯಾರ್ಥಿಗಳಿಗೆ, ಪ್ರಶ್ನೆಗಳು ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಮತ್ತು ಮಾನಸಿಕ ಸಾಮರ್ಥ್ಯಗಳನ್ನು ಒಳಗೊಂಡಿವೆ. ಎಂಜಿನಿಯರಿಂಗ್ ಆಕಾಂಕ್ಷಿಗಳಿಗೆ, ಪ್ರಶ್ನೆಗಳು ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಮತ್ತು ಮಾನಸಿಕ ಸಾಮರ್ಥ್ಯ ಒಳಗೊಂಡಿವೆ. ಅದೇ ರೀತಿ, NEET Cನ್ನು ಗುರಿಯಾಗಿಟ್ಟುಕೊಳ್ಳುವ XI-XII ತರಗತಿಯ ವಿದ್ಯಾರ್ಥಿಗಳಿಗೆ, ಪ್ರಶ್ನೆಗಳು ಭೌತಶಾಸ್ತ್ರ, ರಸಾಯನಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರವನ್ನು ಒಳಗೊಂಡಿವೆ, ಈ ಪತ್ರಿಕಾಗೋಷ್ಠಿಯಲ್ಲಿ, ವಲಯ ಅಧಿಕಾರಿ ಅಮೀರ್ ಹುಸೇನ್, ಬ್ರಾಂಚ್ ಹೆಡ್ ಅನಿಲ್ ಕುಮಾರ್, ಎಎಸ್‌ಎಚ್ ಜುನೈದ್ ಉಜ್ಮನ್, ಡಿ.ರವಿಕುಮಾರ್, ಲಿಂಗಾರೆಡ್ಡಿ, ಟಿ.ವೆಂಕಟೇಶರಲು, ಉಪಸ್ಥಿತರಿದ್ದರು

# ನಾಳೆ ಬ್ರಹ್ಮಶ್ರೀ ನಾರಾಯಣಗುರು ಜಯಂತಿ

**ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಸೆಪ್ಟೆಂಬರ 07 ರಂದು ಸಂಜೆ 4 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕರು ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕರು ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು. ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ–ಧಾರವಾಡ ಮಹಾನಗರ ಮಹಾಪೌರರಾದ ಜ್ಯೋತಿ ಪಾಟೀಲ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್.ಪಾಟೀಲ ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಉಪ ಮಹಾಪೌರ ಸಂತೋಷ ಚವ್ಹಾಣ, ಧಾರವಾಡ ಜಿಲ್ಲಾ ಆರ್ಯ ಈಡಿಗ ಸಂಘದ ಅಧ್ಯಕ್ಷ ಚಂದ್ರಶೇಖರ ಢವಳಗಿ, ಹುಬ್ಬಳ್ಳಿ–ಧಾರವಾಡ ನಾಮಧಾರಿ ಹಿತವರ್ಧಕ ಸಂಘದ ಅಧ್ಯಕ್ಷ ತಿಮ್ಮಪ್ಪ ಡಿ. ನಾಯ್ಕ, ಬಿಲ್ಲವ ಸಮಾಜ ಸೇವಾ ಸಂಘದ ಸದಸ್ಯ ಶಂಕರ ಕೋಟ್ಯಾನ್ ಅವರು ಉಪಸ್ಥಿತರಿರುವರು. ಧಾರವಾಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಹಿರಿಯ ಪತ್ರತಕರ್ತ ಹಾಗೂ ಪ್ರಧಾನ ಕಾರ್ಯದರ್ಶಿ ಸುಶೀಲೇಂದ್ರಾಚಾರ್ಯ ಕುಂದರಗಿ ಅವರು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸವನ್ನು ನೀಡುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ ಆರ್ಯ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ. ಎಸ್.ಘಾಳಿ ಅವರು ಭಾಗವಹಿಸುವರೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕರ ಪತ್ತೆಗೆ ಹೆಚ್ಚಿನ ತಪಾಸಣೆ ನಡೆಸಿ: ಜಿಲ್ಲಾಧಿಕಾರಿ



**ಕಾರವಾರ:** ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಪತ್ತೆ ಕುರಿತಂತೆ ಜಿಲ್ಲೆಯಾದ್ಯಂತ ವ್ಯಾಪಕ ತಪಾಸಣೆಗಳನ್ನು ಕೈಗೊಳ್ಳುವ ಮೂಲಕ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪ್ರಕರಣಗಳು ಜಿಲ್ಲೆಯಲ್ಲಿ ಕಂಡು ಬರದಂತೆ ಎಚ್ಚರ ವಹಿಸುವಂತೆ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಸೂಚನೆ ನೀಡಿದರು.

ಅವರು ಗುರುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಪಡೆ ಸಮಿತಿ ಸಭೆ ಹಾಗು ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇಧ ಕುರಿತಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳನ್ನು ಒಳಗೊಂಡ ತಂಡದ ಮೂಲಕ ನಿಯಮಿತವಾಗಿ ತಪಾಸಣೆ ನಡೆಸುವ ಮೂಲಕ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವವರ ವಿರುದ್ದ ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಿ ಎಂದರು.

ಬಾಲ ಕಾರ್ಮಿಕರು ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸದಲ್ಲಿ ತೊಡಗಿಸಿ ಕೊಳ್ಳುವುದು ಅಪರಾದವಾಗಿದ್ದು, ಹೋಟೆಲ್, ಗ್ಯಾರೇಜ್, ಕಟ್ಟಡ ನಿರ್ಮಾಣ, ಬೇಕರಿಗಳಲ್ಲಿ ಹೆಚ್ಚಿನ ತಪಾಸಣೆಗಳನ್ನು ನಡೆಸಬೇಕು. ಇಂತಹ ಸ್ಥಳದಲ್ಲಿ ಮಕ್ಕಳು ಕೆಲಸದಲ್ಲಿ ತೊಡಗಿರುವುದು ಕಂಡು ಬಂದಲ್ಲಿ ಮಾಲೀಕರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದರು.

14 ವರ್ಷದೊಳಗಿನ ಬಾಲಕಾರ್ಮಿಕ ಹಾಗೂ 14 ರಿಂದ 18 ವರ್ಷದೊಳಗಿನ ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡರೆ ಮಾಲೀಕರ ಮೇಲೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಬೇಕು. ಸಾರ್ವಜನಿಕರು ಯಾವುದೇ ಮಗು ಕೆಲಸದಲ್ಲಿ ತೊಡಗಿರುವುದು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ 1098 ಹಾಗೂ 112 ಸಂಖ್ಯೆ ಕರೆ ಮಾಡಿ ಮಾಹಿತಿ ನಿಡಬೇಕು. ಕಾರ್ಮಿಕ ಇಲಾಖೆ ಮೂಲಕ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು ಜಿಲ್ಲೆಯಾದ್ಯಂತ ಕಾನೂನು ಅರಿವು ಕಾರ್ಯಕ್ರಮಗಳ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ಮಾಹಿತಿ ಸಂಗ್ರಹಿಸಿ ಹಾಗೂ ಅವರ ಪೋಷಕರ ಹೆಸರು, ವಿಳಾಸವನ್ನು ಹಾಗೂ ಅವರು ಮರಳಿ ಶಾಲೆಗೆ ಹೋಗುತ್ತಿರುವ ಬಗೆಗಿನ ಮಾಹಿತಿಯನ್ನು ಪ್ರತಿ ತಿಂಗಳು ಕಡ್ಡಾಯವಾಗಿ ಕಾರ್ಮಿಕ ಇಲಾಖೆ ಹಾಗೂ ಮಕ್ಕಳ ರಕ್ಷಣಾ ಘಟಕಕ್ಕೆ ನೀಡುವಂತೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಪ್ರಸಕ್ತ ಸಾಲಿನಲ್ಲಿ ಇದುವರೆಗೆ ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಪತ್ತೆ ಕುರಿತಂತೆ 567 ತಪಾಸಣೆಗಳನ್ನು ಕೈಗೊಂಡಿದ್ದು, ಒಟ್ಟು 3 ಪ್ರಕರಣಗಳಲ್ಲಿ 2 ಬಾಲ ಕಾರ್ಮಿಕರು ಮತ್ತು 3 ಕಿಶೋರ ಕಾರ್ಮಿಕರನ್ನು ಪತ್ತೆ ಮಾಡಿದ್ದು ಸಂಬಂಧಪಟ್ಟ ಸಂಸ್ಥೆಗಳ ಮಾಲೀಕರ ವಿರುದ್ಧ ಮೊಕದ್ದಮೆ ದಾಖಲಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಲಲಿತಾ ಸಾತೇನಹಳ್ಳಿ ತಿಳಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ. ಎಂ, ಡಿವೈಎಸ್‌ಪಿ ಗಿರೀಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶಿವಕ್ಕ ಮಾದರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸೋನಾಲ್ ಐಗಳ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಅಣುಕು ಯುವ ಸಂಸತ್ತು ಕಾರ್ಯಕ್ರಮದಲ್ಲಿ ಮನ್ನಾಪೂರ ಅಭಿಮತ

# ಆಡಳಿತದ ಅರಿವು ವಿದ್ಯಾರ್ಥಿಗಳಿಗೆ ಅವಶ್ಯಕ



**ಮೂಡಲಗಿ:** ನಮ್ಮ ಭಾರತ ದೇಶದ ಪ್ರಜಾಪ್ರಭುತ್ವದ ಆಡಳಿತ ಪ್ರಕ್ರಿಯೆಯಲ್ಲಿ ಪರಿಪೂರ್ಣ ಜ್ಞಾನ ಇಂದಿನ ವಿದ್ಯಾರ್ಥಿಗಳಿಗೆ ಅವಶ್ಯಕವಾಗಿದ್ದು ನಮ್ಮ ದೇಶ ವಿಶ್ವದಲ್ಲೇ ಬಲಾಢ್ಯವಾದ ಸಂವಿದಾನ ಹೊಂದಿದೆ ಎಂದು ಮೂಡಲಗಿಯ ಆರ್.ಡಿ.ಎಸ್. ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಜಿ.ಎಸ್. ಮನ್ನಾಪೂರ ಹೇಳಿದರು.

ಪಟ್ಟಣದ ಆರ್.ಡಿ.ಎಸ್. ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಿದ ಅಣುಕು ಯುವ ಸಂಸತ್ತು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು, ಸಂವಿದಾನದ ಅಡಿಯಲ್ಲಿ ರಾಜಕೀಯ ಆಡಳಿತ ಚಟುವಟಿಕೆಗಳು ಜರಗುತ್ತಿದ್ದು ಆಡಳಿತ ದೇಶದ ಸಮಗ್ರತೆಯ ಬೆಳವಣಿಗೆಯ ಮೇಲೆ ಪ್ರಭಾವ ಬೀರುವದರಿಂದ ಆಡಳಿತದ ಮಹತ್ವ ರಾಜಕೀಯ ವಾಸ್ತವಿಕ ರೂಪರೇಷಗಳನ್ನು ವಿದ್ಯಾರ್ಥಿಗಳ ಮೂಲಕ ಅರಿವು ಮೂಡಿಸುವದು ಇಂದಿನ ಅಗತ್ಯವಾಗಿದೆ

ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಅಭಿಷೇಕ ಮಠದ ವಿದ್ಯಾರ್ಥಿನಿ ಸುಕನ್ಯಾ ಇಟ್ನಾಳ ಮಾತನಾಡಿದರು. ಅಣುಕು ಯುವ ಸಂಸತ್ತಿನಲ್ಲಿ ವಿದ್ಯಾರ್ಥಿಗಳಾದ ಶ್ರೀನಿವಾಸ ಬಡಿಗೇರ. ಸಭಾಧ್ಯಕ್ಷರಾಗಿ, ಅಭಿಷೇಕ ಮಠದ ಮುಖ್ಯಮಂತ್ರಿಯಾಗಿ, ವಿರೋಧ ಪಕ್ಷದ ನಾಯಕಿಯಾಗಿ ಸುಕನ್ಯಾ ಇಟ್ನಾಳ, ರಾಜ್ಯಪಾಲರಾಗಿ ಪ್ರವೀಣ ನಿರುಗ್ಗಿ ಅಧಿಕಾರ ಚಲಾಯಿಸಿದರು

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಶಿವಾನಂದ ಸತ್ತಿಗೇರಿ ಉಪನ್ಯಾಸಕರಾದ ಸಂಗಮೇಶ ಕುಂಬಾರ ಎಂ.ಬಿ. ಸಿದ್ನಾಳ ರವಿ ಕಟಗೇರಿ, ಎಸ್.ಬಿ.ಬೆಳವಿ. ವೆಂಕಟೇಶ ಹೆಳವರ, ಬಿ.ಎಂ ಕಬ್ಬೂರೆ, ಸವಿತಾ ಪಡದಲ್ಲಿ ವಿದ್ಯಾಶ್ರೀ ಜುಗಳ ಜಿ.ಎಚ್. ಕಡಪಟ್ಟಿ ಹಾಜರಿದ್ದರು.



## ಹಾಕಿ ಮತ್ತು ಕ್ರಿಕೆಟ್ ಜಿಲ್ಲಾ ಮಟ್ಟಕ್ಕೆ ಆಯ್ಕೆ

**ಮೂಡಲಗಿ:** ಸ್ಥಳೀಯ ಲಕ್ಷ್ಮಣ ಅಡಿಹುಡಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ವಿದ್ಯಾರ್ಥಿಗಳ ಪುರುಷ ವಿಭಾಗದಲ್ಲಿ ಕ್ರಿಕೆಟ್ ಮತ್ತು ಪುರುಷ ಹಾಗೂ ಮಹಿಳಾ ಹಾಕಿ ತಂಡವು ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾಗಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಶಾಲಾ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ವರ್ಗದವರುಅಭಿನಂದನೆ ಸಲ್ಲಿಸಿದ್ದಾರೆ.

# ಶ್ರೇಷ್ಠ ಗುರು ಪ್ರಶಸ್ತಿ ಪ್ರದಾನ ಸಮಾರಂಭ



**ಯರಗಟ್ಟಿ:** ಸಮೀಪದ ಮುನವಳ್ಳಿ ಪಟ್ಟಣದ ಸೋಮಶೇಖರ ಮಠದ ವತಿಯಿಂದ ಶಿಕ್ಷಕರ ದಿನಾಚರಣೆ ನಿಮಿತ್ಯ ಶ್ರೇಷ್ಠ ಗುರು ಪ್ರಶಸ್ತಿ ಪ್ರದಾನ ಸಮಾರಂಭ ಶ್ರೀ ಅನ್ನದಾನೇಶ್ವರ ಸ್ವತಂತ್ರ ಪದವಿಪೂರ್ವ ಕಾಲೇಜು ಆವರಣದಲ್ಲಿ ಸಂಭ್ರಮದಿಂದ ಜರುಗಿತು.

ಸಮಾರಂಭದ ಸಾನಿಧ್ಯವನ್ನು ಶ್ರೀ ಮುರುಘೇಂದ್ರ ಸ್ವಾಮೀಜಿ ವಹಿಸಿ ಮಾತನಾಡುತ್ತ ಪ್ರತಿಯೊಬ್ಬರಿಗೂ ಗುರು ಅವಶ್ಯವಿದ್ದು, ಗುರುಗಳ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಸಾಗಿದರೆ ಜೀವನ ಯಶಸ್ವಿಯಾಗುತ್ತದೆ. ಎಂದರು. ಎಂ.ಆರ್. ಗೋಪಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

ಶ್ರೇಷ್ಠ ಗುರು ಪ್ರಶಸ್ತಿಗೆ ಭಾಜನರಾದ ಮಹಾನಂದಾ ಎಸ್.ಕಲಾದಗಿ, ಮೀನಾಕ್ಷಿ ಮುರನಾಳ, ಸುಜಾತ ಜಂಬಗಿ, ಗಾಯತ್ರಿ ಹಿರೇಮಠ, ನಾಗೇಶ ಹೊನ್ನಳ್ಳಿ, ಗುರುನಾಥ ಪತ್ತಾರ, ಅಣ್ಣಪ್ಪ ನರಗುಂದ ಶಿಕ್ಷಕರಿಗೆ ಪ್ರಶಸ್ತಿ ಪತ್ರ, ಸ್ಮರಣಿಕೆ ನೀಡಿ ಶಾಲು ಹೊದಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಂಕರ ಗಯ್ಯಾಳಿ, ಈರಣ್ಣ ಸಂಕಣ್ಣವರ, ಗಂಗಾಧರ ಗೊರಾಬಾಳ, ಪ್ರಾ. ಎಂ.ಎಚ್.ಪಾಟೀಲ, ಪ್ರಾ. ಕೆ.ಬಿ.ನಲವಡೆ ಬಿ.ಎಂ.ಅಪ್ಪೋಜಿ, ಬಿ.ಬಿ.ಹುಲಿಗೊಪ್ಪ, ಮಂಜುಳಾ ಭಾಂಡೇಕರ, ಶೇಖರ ಮುಪ್ಪಿನವರಮಠ, ಐ.ಕೆ. ಮಠಪತಿ, ಉಮೇಶ ಗುದಗಾಪೂರ, ಶ್ರೀಶೈಲ ಗೋಪಶೆಟ್ಟಿ, ಸೋಮನಗೌಡ ಹಿರಲಿಂಗಣ್ಣವರ, ಜಗದೀಶ ಹಿರೇಮಠ, ರವಿ ಸಣಕಲ್ಲ, ಎಂ.ಗಿರೀಶ, ಸೇರಿದಂತೆ ಇತರರು ಇದ್ದರು. ಇದೇ ಸಂದರ್ಭದಲ್ಲಿ ಯೋಗ ಶಿಕ್ಷಕರಾದ ದಾನು ಗದಗಿನ, ಅಶೋಕ ಸಂಕಣ್ಣವರ, ಪರಶುರಾಮ ಕದಂ ಅವರನ್ನು ಸನ್ಮಾನಿಸಲಾಯಿತು.

ಶ್ರೀ ಮುರುಘರಾಜೇಂದ್ರ ಯೋಗ ವಿದ್ಯಾ ಕೇಂದ್ರ ಸಂಚಾಲಿತ ಶ್ರೀ ಅನ್ನದಾನೇಶ್ವರ ಪಿ.ಯು. ಕಾಲೇಜು, ಶ್ರೀ ಚನ್ನಬಸವ ಮಹಾಸ್ವಾಮೀಜಿ ಪ್ರಥಮ ದರ್ಜೆ ಕಾಲೇಜು, ಶ್ರೀಮತಿ ಅಂದಾನೆಮ್ಮ ಯಕ್ಕುಂಡಿಮಠ ಪ್ರಾಥಮಿಕ ಶಾಲೆ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

# ಹಿಂದೂ ಮಹಾ ಗಣಪತಿಯ ವಿಸರ್ಜನಾ ಮೆರವಣಿಗೆ

### ಗಮನ ಸೇಳೆದ ವಿವಿಧ ವಾದ್ಯಗಳು : ಸನಾತನ ಪರಂಪರೆಯಡಿ ನಡೆದ ಭವ್ಯ ಶೋಭಾಯಾತ್ರೆ

**ತಾಳಿಕೋಟೆ:** ಪಟ್ಟಣದ ತಿಲಕ ರಸ್ತೆಯಲ್ಲಿ ಹಿಂದೂ ಮಹಾ ಗಣಪತಿ ಮಹಾ ಮಂಡಳಿಯ ವತಿಯಿಂದ ಪ್ರತಿಷ್ಠಾಪಿಸಲಾದ ಗಣೇಶ ಮೂರ್ತಿಯ ವಿಸರ್ಜನಾ ಮೇರವಣಿಗೆಯ ಭವ್ಯ ಶೋಭಾಯಾತ್ರೆಯು ಗುರುವರರಂದು ಸನಾತನ ಧರ್ಮ ಸಂಸ್ಕೃತಿ, ಸಂಸ್ಕಾರದಂತೆ ಜರುಗಿತು.

ಭವ್ಯ ಶೋಭಾಯಾತ್ರೆಗೆ ವಿದಾನ ಪರಿಷತ್ ಸದಸ್ಯ ಸಿ.ಟಿ. ರವಿ ಹಾಗೂ ಹಿಂದೂ ಮಹಾ ಗಣಪತಿ ಮಹಾ ಮಂಡಳಿಯ ಗೌರವಾಧ್ಯಕ್ಷರಾದ ಗುಂಡಕನಾಳ ಹಿರೇಮಠದ ಶ್ರೀ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಗೌರವ ಉಪಾಧ್ಯಕ್ಷ ಕೆಸರಟ್ಟಿಯ ಶ್ರೀ ಸೋಮಲಿಂಗ ಮಹಾ ಸ್ವಾಮಿಗಳು, ಗೌರವ ಕಾರ್ಯದರ್ಶಿ ವೇ.ಸಂತೋಷಬಟ್ ಜೋಶಿ, ಮತ್ತು ಬಿಜೆಪಿ ಮಾಜಿ ಜಿಲ್ಲಾ ಅಧ್ಯಕ್ಷ ಆರ್. ಎಸ್.ಪಾಟೀಲ(ಕೂಚಬಾಳ), ಉಮೇಶ ಕಾರ್ಜೋಳ ಅವರು ಮಹಾ ಪೂಜಾ ಕಾರ್ಯಕ್ರಮವನ್ನು ನೇರವೇರಿಸಿ ಚಾಲನೆ ನೀಡಿದರು.

ದಶಮಾನೋತ್ಸವ ಸಂಭ್ರಮವನ್ನು ಮುಗಿಸಿ 12ನೇ ವರ್ಷಕ್ಕೆ ಪಾದಾರ್ಪಣೆ ಮಾಡಿರುವ ಹಿಂದೂ ಮಹಾ ಗಣಪತಿ ಮಹಾ ಮಂಡಳಿಯು ತನ್ನದೇ ಆದ ಸನಾತನ ಧರ್ಮ ಪ್ರಚಾರದಂತೆ ಮತ್ತು ಆಶಯದಂತೆ ಪ್ರತಿವರ್ಷವೂ ಗಣೇಶ ಉತ್ಸವವನ್ನು ಆಚರಿಸುತ್ತಾ ಬಂದಿದೆ 9 ದಿನಗಳ ವರೆಗೆ ಆಚರಿಸಲಾಗುವ ಈ ಉತ್ಸವದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುವದರೊಂದಿಗೆ ಹಾಗೂ ಭಾರತ ಮಾತೆಗೆ ಉಡಿ ತುಂಬುವ ಕಾರ್ಯಕ್ರಮ, ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಅಲ್ಲದೇ ಹಿಂದೂ ಸಮಾವೇಶ, ಸಂತ ಸಮಾವೇಶ ಅಲ್ಲದೇ ಗೋ ಪೂಜಾ ಕಾರ್ಯಕ್ರಮಗಳನ್ನೊಳಗೊಂಡು ಸನಾತನ ಧರ್ಮದ ಹಾದಿಯಲ್ಲಿ ಮಂಡಳಿಯು ಸಾಗಿದೆ ಅಲ್ಲದೇ ಕಳೆದ 2 ವರ್ಷದಿಂದ ಡಿಜೆ ಕುಣಿತಕ್ಕೆ ಬ್ರೇಕ್ ಹಾಕುವದರೊಂದಿಗೆ ಕೇವಲ ಡೋಲುಗಳ ಮೂಲಕ ಮೇರವಣಿಗೆಗೆ ಚಾಲನೆ ನೀಡಿ ಮೇರವಣಿಗೆಯಲ್ಲಿ ಪುರುಷರಷ್ಟೇ ಅಲ್ಲದೇ ಮಹಿಳೆಯರೂ ಕೂಡಾ ಸುತ್ತಗಟ್ಟಿ ನಿಂತಿ ನೋಡುವಂತೆ ವ್ಯವಸ್ಥೆ ಮಾಡಿ ಧಾರ್ಮಿಕ ಆಚರಣೆಯ ಬಗ್ಗೆ ಜಾಗೃತಿ ಮೂಡಿಸಿದ್ದು ಕಂಡುಬಂದಿತು.

ಮೇರವಣಿಗೆಯುದ್ದಕ್ಕೂ ಗಣಪತಿ ಬಪ್ಪ ಮೋರಯ್ಯ, ಮಂಗಳ ಮೂರ್ತಿ ಮೋರಯ್ಯ ಎಂಬ ಯುವ ಸಮೂಹದ ಜೈಕಾರ ನೋಡುಗ ಎಲ್ಲ ಜನರನ್ನು ಭಕ್ತಿಯ ಮಾರ್ಗದತ್ತ ಕೊಂಡೋಯುವಂತೆ ಎದ್ದು ಕಾಣುತ್ತಿತ್ತು.

ಮೇರವಣಿಗೆಯಲ್ಲಿ ಸಾಗರದ ಕಾಂತಾರ ಕುಣಿತ, ಶಿವಮೊಗ್ಗದ ಹುಲಿ ಕುಣಿತ, ಸೋಲ್ಲಾಪೂರದ ನಾಶಿಕ ಡೋಲು, ಸಾಗರದ ಡೋಲು ಕುಣಿತ, ಶಿವಮೊಗ್ಗದ ಗೊಂಬೆ ಕುಣಿತ, ಸಿಗಂದೂರಿನ ಯಕ್ಷಗಾನ, ಜೋಗತಿ ಕುಣಿತ, ವಿರಗಾಸಿ ಕುಣಿತ, ಒಳಗೊಂಡಂತೆ ವಿವಿಧ ಕಲಾ ತಂಡಗಳು ಭಾಗವಹಿಸಿ ನೋಡುಗರರ ಗಮನ ಸೇಳೆದವು.

ಈ ಗಣೇಶ ವಿಸರ್ಜನಾ ಶೋಭಾಯಾತ್ರೆಯು ಬಸ್ ನಿಲ್ದಾಣದ ಮುಂಭಾಗದ ರಸ್ತೆಯ ಮೂಲಕ ಶ್ರೀ ಬಸವೇಶ್ವರ ಸರ್ಕಲ್, ಡಾ.ಬಿ.ಆರ್.ಅಂಬೇಡ್ಕರ್ ಸರ್ಕಲ್, ಶ್ರೀ ಅಂಬಾಭವಾನಿ ಮಂದಿರ ರಸ್ತೆ, ಕತ್ರಿ ಬಜಾರ, ಬಾಲಾಜಿ ಮಂದಿರ ರಸ್ತೆ, ಶ್ರೀ ವಿಠ್ಠಲ ಮಂದಿರ, ಶಿವಾಜಿ ಮಹಾರಾಜರ ವೃತ್ತದ ಮೂಲಕ ಮಹಾರಾಣಾಪ್ರತಾಪಸಿಂಹ್ ಸರ್ಕಲ್‌ಗೆ ಆಗಮಿಸಿ ಮುಕ್ತಾಯಗೊಳಿಸಲಾಯಿತು.





**ಜನರ ಆಶಯದಂತೆ ಮಂಡಳಿ ತಿರ್ಮಾನ**

ಗಣೇಶ ಮೂರ್ತಿಯನ್ನು ರಸ್ತೆಗೆ ತಂದು ಕೂಡ್ರಿಸುವದರೊಂದಿಗೆ ಸ್ವಾತಂತ್ರ್ಯ ಸಂಗ್ರಾಮಕ್ಕೆ ಶಕ್ತಿ ತುಂಬಿದ ಬಾಲಗಂಗಾಧರ ತಿಲಕ ಅವರ ಆಸೆ ಮತ್ತು ಕನಸ್ಸನ್ನು ಸಾಕಾರಗೊಳಿಸುವದರ ಜೊತೆಗೆ ಒಗ್ಗಟ್ಟಿನ ಭಲ ತುಂಬುವದು ಮೂಲ ಉದ್ದೇಶವಾಗಿದ್ದರೂ ಕೂಡಾ ಈಗಿನ ಟ್ರೇಂಡ್ ಎಲ್ಲವೂ ಬುಡಮೇಲು ಮಾಡುವಂತೆ ಗಣೇಶ ಉತ್ಸವವಾಗಿಬಿಟ್ಟಿದೆ ಸದ್ಯ ಸಾರಾಯಿ ಕುಡಿದು ಡಿಜೆ ನಾದದ ಮುಂದೆ ಯುವಕರು ಹೆಜ್ಜೆ ಹಾಕಿ ಮೋಜು ಮಸ್ತಿ ಮಾಡುವದು ವಾಡಿಕೆಯಾಗಿ ಇದನ್ನು ಸರಿದಾರಿಗೆ ತರಬೇಕು ಸನಾತನ ಧರ್ಮದ ಪರಂಪರೆ ಉಳಿಯಬೇಕು ಹಿಂದೂ ಸಮಾಜ ಜಾಗೃತಿ ಗೊಳ್ಳಬೇಕೆಂಬ ಉದ್ದೇಶದೊಂದಿಗೆ ಕಳೆದ 12 ವರ್ಷಗಳ ಹಿಂದೆ ತ್ರಿಮೂರ್ತಿ ಶ್ರೀಗಳ ನೇತೃತ್ವದಲ್ಲಿ ಹಿಂದೂ ಮಹಾ ಗಣಪತಿ ಮಹಾ ಮಂಡಳಿಯನ್ನು ರಚಿಸಿ ಪ್ರತಿಷ್ಠಾಪಿಸಲಾದ ಗಣೇಶ ಮೂರ್ತಿಯ ಭವ್ಯ ಶೋಭಾಯಾತ್ರೆಗೆ ಜಿಲ್ಲೆಯ ವಿವಿಧ ಮೂಲೆ ಮೂಲೆಗಳಿಂದ ಜನತೆ ಆಗಮಿಸಿ ವಿಕ್ಷೀಸುತ್ತಾ ಸಾಗಿದ್ದಾರೆ.

ಜನರ ಆಶಯದಂತೆ ಡಿಜೆ ಕುಣಿತಕ್ಕೆ ಬ್ರೇಕ್ ಹಾಕಿ ಡೋಲು, ವಿವಿಧ ಕುಣಿತಗಳನ್ನು ಹೆಚ್ಚಿಸಿ ಜನರ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಎಲ್ಲ ಗಣೇಶ ಮೂರ್ತಿಗಳು ರಾತ್ರಿಹೊತ್ತು ಮೇರವಣಿಗೆ ಪ್ರಾರಂಬಿಸಿ ಮರುದಿನ ನಸುಕಿನ ಜಾವ ವಿಸರ್ಜನೆ ಮಾಡಿದರೆ ಹಿಂದೂ ಮಹಾ ಗಣಪತಿ ಮಹಾ ಮಂಡಳಿಯವರು ಮಧ್ಯಾಹ್ನದ ಸಮಯದಲ್ಲಿಯೇ ಮೇರವಣಿಗೆಗೆ ಚಾಲನೆ ನೀಡಿ ಎಲ್ಲ ನೋಡುಗ ಜನರ ಪ್ರೀತಿಗೆ ಪಾತ್ರರಾಗಿದ್ದಾರೆಂದರೆ ತಪ್ಪಾಗಲಾರದು.

**ದಾರಿಯುದ್ದಕ್ಕೆ ಪ್ರಸಾದ ಸೇವೆ**

ಹಿಂದೂ ಮಹಾ ಗಣಪತಿ ಮಹಾ ಮಂಡಳಿಯ ವತಿಯಿಂದ ನಡೆಯುವ ಗಣೇಶ ಮೂರ್ತಿಯ ವಿಸರ್ಜನಾ ಮೇರವಣಿಗೆ ನಡೆಯುವ ದಾರಿಯುದ್ದಕ್ಕೆ ಅನೇಕ ಯುವಕರು ಅಲ್ಲದೇ ವಿವಿಧ ಸಮಾಜ ಬಾಂದವರು ಕರಿಗಡಬು, ಬೊಂದೆ ಉಂಡಿ, ಅನ್ನ ಪ್ರಸಾದ ಅಲ್ಲದೇ ವಿವಿಧ ತರಹದ ಪ್ರಸಾದದ ವ್ಯವಸ್ಥೆ ಮಾಡಿ ಭಕ್ತಿಯ ಪರಾಕಾಷ್ಠೇಯನ್ನು ಮೇರೆದರು.



ಗಣೇಶ ಮೂರ್ತಿಯ ವಿಸರ್ಜನಾ ಮೇರವಣಿಗೆಯಲ್ಲಿ ಗಮನ ಸೇಳೆದ ಸಾಗರದ ಕಾಂತಾರ ಕುಣಿತ.

## ಸಂಚಾರಿ ದಂಡ: 50 ರಷ್ಟು ರಿಯಾಯತಿ

**ಗದಗ:** ರಾಜ್ಯ ಸರ್ಕಾರವು ಪೊಲೀಸ ಇಲಾಖೆಯ ಸಂಚಾರಿ ಇ-ಚಾನೆಲ್ ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣದ ದಂಡದ ಮೊತ್ತದಲ್ಲಿ ಸೇ 50 ರಷ್ಟು ರಿಯಾಯತಿ ನೀಡಿ ಆದೇಶಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸಿ.ಎಸ್.ಶಿವನಗೌಡ್ರ ತಿಳಿಸಿದ್ದಾರೆ.

ಸೆಪ್ಟೆಂಬರ್ –11 ರವರೆಗೆ ಈ ರಿಯಾಯತಿ ಸೌಲಭ್ಯವು ಇರಲಿದ್ದು, ಸೆಪ್ಟೆಂಬರ್ 13 ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್ ಪ್ರಯುಕ್ತ ಈ ರಿಯಾಯತಿ ನೀಡಲಾಗಿದೆ. ಹಾಗಾಗಿ ಸಾರ್ವಜನಿಕರು ಈ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



**ಯರಗಟ್ಟಿ:** ಸಮೀಪದ ಮುನವಳ್ಳಿ ಪಟ್ಟಣದ ಸಮಾಜ ಸೇವಾ ಸಂಸ್ಥೆಯಾದ ಇನ್ನರ್‌ವ್ಹೀಲ್ ಕ್ಲಬ್ ವತಿಯಿಂದ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗಾಗಿ ಹ್ಯಾಪಿ ಸ್ಕೂಲ್ ಪ್ರೊಜೆಕ್ಟ್ ಹಮ್ಮಿಕೊಳ್ಳಲಾಗಿತ್ತು. ಶಾಲೆಗೆ ಹಾಗೂ ವಿದ್ಯಾರ್ಥಿನಿಯರಿಗೆ ಅವಶ್ಯವಿರುವ ಸಾಮಗ್ರಿಗಳನ್ನು ವಿತರಿಸಲಾಯಿತು.

### ನಾಲ್ಕು ದಿನದ ಹಳಗನ್ನಡ ಸಾಹಿತ್ಯ ಬೋಧನಾ ತರಬೇತಿ ಶಿಬಿರದ ಸಮಾರೋಪ

# ಹಳಗನ್ನಡ ಕನ್ನಡ ಭಾಷೆಯ ಅಸ್ಮಿತೆ: ಡಾ.ಕಟಗಿಹಳ್ಳಿಮಠ

**ಬಾಗಲಕೋಟೆ:** ಹಳಗನ್ನಡ ಕನ್ನಡ ಭಾಷೆಯ ಅಸ್ಮಿತೆಯಾಗಿದ್ದು, ನಾಡಿನ ಸಾಂಸ್ಕೃತಿಕ ಪರಂಪರೆಯ ಅರಿವಿಗೆ ಹಳಗನ್ನಡ ಸಾಹಿತ್ಯ ಓದುವಿಕೆ ಅತ್ಯಗತ್ಯ, ಮಕ್ಕಳಲ್ಲಿ ಪಠ್ಯದ ಜೊತೆಗೆ ಜೀವನದ ಮೌಲ್ಯಗಳಿಂದ ಸಂಸ್ಕಾರ ನೀಡಿ ಎಂದು ಬಿ.ವಿ.ವಿ.ಸಂಘದ ಆಡಳಿತಾಧಿಕಾರಿ ಡಾ.ವಿಜಯಕುಮಾರ ಕಟಗಿಹಳ್ಳಿಮಠ ಹೇಳಿದರು.

ಅವರು ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತಪ್ರತಿಶಾಸ್ತ್ರ ವಿಭಾಗದಡಿಯಲ್ಲಿ ಮತ್ತು ಬಾಗಲಕೋಟೆ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಜಿಲ್ಲಾ ಪದವಿ ಪೂರ್ವ ಕಾಲೇಜುಗಳ, ಕನ್ನಡ ಉಪನ್ಯಾಸಕರ ಒಕ್ಕೂಟ ಬಾಗಲಕೋಟೆ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಬಾಗಲಕೋಟೆ, ಇವರ ಸಹಯೋಗದಲ್ಲಿ ಡಾ. ಡಿ.ಎಲ್. ನರಸಿಂಹಾಚಾರ್ಯ ದತ್ತಿನಿಧಿಯಿಂದ ನಾಲ್ಕು ದಿನಗಳ ಕಾಲ ಬಾಗಲಕೋಟೆ ಜಿಲ್ಲಾ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರಿಗೆ "20ನೇ ಹಳಗನ್ನಡ ಸಾಹಿತ್ಯ ಬೋಧನಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಸಮಾರೋಪ ನುಡಿಗಳನ್ನಾಡಿದ ಅವರು

ಹಂಪಿ ಕನ್ನಡ ವಿಶ್ವವಿದ್ಯಾಲಯ ಇಂಥ ಹಳಗನ್ನಡ ಸಾಹಿತ್ಯ ಭೋಧನಾ ತರಬೇತಿ ಶಿಬಿರಗಳ ಮೂಲಕ ಕನ್ನಡ ಭಾಷಾ ಪರಂಪರೆಯನ್ನು ಮತ್ತಷ್ಟು ಗಟ್ಟಿಗಳಿಸುತ್ತಿದೆ, ಇಂದಿನ ಮಕ್ಕಳಿಗೆ ಪಠ್ಯದ ಜೊತಗೆ ಜೀವನ ನೈತಿಕ ಮೌಲ್ಯಗಳನ್ನು ಕಲಿಸುವ ಸಾಮಾಜಿಕ ಜವಾಬ್ದಾರಿ ಅದ್ಯಾಪಕರಿಗೆ ಇದೆ ಎಂದರು.



ಮುಖ್ಯ ಅತಿಥಯಾಗಿ ಆಗಮಿಸಿದ್ದ ಶಿಕ್ಷಣ ಚಿಂತಕ ಸಿದ್ದರಾಮ ಮನಹಳ್ಳಿ ಮಾತನಾಡಿ ಕನ್ನಡ ಸಾಹಿತ್ಯದ ಆರಂಭವೇ ಹಳಗನ್ನಡದಿಂದಾಗಿರುವಾಗ ಹಳಗನ್ನಡದ ಅರಿವು ಅಗತ್ಯವಾಗಿದ್ದು, ಕನ್ನಡದ ಭಾಷಾ ಭೋದಕ ಸಾಹಿತ್ಯ ಸಂಸ್ಕೃತಿಯ ವಾಹಕನಾಗಿದ್ದಾನೆ ಎಂದರು. ಪ್ರಸ್ತಾವಿಕ ನುಡಿಗಳನ್ನಾಡಿದ ಶಿಬಿರದ ಸಂಚಾಲಕರಾದ ಡಾ.ವೀರೇಶ ಬಡಿಗೇರ ಅವರು ನಾಲ್ಕು ದಿನಗಳ ಈ ಶಿಬಿರದ ಯಶಸ್ವಿಗೆ ಸ್ಪಂಧಿಸಿದ ಮಹನಿಯರಿಗೆ ಕನ್ನಡ ವಿಶ್ವವಿದ್ಯಾಲಯದ ಪರವಾಗಿ ಅಭಿನಂಧನೆ ತಿಳಿಸಿದ ಅವರು ಶಿಬಿರದ ಅನುಭವವನ್ನು ಅದ್ಯಾಪಕರು ತಮ್ಮ ಕ್ಲಾಸನಲ್ಲಿ ಮಕ್ಕಳಿಗೆ ದಾರೆಯರೆದಾಗ ಸಾರ್ಥಕವಾಗುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಹಿರಿಯ ಸಾಹಿತಿ, ಅಖಿಲ ಭಾರತ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರಾದ ಸಂಗಮೇಶ ಕೋಟಿ ಅವರು ಮಾತನಾಡಿ ಇಂದಿನ ಯುವಜನತೆಗೆ ಕನ್ನಡ ನಾಡು ಹಾಗೂ ಸಾಹಿತ್ಯ ಪರಂಪರೆಯ ಅರಿವು ಮೂಡಿಸುವ ಕಾರ್ಯಕ್ರದಲ್ಲಿ ಅದ್ಯಾಪಕರ ಸಂಶೋಧನಾ ಅಧ್ಯಯನ ಹೆಚ್ಚಾಗಬೇಕಿದೆ ಆ ನಿಟ್ಟಿನಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತಪ್ರತಿ ವಿಭಾಗ ಇಂಥ ಶಿಬಿರಗಳ ಮೂಲಕ ಹಳಗನ್ನಡಕ್ಕೆ ಜೀವ ತುಂಬು ಕಾರ್ಯ ಶ್ಲಾಘನೀಯವಾಗಿದೆ ಎಂದರು. ಶಿಬಿರದ ನಿರ್ದೇಶಕರಾದ ಡಾ.ವೀರೇಶ ಬಡಿಗೇರ, ಸಂಚಾಲಕರಾದ ಡಾ.ಚಂದ್ರಶೇಖರ ಕಾಳನ್ನವರ, ಡಾ.ಸಿದ್ದರಾಮ ಖಾನಾಪುರ ಹಾಗೂ ಸಂಗಮೇಶ ಬ್ಯಾಳಿ,ಸಂತೋಷ ಕಾಳನ್ನವರ, ಸಂಗಮೇಶ ಬಡಿಗೇರ ಸೇರಿದಂತೆ 60ಕ್ಕೂ ಹೆಚ್ಚು ಶಿಬಿರಾರ್ಥಿಗಳು ಭಾಗವಹಸಿದ್ದರು.

ಶಿಬಿರದ ಸಮಾರೋಪ ಸಮಾರಂಭದಲ್ಲಿ ಅತಿಥಿಗಳಾಗಿ ಬಾಗಲಕೋಟೆ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ, ಹುನಗುಂದ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಲ್ಲಿಕಾರ್ಜುನ ಸಜ್ಜನ, ನಿವೃತ್ತ ಕೃಷಿ ಅದಿಕಾರಿ ಹೆಚ್.ಬಿ.ಗೊರವ, ಶಿಕ್ಷಣ ಚಿಂತಕ ಸಿ.ಎನ್.ಬಾಳಕ್ಕನವರ ಪಾಲ್ಗೊಂಡಿದ್ದರು, ಇವರು ಹಳಗನ್ನಡ ಸಾಹಿತ್ಯ ಶಿಬಿರಕ್ಕೆ ಶಿಬಿರಕ್ಕೆ ಸಹಕಾರ ನೀಡಿರುವ ನಿಮಿತ್ತ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಹಳಗನ್ನಡ ಸಾಹಿತ್ಯ ಶಿಬಿರದಲ್ಲಿ ಶಿಬಿರಾರ್ಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾ ಪದವಿ ಪೂರ್ವ ಕಾಲೇಜಿನ 60 ಕನ್ನಡ ಉಪನ್ಯಾಸಕರಿಗೆ ಪ್ರಮಾಣ ಪತ್ರ ನೀಡಲಾಯಿತು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :180, Postal Reg No. PMG/KA/NK/BM/135/25-27 / POST AT Vantamury Colony Post Office